PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily ವಿಜಯ ಧ್ವನಿ ಕನ್ನಡ ದಿನಪತ್ರಿಕೆ ₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 868 | ಸಂಚಿಕೆ–868 | Monday, March 23, 2026 | ಸೋಮವಾರ, ಮಾರ್ಚ್ 23, 2026 | Pages- 8 | ಪುಟಗಳು–8

## ಶುಭ ಮುಂಜಾವು

ಉತ್ಸಾಹ ಇಲ್ಲದ ಹೊರತು ಸಾಧನೆ ಅಸಾಧ್ಯ.
–ಎಮರ್ಸನ್

ಜ್ಞಾನಕ್ಕಿಂತ, ಕಲ್ಪನೆಯೇ ಹೆಚ್ಚು ಮುಖ್ಯವಾದುದು.
–ಆಲ್ಬರ್ಟ್ ಐನ್‌ಸ್ಟೀನ್

ನೋವೆಲ್ಲಾ ಜೀವಕ್ಕೆ ಪುಟವಿಡುವ ಪಾಕ.
– ಕನ್‌ಫ್ಯೂಷಿಯಸ್

ವಸತಿ ಶಾಲೆಗಳಲ್ಲಿ ಡಿಜಿಟಲ್ ಸೌಲಭ್ಯ– ವಿದ್ಯಾರ್ಥಿಗಳಲ್ಲಿ ನಾಗರಿಕ ಚೇತನ ಹೆಚ್ಚಿಸುವ ಉಪಕ್ರಮ 02

"ಜಿಬಿಎ ಚುನಾವಣೆಗೆ ವೀರಶೈವ ಲಿಂಗಾಯಿತರಿಗೆ ಟಿಕೆಟ್ ನೀಡಲು ಮೋಹನ್ ಕುಮಾರ್ ಒತ್ತಾಯ" 05

ಶ್ರೀ ನರೇಂದ್ರಾಚಾರ್ಯಜಿ ಮಹಾರಾಜರಿಂದ 'ಮನುಷ್ಯ ದೈವತ್ವದ ಕಡೆಗೆ' ದಿವ್ಯ ಸಂದೇಶ 07

# ಉಪಚುನಾವಣೆಗೆ ಒಮ್ಮತದಿಂದ ಅಭ್ಯರ್ಥಿಗಳ ಆಯ್ಕೆ: ಡಿಸಿಎಂ ಡಿ.ಕೆ. ಶಿವಕುಮಾರ್



ಬೆಂಗಳೂರು : ಬಾಗಲಕೋಟೆ ವಿಧಾನಸಭೆ ಟಿಕೆಟ್ ಅನ್ನು ಎಚ್.ವೈ. ಮೇಟಿ ಅವರ ಎರಡನೇ ಮಗ ಉಮೇಶ್ ಮೇಟಿ ಅವರಿಗೆ ಹಾಗೂ ದಾವಣಗೆರೆ ದಕ್ಷಿಣ ಟಿಕೆಟ್ ಅನ್ನು ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿದ್ದ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಮಲ್ಲಿಕಾರ್ಜುನ ಅವರಿಗೆ ನೀಡಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು.

'ನಾನು, ಮುಖ್ಯಮಂತ್ರಿಯವರು ಹಾಗೂ ಜಮೀರ್ ಅಹಮದ್, ನಾಸೀರ್ ಹುಸೇನ್, ಸಲೀಂ ಅಹ್ಮದ್, ಹುಸೇನ್, ಹ್ಯಾರಿಸ್, ಜಬ್ಬಾರ್ ಅವರು ಎಲ್ಲ ಅಲ್ಪಸಂಖ್ಯಾತ ನಾಯಕರು, ಎಐಸಿಸಿ ಕಾರ್ಯದರ್ಶಿಗಳ ಜತೆ ಮಾತನಾಡಿ ಒಮ್ಮತದ ತೀರ್ಮಾನಕ್ಕೆ ಬಂದು ಶಾಮನೂರು ಅವರ ಕುಟುಂಬಕ್ಕೆ ಅವಕಾಶ ಮಾಡಿಕೊಡಲಾಗಿದೆ. ಒಗ್ಗಟ್ಟಿನಿಂದ ಚುನಾವಣೆ ಮಾಡಿ ಎರಡೂ ಕ್ಷೇತ್ರಗಳನ್ನು ಗೆಲ್ಲಿಸಿಕೊಂಡು ಬರುವ ತೀರ್ಮಾನ ಮಾಡಲಾಗಿದೆ" ಎಂದರು.

ಸೋಮವಾರ ನಾಮಪತ್ರ ಸಲ್ಲಿಕೆ ಸಮಾರಂಭದಲ್ಲಿ ಭಾಗಿ

"ಮಗನ ಬಿ ಫಾರಂ ಅನ್ನು ತಂದೆಯವರಾದ ಎಸ್.ಎಸ್.ಮಲ್ಲಿಕಾರ್ಜುನ ಅವರ ಕೈಯಲ್ಲಿ ಕೊಡಲಾಗಿದೆ. ಸೋಮವಾರ ದಾವಣಗೆರೆ ಹಾಗೂ ಬಾಗಲಕೋಟೆಗೆ ನಾನು ಹಾಗೂ ಮುಖ್ಯಮಂತ್ರಿಯವರು ತೆರಳಿ ನಾಮಪತ್ರ ಸಲ್ಲಿಕೆ ಸಮಾರಂಭದಲ್ಲಿ ಭಾಗವಹಿಸುತ್ತೇವೆ. ಟಿಕೆಟ್ ವಿಚಾರವಾಗಿ ಮಾಧ್ಯಮಗಳು ಮಾಡುತ್ತಿದ್ದ ವಿಭಿನ್ನ ಚರ್ಚೆಗಳಿಗೆ ತೆರೆ ಎಳೆಯಲಾಗಿದೆ. ಹೈಕಮಾಂಡ್ ಟಿಕೆಟ್ ಹಂಚಿಕೆ ಬಗ್ಗೆ ತಡರಾತ್ರಿ ತಿಳಿಸಿತು" ಎಂದರು.

"ಬುಧವಾರ ಶಾಸಕಾಂಗ ಪಕ್ಷದ ಸಭೆಯನ್ನು ನಿಗಧಿ ಮಾಡಲಾಗಿದೆ. ಎಐಸಿಸಿ ಕಾರ್ಯದರ್ಶಿಗಳು ಸಹ ಸಭೆಯಲ್ಲಿ ಭಾಗವಹಿಸಲಿದ್ದಾರೆ"ಎಂದರು.

ಅಲ್ಪಸಂಖ್ಯಾತರು ಟಿಕೆಟ್ ಕೇಳುವುದು ತಪ್ಪಿಲ್ಲ

ಅಲ್ಪಸಂಖ್ಯಾತರು ಸಮಾಧಾನಗೊಂಡಿದ್ದಾರೆಯೇ ಎಂದು ಕೇಳಿದಾಗ, "ಅವರುಗಳು ಟಿಕೆಟ್ ಕೇಳುವುದರಲ್ಲಿ ತಪ್ಪಿಲ್ಲ. ಜನಸಂಖ್ಯೆ ಆಧಾರದ ಮೇಲೆ ಕೇಳುತ್ತಿದ್ದಾರೆ. ಅವರದ್ದು ತಪ್ಪಿಲ್ಲ. ದಿನಾಂಕ ಚೆನ್ನಾಗಿದೆ ಎಂದು ನಾಮಪತ್ರ ಸಲ್ಲಿಕೆ ಮಾಡಿರುವುದಾಗಿ ಮಲ್ಲಿಕಾರ್ಜುನ್ ಅವರು ಹೇಳಿದರು. ನಮಗೂ ನಂಬಿಕೆ ಇದ್ದಂತೆ ಅವರಿಗೂ ಇದೆ. ಪಕ್ಷ ಹೇಳಿದರೆ ವಾಪಸ್ ಪಡೆಯುವುದಾಗಿ ತಿಳಿಸಿದ್ದಾರೆ. ಸಮರ್ಥ್ ಅವರ ತಾಯಿ ಪ್ರಭಾ ಮಲ್ಲಿಕಾರ್ಜುನ ಅವರಿಗೂ ಸಂಸದ ಸ್ಥಾನಕ್ಕೆ ನಿಲ್ಲಲು ಇಷ್ಟ ಇರಲಿಲ್ಲ. ಒತ್ತಾಯದಿಂದ ನಿಲ್ಲಿಸಿದ್ದು. ಮಲ್ಲಿಕಾರ್ಜುನ್ ಅವರಿಗೂ ಇಷ್ಟ ಇರಲಿಲ್ಲ. ಈಗ ಅವರು ಪಕ್ಷದ ಆಸ್ತಿಯಾಗಿ ಬೆಳೆಯುತ್ತಿದ್ದಾರೆ" ಎಂದರು.

ಅಲ್ಪಸಂಖ್ಯಾತರು ಏನಾದರೂ ಬೇಡಿಕೆಗಳನ್ನು ಇಟ್ಟಿದ್ದಾರೆಯೇ ಎಂದು ಕೇಳಿದಾಗ, "ಕೇಳ್ತಾರೆ, ಪಕ್ಷ ಏನು ಹೇಳುತ್ತದೆಯೋ ಅದಕ್ಕೆ ಮಲ್ಲಿಕಾರ್ಜುನ್ ಅವರೂ ಬದ್ಧರಾಗಿದ್ದಾರೆ. ನಾನೂ ಬದ್ಧನಾಗಿದ್ದೇನೆ. ಕನಕಪುರದಲ್ಲಿ ನಿಲ್ಲಬೇಡ ಅಂದ್ರೆ ನಾನೂ ನಿಲ್ಲಲ್ಲ" ಎಂದರು.

ಅಲ್ಪಸಂಖ್ಯಾತ ಸಮುದಾಯದ ಗೊಂದಲ ನಿವಾರಣೆ ಆಗಿದೆಯೇ ಎಂದು ಕೇಳಿದಾಗ, "ಆಸೆ ಪಡುವುದು ತಪ್ಪಲ್ಲ. ಮೇಟಿ ಕುಟುಂಬದಲ್ಲಿ ನನಗೆ ಮಲ್ಲಿಕಾರ್ಜುನ ಅವರಿಗೆ ನೀಡುವುದಕ್ಕೆ ಆಸೆಯಿತ್ತು. ಜಿಲ್ಲಾ ಪಂಚಾಯತಿ ಸದಸ್ಯೆಯಾದ ಇನ್ನೊಬ್ಬ ಮಗಳು ಟಿಕೆಟ್ ಕೇಳಿದ್ದರು. ಇನ್ನೊಬ್ಬ ಮಗಳು ಸೇರಿದಂತೆ ಒಟ್ಟು ಅವರ ಕುಟುಂಬದಲ್ಲಿಯೇ ನಾಲ್ಕು ಜನ ಕೇಳಿದ್ದರು. ಕುಟುಂಬದಲ್ಲಿಯೇ ಆಸೆ ಇರುವಾಗ ಬೇರೆಯವರಿಗೂ ಇರುತ್ತದೆ. ಬಾಗಲಕೋಟೆಗೆ ಬೇರೆ, ಬೇರೆ ಹೆಸರುಗಳೂ ಬಂದಿತ್ತು" ಎಂದರು.

ಬಿಜೆಪಿ ಜೆಡಿಎಸ್ ಅವರು ಅಲ್ಪಸಂಖ್ಯಾತ ಅಭ್ಯರ್ಥಿಗಳನ್ನು ನಿಲ್ಲಿಸುತ್ತಿರುವ ಬಗ್ಗೆ ಕೇಳಿದಾಗ, "ಗೊತ್ತು, ಈ ಎಲ್ಲಾ ಪ್ರಯತ್ನ ನಡೆಯುತ್ತಾ ಇದೆ. ರಾಜಕಾರಣ ಅಂದ ಮೇಲೆ ಅವರು ಡಿಫರೆನ್ಸ್ ಉಂಟು ಮಾಡುತ್ತಾರೆ, ನಾವೂ ಮಾಡುತ್ತೇವೆ. ಅವರಲ್ಲಿ ಒಮ್ಮತ ಇದೆಯೇ? ಇಬ್ಬರು ಗಲಾಟೆ ಮಾಡಿದ್ದಕ್ಕೆ ಮೂರನೆಯವರಿಗೆ ನೀಡಿದ್ದಾರೆ. ನಾನು ಏಕೆ ಅದನ್ನು ಚರ್ಚೆ ಮಾಡಲು ಹೋಗಲಿ. ಅದು ಅವರ ಪಕ್ಷದ ತೀರ್ಮಾನ, ಇದು ನಮ್ಮ ಪಕ್ಷದ ತೀರ್ಮಾನ" ಎಂದರು.

ಪ್ರತಿಪಕ್ಷಗಳ ಅಭ್ಯರ್ಥಿಗಳು ಸಮರ್ಥರಿದ್ದಾರೆಯೇ ಎಂದು ಕೇಳಿದಾಗ, "ನಮ್ಮದು ನಮಗೆ, ಅವರದ್ದು ಅವರಿಗೆ. ಬೇರೆ ಪಕ್ಷಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಹೋಗುವುದಿಲ್ಲ. ಯಾವ ಅಭ್ಯರ್ಥಿಗಳನ್ನು ಸಹ ಬೇಕಾದರೂ ಹಾಕಲಿ" ಎಂದರು.

"ದಾವಣಗೆರೆಗೆ ಶಿವಶಂಕರಪ್ಪ ಅವರು ಮಾಡಿರುವ ಸೇವೆ,

7ನೇ ಪುಟಕ್ಕೆ

## ಗ್ಯಾಸ್ ಸಮಸ್ಯೆ ಹೆಚ್ಚಳ ರೈತರು ಯಥನಾಲ್ ಉತ್ಪಾದನೆ ಮಾರಾಟಕ್ಕೆ ರೈತರಿಗೆ ಅವಕಾಶ ಕೊಡಲಿ: ಕುರುಬೂರು ಶಾಂತಕುಮಾರ್

ನವದೆಹಲಿ : ಯುದ್ಧಭೀತಿಯಿಂದ ದೇಶಾದ್ಯಂತ ಗ್ಯಾಸ್ ವಿತರಣೆ ಅಭಾವ ಸೃಷ್ಟಿಯಾಗಿದೆ. ಅನಿಲ ಸಿಲಿಂಡರ್ ಗಳನ್ನ ಪೂರೈಸುತ್ತೇವೆ ಎಂದು ಮನೆ ಮನೆಗೆ ಉಜ್ವಲ ಯೋಜನೆಯ ಅಡಿಯಲ್ಲಿ ಸಿಲಿಂಡರ ಗ್ಯಾಸ್ ಸ್ಟವ್ ವಿವರಣೆ ಮಾಡಿತು ಆದರೆ ಈಗ ವಿದೇಶ ಅನಿಲ ಪೂರೈಕೆ ಯುದ್ಧಭೀತಿಯಿಂದ ಪೂರೈಕೆ ಕಡಿಮೆಯಾಗಿ ಜನರನ್ನ ಆತಂಕಕ್ಕೆ ಈಡು ಮಾಡಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ತಿಳಿಸಿದ್ದಾರೆ.

ಈ ಸಂಬಂಧ ಪ್ರಕಟಣೆ ಮೂಲಕ ತಿಳಿಸಿರುವ ಅವರು, ಇಂತಹ ಸಂದರ್ಭದಲ್ಲಿ ವಿದೇಶಿ ವಿನಿಮಯ ಉಳಿಸಲು ದೇಶಿಯ ಯಥನಾಲ್ ಉತ್ಪಾದನೆ ಹಾಗೂ ಮಾರಾಟಕ್ಕೆ ರೈತರಿಗೆ ರಹದಾರಿ ನೀಡಿ ಉತ್ತೇಜಿಸಬೇಕು ಎಂದು ತಿಳಿಸಿದ್ದಾರೆ.

ಗ್ಯಾಸ್ ಸಿಲಿಂಡರ್ ಗೆ ನೀಡುತ್ತಿದ್ದ ಸಬ್ಸಿಡಿಯನ್ನು ಯತನಾಲ್ ಉತ್ಪಾದನೆ ಮಾಡುವ ರೈತರಿಗೂ ನೀಡಬೇಕು ಇದರಿಂದ ರೈತರ ಆದಾಯ ಹೆಚ್ಚುತ್ತದೆ ಇದರ ಜೊತೆಗೆ ದೇಶದ ಅನಿಲ ಕೊರತೆ ಕಡಿಮೆಯಾಗಿ ವಿದೇಶಿ ವಿನಿಮಯ ಹಣ ಉಳಿತಾಯವಾಗುತ್ತದೆ.

## ವಿಮಾನಯಾನ ಸಂಸ್ಥೆಗಳಿಗೆ 50 ಶತಕೋಟಿ ಡಾಲರ್ ನಷ್ಟ

ನವದೆಹಲಿ: ಅಮೆರಿಕ–ಇಸ್ರೇಲ್–ಇರಾನ್ ಭೀಕರ ಯುದ್ಧದ ಪರಿಣಾಮದಿಂದಾಗಿ ವಿಮಾನಯಾನ ಸಂಸ್ಥೆಗಳಿಗೆ ಬರೋಬ್ಬರಿ 50 ಶತಕೋಟಿ ಡಾಲರ್ ನಷ್ಟವಾಗಿದೆ. ವಿಶ್ವದ 20 ಅತಿದೊಡ್ಡ ವಿಮಾನಯಾನ ಸಂಸ್ಥೆಗಳು 53 ಶತಕೋಟಿ ಮೌಲ್ಯವನ್ನು ಕಳೆದುಕೊಂಡಿವೆ ಎಂದು ವರದಿಯಾಗಿದೆ.

ಕೋವಿಡ್ ನಂತರ ಆರ್ಥಿಕ ಬಿಕ್ಕಟ್ಟಿನಲ್ಲಿದ್ದ ಸಂಸ್ಥೆಗಳಿಗೆ ಮತ್ತೊಂದು ಹೊಡೆತ ಬಿದ್ದಿದೆ. ಆದರೆ, ದೇಶದಲ್ಲಿ ವಿಮಾನ ಟಿಕೆಟ್ ದರಗಳು ದುಬಾರಿಯಾಗುವ ಸಾಧ್ಯತೆ ಇದೆ ಎಂದು ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಸುಳಿವು ನೀಡಿದ್ದಾರೆ.

ಜಾಗತಿಕವಾಗಿ ತೈಲ ಬೆಲೆ ಏರ್ ಟರ್ಬೈನ್ ಇಂಧನ ಮೇಲೆ ಪರಿಣಾಮ ಬೀರಿದೆ. ಏಪ್ರಿಲ್ 1ರಿಂದ ಹೊಸ ಪ್ರಯಾಣ ದರ ಪರಿಷ್ಕರಣೆ ಆಗಲಿದೆ ಎಂದಿದ್ದಾರೆ. ಈಗಾಗಲೇ ಕೆಲ ವಿಮಾನಯಾನ ಸಂಸ್ಥೆಗಳು ದರ ಹೆಚ್ಚಿಸಿವೆ.

## 50 ಕೆಜಿ ಗೋಲ್ಡ್ ಸಾಗಣೆಗೆ ಉಗಾಂಡ ವ್ಯಕ್ತಿ ಜೊತೆ ಡೀಲಿಂಗ್

ಬೆಂಗಳೂರು: ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣ ಸಂಬಂಧ 50 ಕೆಜಿ ಚಿನ್ನ ಸಾಗಣೆಗೆ ಉಗಾಂಡ ಮೂಲದ ಏಜೆಂಟ್ ಜೊತೆ ರನ್ಯಾ ರಾವ್ ಸಂಪರ್ಕದಲ್ಲಿದ್ದ ವಿಚಾರ ಇದೀಗ ಬೆಳಕಿಗೆ ಬಂದಿದೆ.



ಸುಮಾರು 102.55 ಕೋಟಿ ರೂ. ಮೌಲ್ಯದ ಚಿನ್ನವನ್ನು ಅಕ್ರಮವಾಗಿ ಭಾರತಕ್ಕೆ ಸಾಗಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇ.ಡಿ ಬುಧವಾರ ನ್ಯಾಯಾಲಯಕ್ಕೆ ಸುದೀರ್ಘ ಚಾರ್ಜ್‌ಶೀಟ್ ಸಲ್ಲಿಸಿದೆ. ಇದರಲ್ಲಿ ಉಗಾಂಡಾ ಮೂಲದ ಏಜೆಂಟರೊಂದಿಗೆ ನಟಿ ನಡೆಸಿದ್ದ ಡೀಲಿಂಗ್ ಬಗ್ಗೆ ಆಘಾತಕಾರಿ ಮಾಹಿತಿ ಲಭ್ಯವಾಗಿದೆ. ತನಿಖಾ ವರದಿಗಳ ಪ್ರಕಾರ, ರನ್ಯಾ ರಾವ್ ಕೇವಲ ದುಬೈನಿಂದ ಮಾತ್ರವಲ್ಲದೆ, ಆಫ್ರಿಕನ್ ರಾಷ್ಟ್ರಗಳಿಂದಲೂ ಚಿನ್ನ ಪಡೆಯಲು ಸಂಚು ರೂಪಿಸಿದ್ದರು. ಇದಕ್ಕಾಗಿ ಅವರು ಉಗಾಂಡಾ ಮೂಲದ ಏಜೆಂಟ್ ಜೊತೆ ನಿರಂತರ ಸಂಪರ್ಕದಲ್ಲಿದ್ದರು ಎನ್ನಲಾಗಿದೆ. ಆರಂಭದಲ್ಲಿ 5 ಕೆಜಿ ಚಿನ್ನವನ್ನು ಪ್ರಾಯೋಗಿಕವಾಗಿ ಸಾಗಿಸಲು ಯತ್ನಿಸಿದ್ದ ಈ ತಂಡ, ನಂತರ ಬರೋಬ್ಬರಿ 50 ಕೆಜಿ ಚಿನ್ನದ ಸಾಗಣೆಗೆ ಉಗಾಂಡಾ ಏಜೆಂಟ್ ಜೊತೆ ಡೀಲಿಂಗ್ ಕುದುರಿಸಿತ್ತು. ಇದಕ್ಕಾಗಿ ದುಬೈನಲ್ಲಿ 'ವೀರಾ ಡೈಮಂಡ್ಸ್ ಟ್ರೇಡಿಂಗ್' ಎಂಬ ಹೆಸರಿನ ಕಂಪನಿಯನ್ನು ಕೂಡ ತೆರೆಯಲಾಗಿತ್ತು.

## ಯುಎನ್‌ಐ ಸುದ್ದಿ ಸಂಸ್ಥೆಯ ಮೇಲೆ ದಾಳಿಗೆ ಕೆಯುಡಬ್ಲ್ಯೂಜೆ ಖಂಡನೆ

ಬೆಂಗಳೂರು: ದೆಹಲಿಯಲ್ಲಿ UNI ಸುದ್ದಿ ಸಂಸ್ಥೆಯ ಮೇಲೆ ಪೊಲೀಸರು ನಡೆಸಿರುವ ದಾಳಿಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತೀವ್ರವಾಗಿ ಖಂಡಿಸುತ್ತದೆ. ಈ ಕ್ರಮವು ಮಾಧ್ಯಮ ಸ್ವಾತಂತ್ರ್ಯಕ್ಕೆ ಧಕ್ಕೆ ತರುವಂತದ್ದಾಗಿದ್ದು, ಪ್ರಜಾಪ್ರಭುತ್ವದ ಮೂಲ ಮೌಲ್ಯಗಳಿಗೂ ವಿರುದ್ಧವಾಗಿದೆ.

ಪತ್ರಕರ್ತರ ಖಾಸಗಿ ವಸ್ತುಗಳನ್ನು ತೆಗೆದುಕೊಳ್ಳಲು ಅವಕಾಶ ನೀಡದೆ, ಮಹಿಳೆ ಎನ್ನುವುದನ್ನೂ ಲೆಕ್ಕಿಸದೇ ನಡೆಸಿದ ವರ್ತನೆ ಅಕ್ಷಮ್ಯ ಮತ್ತು ಖಂಡನೀಯ. ಈ ಘಟನೆ ಮಾಧ್ಯಮಗಳ ಮೇಲೆ ಅನಗತ್ಯ ಒತ್ತಡ ಹೇರಲು ಪ್ರಯತ್ನಿಸಿರುವುದನ್ನು ಸ್ಪಷ್ಟಪಡಿಸುತ್ತದೆ. ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು ಹಾಗೂ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಆಗ್ರಹಿಸಿದ್ದಾರೆ

## ಕೆರೆ ಹೂಳೆತ್ತಲು ರಾಜ್ಯ ಸರ್ಕಾರ ಪ್ರತ್ಯೇಕ ಹಣ ಮೀಸಲಿಡಬೇಕು : ಬಸವರಾಜ ಬೊಮ್ಮಾಯಿ


ನಮ್ಮ ಹೊಲ, ನಮ್ಮ ಕೆರೆ ಭಾವನೆ ಬೆಳೆಸಿಕೊಂಡರೆ ಗ್ರಾಮ ಸುರಾಜ್ಯ:ಬಸವರಾಜ ಬೊಮ್ಮಾಯಿ

ಹಾವೇರಿ(ಶಿಗ್ಗಾವಿ) : ರಾಜ್ಯ ಸರ್ಕಾರಕ್ಕೆ ರೈತರನ್ನು ಉಳಿಸಿಕೊಳ್ಳಬೇಕೆಂಬ ಮನಸಿದ್ದರೆ ಕರೆಗಳನ್ನು ಉಳಿಸಬೇಕು. ಕೆರೆಗಳನ್ನು ಸರಿಯಾಗಿ ನಿರ್ವಹಣೆ ಮಾಡಿದರೆ ಪ್ರವಾಹ ಆಗುವುದಿಲ್ಲ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಕೆರೆ ಹೂಳು ತೆಗೆಯಲು 200 ಕೋಟಿ ರೂ. ಇಟ್ಟಿದ್ದರು. ಅದೇ ರೀತಿ ಕೆರೆ ಹೂಳು ತೆಗೆಯಲು ರಾಜ್ಯ ಸರ್ಕಾರ ಪತ್ಯೇಕ ಹಣ ಮೀಸಲಿಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಶಿಗ್ಗಾವಿ ಸವಣೂರು ತಾಲೂಕುಗಳು ಕೆರೆಗಳಿಂದ ಕೂಡಿವೆ. ಸುಮಾರು ಐನೂರು ಕೆರೆಗಳಿವೆ. ಅವುಗಳಲ್ಲಿ ಕನಿಷ್ಟ 100 ದೊಡ್ಡ ಕೆರೆಗಳಿವೆ. 150 ಕ್ಕಿಂತ ಹೆಚ್ಚು ದೊಡ್ಡ ಮತ್ತು ಸಣ್ಣ ಕೆರೆಗಳಿಗೆ ನೀರು ತುಂಬಿಸುವ ಕೆಲಸ ಮಾಡಬೇಕು. 2015, 16, 17 ರಲ್ಲಿ ಬರಗಾಲ ಸಂದರ್ಭದಲ್ಲಿ ದೊಡ್ಡ ಪ್ರಮಾಣದಲ್ಲಿ ಕೆರೆ ಹೂಳು ತೆಗೆಯುವ ಕೆಲಸ ಆಯಿತು. ಇಂತಹ ಭಗೀರಥ ಕೆಲಸಕ್ಕೆ ಭಾರತ ಸೇವಾ ಸಂಸ್ಥೆ ಕೆರೆಗಳ ಹೂಳು ತೆಗೆಯಲು ದೊಡ್ಡ ಸಹಾಯ ಮಾಡಿದೆ. ಎರಡು ಮೂರು ವರ್ಷದಿಂದ ಒಳ್ಳೆಯ ಮಳೆಯಾಗಿದೆ. ಆದ್ದರಿಂದ ಹೂಳು ತೆಗೆಯಲು ಆಗಿರಲಿಲ್ಲ. ಈ ವರ್ಷ ಬೇಸಿಗೆಗೆ ಕೆರೆ ಬತ್ತಿ ಹೋಗಿರುವುದರಿಂದ ಮತ್ತೆ ಹೂಳು ತೆಗೆಯುವ ಕೆಲಸ ಮಾಡಲು ಶ್ರೀಕಾಂತ ದುಂಡಿಗೌಡರು ಭಾರತ ಸೇವಾ ಸಂಸ್ಥೆ ವತಿಯಿಂದ ಹೂಳು ತೆಗೆಯುವ ಕೆಲಸ ಮಾಡಿದ್ದಾರೆ. ಪ್ರತಿಯೊಂದು ಜಿಲ್ಲಾ ಪಂಚಾಯತಿಯಲ್ಲಿ ಕನಿಷ್ಟ ಒಂದು ಕೆರೆ ಹೂಳೆತ್ತುವ ತೀರ್ಮಾನ ಮಾಡಿದ್ದಾರೆ. ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಇದರಿಂದ ಪ್ರೇರಣೆ ಪಡೆದು ಇನ್ನಷ್ಟು ಜನರು ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಹೂಳು ತೆಗೆಯುವ ಕೆಲಸ ಮಾಡಿದರೆ ನಮ್ಮ ಹೊಲ, ನಮ್ಮ ಮನೆ ಎನ್ನುವ ಭಾವನೆ ಇದೆ. ಅದೇ ರೀತಿ ನಮ್ಮ ಹೊಲ, ನಮ್ಮ ಮನೆ, ನಮ್ಮ ಕೆರೆ ನಮ್ಮ ಊರು ಎಂಬ ಭಾವನೆ ಬೆಳೆಸಿಕೊಂಡರೆ ಹಳ್ಳಿಗಳು ನಮಗೆ ಗ್ರಾಮ ಸ್ವರಾಜ್ಯ ಸಿಕ್ಕಿದೆ. ಸ್ವರಾಜ್ಯದಿಂದ ಸುರಾಜ್ಯ ಆಗುತ್ತವೆ. ಆ ನಿಟ್ಟಿನಲ್ಲಿ ಶ್ರೀಕಾಂತ ಅವರ ಪ್ರಯತ್ನಕ್ಕೆ ಅಭಿನಂದನೆ ಸಲ್ಲಿಸುತ್ತೇನೆ. ಎಂದು ಹೇಳಿದರು.

ಕೆರೆ ಹೂಳೆತ್ತಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು



ಕೆರೆಗಳಿಗೆ ಫ್ಲಡ್ ಕ್ಯಾರಿಯರ್ಸ್ ಅನ್ನುತ್ತಾರೆ. ಕೆರೆಗಳನ್ನು ಸರಿಯಾಗಿ ನಿರ್ವಹಣೆ ಮಾಡಿದರೆ ಪ್ರವಾಹ ಆಗುವುದಿಲ್ಲ, ರಾಜ್ಯ ಸರ್ಕಾರಕ್ಕೆ ರೈತರನ್ನು ಉಳಿಸಿಕೊಳ್ಳಬೇಕೆಂಬ ಮನಸಿದ್ದರೆ ಕೆರೆಗಳನ್ನು ಉಳಿಸಬೇಕು ಎಂದು ಹೇಳಿದರು.

ಎರಡೂ ಕ್ಷೇತ್ರದಲ್ಲಿ ಜಯ

ಉಪ ಚುನಾವಣೆಯ ಕುರಿತು ಕೇಳಿದ ಪ್ರಶ್ನೆಗೆ ಪತಿಕ್ರಿಯಿಸಿದ ಅವರು, ನಾವು ಬಹಳ ಲೆಕ್ಕಾಚಾರ ಹಾಕಿ ದಾವಣಗೆರೆಯಲ್ಲಿ ಟಿಕೆಟ್ ನೀಡಿದ್ದೇವೆ. ಬರುವಂತಹ ದಿನಗಳಲ್ಲಿ ಬಡವರು, ಎಸ್ಸಿ ಎಸ್ಟಿ ಜನರಿಂದ ದೊಡ್ಡ ಪ್ರಮಾಣದಲ್ಲಿ ಬೆಂಬಲ ಸಿಗುತ್ತದೆ.

## ಇಲಾಖಾ ತನಿಖೆ ವರದಿ ನಂತರ ಡಿಜಿಪಿ ರಾಮಚಂದ್ರರಾವ್ ಮೇಲೆ ಕಠಿಣ ಕ್ರಮ : ಪರಮೇಶ್ವರ್



ಬೆಂಗಳೂರು : ಡಿಜಿಪಿ ರಾಮಚಂದ್ರ ರಾವ್ ಅವರ ರಾಸಲೀಲೆಯ ವಿಡಿಯೋ ಆಧಾರದ ಮೇಲೆ ಇಲಾಖಾ ತನಿಖೆ ನಡೆಯಲಿದ್ದು, ವರದಿ ನಂತರ ಸೂಕ್ತಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೈರಲ್ ವಿಡಿಯೋಗಳು ಅಸಲಿ ಎಂದು ಫೊರೆನ್ಸಿಕ್ ಸೈನ್ಸ್ ಲ್ಯಾಬ್ (ಎಫ್‌ಎಸ್‌ಎಲ್) ವರದಿ ಕುರಿತಾಗಿ ಪ್ರತಿಕ್ರಿಯಿಸಿದರು. ಸಾಮಾಜಿಕ ಜಾಲತಾಣಗಳಲ್ಲಿ ಬೆಳಕಿಗೆ ಬಂದ ವಿಡಿಯೋಗಳು ಎಐ ಸೃಷ್ಟಿಯೆಂದು ರಾಮಚಂದ್ರರಾವ್ ಹೇಳಿದ್ದರು.

ಈ ಹಿನ್ನೆಲೆಯಲ್ಲಿ ವಿಡಿಯೋಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿತ್ತು. ಇನ್ನೂ ಮುಂದೆ ಇಲಾಖಾ ವಿಚಾರಣೆ ನಡೆಯಲಿದೆ. ರಾಮಚಂದ್ರ ರಾವ್ ಏನು ಹೇಳುತ್ತಾರೆ ಎಂದು ಕೇಳಬೇಕಾಗುತ್ತದೆ. ಇಲಾಖಾ ವಿಚಾರಣಾ ವರದಿ ಸರ್ಕಾರಕ್ಕೆ ಸಲ್ಲಿಕೆಯಾದ ಬಳಿಕ ಅದನ್ನು ಆಧರಿಸಿ ಸರ್ಕಾರ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

ಪಾವಗಡದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯ ಆತಹತ್ಯೆ ಪ್ರಕರಣ ಕುರಿತು ಮಾತನಾಡಿದ ಸಚಿವರು, ಇಲಾಖಾ ಮಟ್ಟದಲ್ಲಿ ಸಂಪೂರ್ಣ ಪರಿಶೀಲನೆ ನಡೆಯಲಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ನೀಡಬೇಕು.

ಮೃತಪಟ್ಟವರು ಜಂಟಿ ನಿರ್ದೇಶಕರ ವಿರುದ್ಧ ಆರೋಪ ಮಾಡಿದ್ದಾರೆ. ಆದರೆ ಇದರ ಹಿಂದೆ ಬೇರೆ ಕಾರಣಗಳಿವೆಯೇ ಎಂಬುದನ್ನೂ ಪರಿಶೀಲಿಸಲಾಗುತ್ತದೆ. ಹಿರಿಯ ಅಧಿಕಾರಿಗಳು ಕೆಳ ಹಂತದ ಸಿಬ್ಬಂದಿಗಳು ತಪ್ಪು ಮಾಡಿದಾಗ ನೋಟಿಸ್ ನೀಡುವುದು ಸಾಮಾನ್ಯ. ತಪ್ಪು ದೃಢಪಟ್ಟರೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಪಕ್ಷ ತನ್ನ ಅಭ್ಯರ್ಥಿಗಳನ್ನು ಘೋಷಣೆ ಮಾಡಿದೆ. ಇದು ತುಂಬಾ ಕಷ್ಟದ ಕೆಲಸವಾಗಿತ್ತು ಎಂದು ಹೇಳಿದರು. ನಾನು ಪಕ್ಷದ ಅಧ್ಯಕ್ಷನಾಗಿದ್ದಾಗಲೂ ಅಭ್ಯರ್ಥಿಗಳ ಆಯ್ಕೆ ವೇಳೆ ಇಂತಹ ಸಮಸ್ಯೆಗಳು ಎದುರಾಗಿದ್ದವು. ಅವುಗಳನ್ನು ಬಗೆಹರಿಸಲಾಗಿತ್ತು. ಅಂತಿಮವಾಗಿ ಯಾರಾದರು ಒಬ್ಬರಿಗೆ ಟಿಕೆಟ್ ನೀಡಲೇಬೇಕು. ಸಾಧಕ–ಬಾಧಕಗಳನ್ನು ಪರಿಶೀಲಿಸಿ ಹೈಕಮಾಂಡ್ ತೀರ್ಮಾನ ಮಾಡಿದೆ ಎಂದರು.

ಎಚ್.ವೈ. ಮೇಟಿ ಕುಟುಂಬ ಹಾಗೂ ಇತರರು ಎಂಬ ಪರಿಸ್ಥಿತಿ ಬಾಗಲಕೋಟೆಯಲ್ಲಿ ನಿರ್ಮಾಣವಾಗಿತ್ತು. ಉಸ್ತುವಾರಿಗಳು, ಪಕ್ಷದ ಅಧ್ಯಕ್ಷರು ಹಾಗೂ ಮುಖ್ಯಮಂತ್ರಿ ಸೇರಿದಂತೆ ಹಿರಿಯ ನಾಯಕರ ಜೊತೆ ಮಾತುಕತೆ ನಡೆಸಿದ್ದಾರೆ. ಎಲ್ಲಾ ಸಮಸ್ಯೆಗಳು ಬಗೆ ಹರಿದಿವೆ. ಯಾವುದೇ ತೊಂದರೆ ಇಲ್ಲ ಎಂದು ಹೇಳಿದರು.

ಕುಟುಂಬ ರಾಜಕೀಯ ಎಂಬ ಆರೋಪವನ್ನು ಹೈಕಮಾಂಡ್ ಗಮನಿಸಿತ್ತು. ಎಲ್ಲಾ ಮಾನದಂಡಗಳನ್ನು ಪರಿಗಣಿಸಿಯೇ ದಾವಣಗೆರೆ ದಕ್ಷಿಣದಲ್ಲಿ ಸಮರ್ಥ್ ಮಲ್ಲಿಕಾರ್ಜುನ್‌ಗೆ ಬಾಗಲಕೋಟೆಯಲ್ಲಿ ಉಮೇಶ್‌ಮೇಟಿಗೆ ಟಿಕೆಟ್ ನೀಡಿದೆ ಎಂದರು.

ಪಕ್ಷ ಗೆದ್ದಿರುವ ಸ್ಥಾನವನ್ನು ಉಳಿಸಿಕೊಳ್ಳುವುದು ಮುಖ್ಯ. ಈ ಬಾರಿ ಕೂಡ ಗೆಲ್ಲುವುದು ಮುಖ್ಯ. ಎರಡೂ ಕಡೆ ಕುಟುಂಬದವರು ಟಿಕೆಟ್ ಕೇಳಿದ್ದರು. ಮತ್ತೊಂದೆಡೆ ಕಾರ್ಯಕರ್ತರು ಬೇರೆ ಅಭ್ಯರ್ಥಿಗೆ ಅವಕಾಶ ನೀಡಬೇಕೆಂದು ಒತ್ತಾಯಿಸಿದ್ದರು. ಎಲ್ಲಾ ವಿಚಾರಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ ಹೈಕಮಾಂಡ್ ತೀರ್ಮಾನ ಕೈಗೊಂಡಿದೆ ಎಂದು ಹೇಳಿದರು.

ಹೈಕಮಾಂಡ್ ತೀರ್ಮಾನಕ್ಕೆ ನಾವು ಎಲ್ಲರೂ ಬದ್ಧರಾಗಿದ್ದು, ಅಭ್ಯರ್ಥಿಗಳನ್ನು ಗೆಲ್ಲಿಸಲು ಒಟ್ಟಾಗಿ ಕೆಲಸ ಮಾಡಬೇಕು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರ ಸೂಚನೆಯಂತೆ ಚುನಾವಣೆ ನಡೆಸಿ ಜಯ ಸಾಧಿಸಬೇಕು ಎಂದು ಕರೆ ನೀಡಿದರು.

## ಪ್ರಧಾನಿಗಳಾಗಿ ಮೋದಿಜೀ ಅವರ ಜನಪ್ರಿಯತೆ ಯಾವತ್ತೂ ಕುಗ್ಗಿಲ್ಲ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿಜೀ ಅವರು 8,931 ದಿನಗಳ ಕಾಲ ನಿರಂತರವಾಗಿ ಆಡಳಿತ ನಡೆಸುತ್ತಿರುವುದು ನಮ್ಮೆಲ್ಲರಿಗೂ ತುಂಬ ಸಂತೋಷ ತಂದು ಕೊಟ್ಟ ವಿಚಾರ. ಇದು ಬಹಳ ದೊಡ್ಡ ಮೈಲಿಗಲ್ಲು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಜೀ ಅವರ ಆಡಳಿತದ ಬಗ್ಗೆ ಇವತ್ತು ದೇಶಾದ್ಯಂತ ಶ್ಲಾಘನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಭಾರತವು ಎಲ್ಲ ಕ್ಷೇತ್ರಗಳಲ್ಲೂ ಮುಂದೆ ಸಾಗುತ್ತಿರುವ ಸಂದರ್ಭದಲ್ಲಿ ಮೋದಿಜೀ ಅವರು ದಿಟ್ಟ ನಾಯಕತ್ವ ನೀಡಿದ್ದಾರೆ. ಸ್ವಾತಂತ್ರ್ಯ ಬಂದ ನಂತರದಲ್ಲಿ ಸತತ 3ನೇ ಬಾರಿಗೆ ಪ್ರಧಾನಿಗಳಾಗಿ ಮೋದಿಜೀ ಅವರ ಜನಪ್ರಿಯತೆ ಯಾವತ್ತೂ ಕುಗ್ಗಿಲ್ಲ ಎಂದು ನುಡಿದರು.

ಬಿಜೆಪಿ ಅಭ್ಯರ್ಥಿಗಳು ಗೆದ್ದುಬರುತ್ತಾರೆ..

ಬಾಗಲಕೋಟೆಗೆ ಮಾಜಿ ಶಾಸಕ ವೀರಣ್ಣ ಚರಂತಿಮಠ್, ದಾವಣಗೆರೆ ದಕ್ಷಿಣಕ್ಕೆ ಶ್ರೀನಿವಾಸ ದಾಸ್ ಕರಿಯಪ್ಪ ನಮ್ಮ ಅಭ್ಯರ್ಥಿಯಾಗಿದ್ದಾರೆ. ಕಾರ್ಯಕರ್ತರಲ್ಲಿ ರಣೋತ್ಸಾಹ ಕಾಣುತ್ತಿದೆ. ಮತ್ತೊಂದು ಕಡೆ ಮತದಾರರು ರಾಜ್ಯ ಸರಕಾರದ ವಿರುದ್ಧ ಬೇಸತ್ತಿದ್ದಾರೆ. ಜನವಿರೋಧಿ, ಬಡವರ ವಿರೋಧಿ, ರೈತ ವಿರೋಧಿ, ಯುವಜನತೆಯ ಭವಿಷ್ಯವನ್ನು ಹಾಳುಗೆಡಹಿದ ಈ ಕಾಂಗ್ರೆಸ್ ಸರಕಾರದ ವಿರುದ್ಧ ಜನರು ದಂಡೇಳುವ ಪರಿಸ್ಥಿತಿಯಲ್ಲಿ ಉಪ ಚುನಾವಣೆ ಘೋಷಣೆ ಆಗಿದೆ. ಬಾಗಲಕೋಟೆ ಕ್ಷೇತ್ರದ ಪ್ರಜ್ಞಾವಂತ ಮತದಾರರು ಈ ಬಾರಿ ಬಿಜೆಪಿಯನ್ನು ಬೆಂಬಲಿಸುತ್ತಾರೆ. ಹಿರಿಯರಾದ ವೀರಣ್ಣ ಚರಂತಿಮಠ್ ಅವರು ಗೆದ್ದು ಬಂದೇ ಬರುತ್ತಾರೆಂಬ ವಿಶ್ವಾಸ ಇದೆ ಎಂದು ಹೇಳಿದರು. ಅದೇರೀತಿ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲೂ ಒಂದು ಅಚ್ಚರಿಯ ಫಲಿತಾಂಶ ಬರಲಿದ್ದು, ಬಿಜೆಪಿ ಅಭ್ಯರ್ಥಿ ಗೆದ್ದು ಬರುತ್ತಾರೆ ಎಂದು ವಿಶ್ವಾಸದಿಂದ ತಿಳಿಸಿದರು.



ಕೇಂದ್ರ ಸಚಿವರಾದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಜೊತೆಗೂ ಚರ್ಚೆ ಮಾಡಿದ್ದೇನೆ. ಅವರೂ ಸಂಪೂರ್ಣ ಬೆಂಬಲ ಕೊಡುತ್ತಿದ್ದಾರೆ ಎಂದು ಹೇಳಿದರು. ಇದೆಲ್ಲದರ ಪರಿಣಾಮವಾಗಿ ಎರಡೂ ಕ್ಷೇತ್ರಗಳಲ್ಲಿ ನಾವು ಗೆಲ್ಲಲಿದ್ದೇವೆ ಎಂದರು.

## ಸಮರ್ಥ್ ಮಲ್ಲಿಕಾರ್ಜುನ್, ಉಮೇಶ್ ಮೇಟಿಗೆ 'ಕೈ' ಟಿಕೆಟ್ ಘೋಷಣೆ

ಬೆಂಗಳೂರು : ನಿರೀಕ್ಷೆಯಂತೆ ಕಾಂಗ್ರೆಸ್ ಪಕ್ಷ ಎರಡೂ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಕಾಂಗ್ರೆಸ್ ಪಕ್ಷ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ.ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಸಮರ್ಥ್ ಮಲ್ಲಿಕಾರ್ಜುನ್‌ಗೆ ಟಿಕೆಟ್ ನೀಡಿದರೆ, ಬಾಗಲಕೋಟೆಗೆ ಉಮೇಶ್ ಮೇಟಿ ಅಧಿಕೃತ ಅಭ್ಯರ್ಥಿಯಾಗಿದ್ದಾರೆ.

ಎರಡು ವಿಧಾನಸಭಾ ಉಪಚುನಾವಣೆಗಳನ್ನು ಆಡಳಿತಾರೂಢ ಕಾಂಗ್ರೆಸ್ ಪ್ರತಿಷ್ಠೆಯ ಕಣವಾಗಿ ಪರಿಗಣಿಸಿದೆ. ಗೆಲ್ಲಲೇಬೇಕೆಂಬ ಹಠದಿಂದ



ಅಳೆದು ತೂಗಿ ಈ ಮೊದಲು ಶಾಸಕರಾಗಿದ್ದವರ ಕುಟುಂಬದ ಸದಸ್ಯರಿಗೆ ಉಪಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿದೆ.

ಶ್ಯಾಮನೂರು ಶಿವಶಂಕರಪ್ಪ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ನಾಲ್ಕು ಬಾರಿ ನಿರಂತರವಾಗಿ ಗೆಲ್ಲುವ ಮೂಲಕ ಪ್ರಬಲ ಹಿಡಿತ ಹೊಂದಿದ್ದರು. ಕ್ಷೇತ್ರದಲ್ಲಿ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಪುತ್ರರಾಗಿರುವ ಸಮರ್ಥ್ ಅವರಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಲಾಗಿದೆ. ಈ ಮೂಲಕ ಶ್ಯಾಮನೂರು ಕುಟುಂಬದ ಬಹುತೇಕ ಸದಸ್ಯರು ಚುನಾವಣಾ ರಾಜಕೀಯ ಅಖಾಡ ಪ್ರವೇಶಿಸಿದಂತಾಗಿದೆ.

ಈ ಮೊದಲು ಖುದ್ದು ಶ್ಯಾಮನೂರು ಶಿವಶಂಕರಪ್ಪ ಶಾಸಕರಾಗಿ, ಸಚಿವರಾಗಿ ಕೆಲಸ

7ನೇ ಪುಟಕ್ಕೆ

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಂದಿನಿ ಬಡಾವಣೆಯಲ್ಲಿ ಪುನೀತ್ ರಾಜಕುಮಾರ್ ಹುಟ್ಟು ಹಬ್ಬದ ಪ್ರಯುಕ್ತ ಸೂರ್ಯೋದಯ ಚಾರಿಟಬಲ್ ಟ್ರಸ್ಟ್ ವತಿಯಿಂದ ಡಾಕ್ಟರ್ ಪುನೀತ್ ರಾಜಕುಮಾರ್ ಬ್ಯಾಡ್ಮಿಂಟನ್ ಕಪ್ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ವನ್ನು ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಕೇಕ್ ಕತ್ತರಿಸುವ ಮೂಲಕ ಉದ್ಘಾಟನೆ ನಡೆಸಿದರು.




ಈ ಸಂದರ್ಭದಲ್ಲಿ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಅಧ್ಯಕ್ಷರಾದ ಜಯರಾಮ್, ಮಾಜಿ ಬಿಬಿಎಂಪಿ ಸದಸ್ಯ ರಾಜೇಂದ್ರ ಕುಮಾರ್, ಸುರಭಿ ನಾಗರಾಜ್, ಹನುಮಂತು, ಅಂಬರೀಶ್, ಮಲ್ನಾಡ್ ನಾಗರಾಜ್, ವಿನೋದ್ ಹಾಗೂ ಟ್ರಸ್ಟಿನ ಅಧ್ಯಕ್ಷರುಗಳು ಮತ್ತು ಪದಾಧಿಕಾರಿಗಳು ಕ್ರೀಡಾಪಟುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಇಗ್ಗಲೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ

ಚನ್ನಪಟ್ಟಣ: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ. ಸಿ.ಎನ್.



ಮಂಜುನಾಥ್ ಅವರ ಅನುದಾನ ಹಾಗೂ ಸಾಮಾಜಿಕ ಹೊಣೆಗಾರಿಕೆ ಕಾರ್ಯನೀತಿ–ಸಿಎಸ್‌ಆರ್ ಯೋಜನೆಯಡಿ ಇಗ್ಗಲೂರು ಗ್ರಾಮದಲ್ಲಿ ನಿರ್ಮಿಸಲಾದ ಶುದ್ಧ ಕುಡಿಯುವ ನೀರಿನ ಘಟಕವನ್ನು ಭಾನುವಾರ ಉದ್ಘಾಟಿಸಲಾಯಿತು.

ಉದ್ಘಾಟನಾ ಕಾರ್ಯಕ್ರಮದ ಬಳಿಕ ನಡೆದ ಸಭೆಯಲ್ಲಿ ಮಾತನಾಡಿದ ಡಾ. ಸಿ.ಎನ್. ಮಂಜುನಾಥ್ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಅತ್ಯಂತ ಅಗತ್ಯವಾಗಿದ್ದು, ಜನರ ಆರೋಗ್ಯದ ದೃಷ್ಟಿಯಿಂದ ಇಂತಹ ಯೋಜನೆಗಳನ್ನು ಇನ್ನಷ್ಟು ವಿಸ್ತರಿಸಲಾಗುವುದು ಎಂದು ಹೇಳಿದರು. ಮೂಲಭೂತ ಸೌಕರ್ಯಗಳ ಅಭಿವೃದ್ಧಿ ತಮ್ಮ ಆದ್ಯತೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮೀಣ ಭಾಗದ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಚನ್ನಪಟ್ಟಣ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹಾಗೂ ಇಗ್ಗಲೂರು ಸೊಸೈಟಿ ಅಧ್ಯಕ್ಷ ಇಗ್ಗಲೂರು ಡಿಎಂಕೆ ಕುಮಾರ್, ಈ ಯೋಜನೆ ಗ್ರಾಮಸ್ಥರಿಗೆ ಬಹಳ ಉಪಯುಕ್ತವಾಗಿದ್ದು, ಶುದ್ಧ ಕುಡಿಯುವ ನೀರಿನ ಲಭ್ಯತೆ ಗ್ರಾಮದಲ್ಲಿ ಆರೋಗ್ಯಕರ ಬದುಕಿಗೆ ಸಹಕಾರಿಯಾಗಲಿದೆ ಎಂದರು. ಸಂಸದರು ಗ್ರಾಮೀಣ ಅಭಿವೃದ್ಧಿಗೆ ನೀಡುತ್ತಿರುವ ಪ್ರಾಮುಖ್ಯತೆಯನ್ನು ಅವರು ಪ್ರಶಂಸಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಚ್.ಸಿ. ಜಯಮುತ್ತು, ಜಿಲ್ಲಾ ಬಿಜೆಪಿ ಅಧ್ಯಕ್ಷ ಆನಂದಸ್ವಾಮಿ, ಚನ್ನಪಟ್ಟಣ ತಾಲೂಕು ಜೆಡಿಎಸ್ ಅಧ್ಯಕ್ಷ ಗೋವಿಂದಹಳ್ಳಿ ನಾಗರಾಜು, ಸೋಗಾಲ ಸೊಸೈಟಿ ಅಧ್ಯಕ್ಷ ಹೆಚ್ ಎಲ್ ಶಂಕರೇಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ಯಾಲಕ್ಕಿಗೌಡ, ಇಗ್ಗಲೂರು ಗ್ರಾಮದ ಮಾಜಿ ಅಧ್ಯಕ್ಷ ಇ.ಟಿ.ಶ್ರೀನಿವಾಸ್ ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಪಕ್ಷದ ಮುಖಂಡರು, ಕಾರ್ಯಕರ್ತರು, ಪದಾಧಿಕಾರಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದು, ಹೊಸ ಕುಡಿಯುವ ನೀರಿನ ಘಟಕದಿಂದ ಗ್ರಾಮಕ್ಕೆ ಮಹತ್ತರ ಅನುಕೂಲವಾಗಲಿದೆ ಎಂದು ಸಂತಸ ವ್ಯಕ್ತಪಡಿಸಿದರು. ಗ್ರಾಮದಲ್ಲಿ ನೀರಿನ ಸಮಸ್ಯೆ ಪರಿಹಾರವಾಗುವ ನಿರೀಕ್ಷೆ ವ್ಯಕ್ತವಾಗಿದ್ದು, ಸ್ಥಳೀಯರು ಸಂಸದರಿಗೆ ಕೃತಜ್ಞತೆ ಸಲ್ಲಿಸಿದರು.

# ಸಂಸದೆ ಕಂಗನಾ ರನೌತ್ ರಾಜೀನಾಮೆಗೆ ಚೈತ್ರ ಗಿರೀಶ್ ಒತ್ತಾಯ



ಬೆಂಗಳೂರು : ನಟಿ ಹಾಗೂ ಸಂಸದೆ ಕಂಗನಾ ರನೌತ್ ಅವರು ರಾಹುಲ್ ಗಾಂಧಿ ಬಗ್ಗೆ ಹೇಳಿಕೆಗೆ ರಾಜ್ಯ ಯುವ ಕಾಂಗ್ರೆಸ್ ಉಪಾಧ್ಯಕ್ಷ ಚೈತ್ರ ವಿ ಗಿರೀಶ್ ಕುಮಾರ್ ಖಂಡಿಸಿದ್ದು, ಸಂಸದರಾಗಿ ಮುಂದುವರೆಯಲು ಅನರ್ಹರು, ಕೂಡಲೇ ಬಿಜೆಪಿ ಹಾಗೂ ಸ್ಪೀಕರ್ ಕಂಗನಾ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಭಾರತದಲ್ಲಿ ದೇಶದ ಅತ್ಯುನ್ನತ ಘನತೆ ಹೊಂದಿರುವ ಸ್ಥಳವಾದ ಸಂಸತ್ತಿನಲ್ಲಿ ಸ್ಪೀಕರ್ ಪ್ರಧಾನಿ ಸೇರಿದಂತೆ ಹಿರಿಯ ಸದಸ್ಯರು ಇರುತ್ತಾರೆ. ಅದೇ ರೀತಿ ದೇಶದ ಹಾಗೂ ಹೋಗುಗಳ ಚರ್ಚೆ ನಡೆಯುತ್ತದೆ. ರಾಹುಲ್ ಗಾಂಧಿಯವರು ಸಹ ಸಾಂವಿಧಾನಿಕವಾದ ವಿರೋಧ ಪಕ್ಷದ ನಾಯಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಇಂತಹ ಸಂಸತ್ ನಲ್ಲಿ ಆಡಳಿತ ಪಕ್ಷದಲ್ಲಿದ್ದರೂ ಸಹ ತನಗೆ ಮುಜುಗರವಾಗುತ್ತದೆ ಹಾಗೂ ರಾಹುಲ್ ಗಾಂಧಿಯವರನ್ನು ಟಪೋರಿಯಂದಿರುವುದು ನಿಜಕ್ಕೂ ಖಂಡನೀಯ. ಕಂಗನಾ ಮನಸ್ಥಿತಿ ಎಷ್ಟು ಹೀನಾಯವಾಗಿದೆ ಎಂಬುದು ತಿಳಿಯುತ್ತದೆ.

ಈಗಾಗಲೇ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಕಂಗನಾಗೆ ನಿಮ್ಹಾನ್ಸ್ ನಲ್ಲಿ ಚಿಕಿತ್ಸೆ ಪಡೆಯಬೇಕೆಂದು ಪತ್ರ ಬರೆದಿದ್ದಾರೆ. ಈ ರೀತಿಯ ಮನಸ್ಥಿತಿಯವರು ಸಂಸತ್ ಸದಸ್ಯರಾಗಿರುವುದು ನಿಜಕ್ಕೂ ಪ್ರಜಾಪ್ರಭುತ್ವಕ್ಕೆ ಮಾರಕ. ಈ ಹಿಂದೆ ರೈತ ಕಾನೂನುಗಳ ವಿರುದ್ಧ ನಡೆದ ಅತಿ ದೊಡ್ಡ ಪ್ರತಿಭಟನೆಯಲ್ಲಿ 81ರ ವಯಸ್ಸಿನ ರೈತ ಮಹಿಳೆ ಬಗ್ಗೆ ನೂರು ರೂಪಾಯಿಗಳ ಹೇಳಿಕೆಯನ್ನು ನೀಡಿ ಕಂಗನಾ ರೈತರ ವಿರೋಧಕ್ಕೆ ಗುರಿಯಾಗಿದ್ದರು. ಸುಭಾಷ್ ಚಂದ್ರ ಬೋಸ್ ಮೊದಲ ಪ್ರಧಾನಿ ಅಂತ ಹೇಳಿ ಅವರ ಸಾಮಾನ್ಯ ಜ್ಞಾನ ಎಷ್ಟು ಎಂಬುದು ತಿಳಿಸಿದ್ದರು.

ದೇಶದ ಜನ ವಿದೇಶಕ್ಕೆ 10 ವರ್ಷದಿಂದ ಹೆಚ್ಚು ಹೊರಡುತ್ತಿದ್ದಾರೆ ಎಂದಾಗ ಜನಸಂಖ್ಯೆ ಕಡಿಮೆಯಾಗುತ್ತದೆ ಎಂಬ ಬಾಲಿಶ ಹೇಳಿಕೆ ನೀಡಿದ್ದರು. ರೈತ ಮಹಿಳೆಯ ಹಾಗೂ ರೈತರ ಬಗ್ಗೆ ಹೇಳಿಕೆಗೆ ಸಿಐಎಸ್‌ಎಫ್ ಯೋಧ ಮಹಿಳೆ ಕಂಗನಾರಿಗೆ ಕಪಾಳ ಮೋಕ್ಷ ಮಾಡಿದ್ದು ಇಡೀ ದೇಶವೇ ನೋಡಿದೆ. ರಘುಪತಿ ರಾಜ ರಾಮ್ ಭಕ್ತಿಗೀತೆನಾ ರಾಷ್ಟ್ರಗೀತೆ ಅಂತ ಹೇಳಿ ಅವರ ಅಪ್ರಭುದ್ಧತೆಯನ್ನು ತಿಳಿಸಿದ್ದಂತವರು. ಇಂಥವರನ್ನ ಬಿಜೆಪಿ ಪಕ್ಷ ಸಂಸದೆ ಮಾಡಿದ್ದಲ್ಲದೆ ಈ ರೀತಿಯ ಹೇಳಿಕೆಗಳು ಅವರ ನಡವಳಿಕೆಗಳು ಭಾರತದ ಪ್ರಜಾಪ್ರಭುತ್ವದ ಒಬ್ಬ ಸಂಸತ್ ಸದಸ್ಯರಾಗಿ ಮುಂದುವರೆಯಲು ಅನರ್ಹರು ಎಂಬುದನ್ನ ತೋರಿಸುತ್ತದೆ. ಈ ಕೂಡಲೇ ಕಂಗನಾ ತನ್ನ ಸಂಸತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ರಾಹುಲ್ ಗಾಂಧಿಯ ಕ್ಷಮೆಯಾಚಿಸಬೇಕು. ಅದಲ್ಲದೆ ಇಡೀ ದೇಶದ ಜನರ ಕ್ಷಮೆಯಾಚಿಸಬೇಕು. ಅಪಪ್ರಭುದ್ಧ ನಡವಳಕೆ ಮಾಡಬಾರದೆಂದು ರಾಜ್ಯ ಯುವ ಕಾಂಗ್ರೆಸ್ ಉಪಾಧ್ಯಕ್ಷ ಚೈತ್ರ ವಿ ಗಿರೀಶ್ ಕುಮಾರ್ ಒತ್ತಾಯಿಸಿದ್ದಾರೆ.

### ಸ್ಮಾರ್ಟ್ ತರಗತಿಗಳ ಮೂಲಕ ಸಂವಿಧಾನ ಅರಿವಿಗೆ ಬೆಳಕು

# ವಸತಿ ಶಾಲೆಗಳಲ್ಲಿ ಡಿಜಿಟಲ್ ಸೌಲಭ್ಯ– ವಿದ್ಯಾರ್ಥಿಗಳಲ್ಲಿ ನಾಗರಿಕ ಚೇತನ ಹೆಚ್ಚಿಸುವ ಉಪಕ್ರಮ




ಬೆಂಗಳೂರು: ಮಕ್ಕಳಲ್ಲಿ ಜೀವನ ಕೌಶಲ್ಯಗಳು, ಸಕ್ರಿಯ ನಾಗರಿಕತ್ವ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಬೆಳೆಸುವ ಮಹತ್ವಾಕಾಂಕ್ಷಿ ಉದ್ದೇಶದಿಂದ ಜಾರಿಯಲ್ಲಿರುವ "ಮಕ್ಕಳ ಸಂವಿಧಾನ ಕ್ಲಬ್" ಕಾರ್ಯಕ್ರಮ ಇದೀಗ ಮತ್ತೊಂದು ಮಹತ್ವದ ಹಂತವನ್ನು ತಲುಪಿದೆ. ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಆಯ್ದ 55 ವಸತಿ ಶಾಲೆಗಳಲ್ಲಿ ಡಿಜಿಟಲ್ ಮೂಲಸೌಕರ್ಯವನ್ನು ಬಲಪಡಿಸುವ ಕಾರ್ಯಕ್ಕೆ ಚಾಲನೆ ದೊರೆತಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಹೊಸ ಆಶಾಕಿರಣ ಮೂಡಿಸಿದೆ.

ಈ ಮಹತ್ವದ ಯೋಜನೆಯಡಿ ವಿದ್ಯಾರ್ಥಿಗಳ ಕಲಿಕೆಯನ್ನು ಆಧುನಿಕಗೊಳಿಸಲು ಇಂಟರಾಕ್ಟೀವ್ ಸ್ಮಾರ್ಟ್ ಬೋರ್ಡ್‌ಗಳು, ಲಘು ಯುಪಿಎಸ್ ವ್ಯವಸ್ಥೆಗಳು ಹಾಗೂ ಒಂದು ವರ್ಷದ ಇಂಟರ್ನೆಟ್ ರೀಚಾರ್ಜ್ ಸಹಿತ ವೈ–ಫೈ ರೂಟರ್‌ಗಳನ್ನು ಶಾಲೆಗಳಿಗೆ ಒದಗಿಸಲಾಗುತ್ತಿದೆ. ಈ ಉಪಕರಣಗಳ ಹಸ್ತಾಂತರ ಕಾರ್ಯಕ್ರಮವು ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರ ಸಮ್ಮುಖದಲ್ಲಿ ಗೌರವಯುತವಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ಅಧಿಕಾರಿ ಕಾಂತರಾಜು (ಐಎಎಸ್), ಜಂಟಿ ನಿರ್ದೇಶಕ ನಾಗೇಶ್, ಐಡಿಬಿಐ ಬ್ಯಾಂಕ್‌ನ ಜೋನಲ್ ಕಚೇರಿಯ ವ್ಯವಸ್ಥಾಪಕ ಜಫರುಲ್ಲಾ, ಎಇಇ ಹಾಗೂ ಸಿಎಸ್‌ಆರ್ ಸಂಯೋಜಕ ಮಹದೇವ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು. ಸಿಎಂಸಿಎ ಸಂಸ್ಥೆಯ ಸಹ ಸಂಸ್ಥಾಪಕಿ ಹಾಗೂ ಸಿಇಒ ಪ್ರಿಯಾ ಕೃಷ್ಣಮೂರ್ತಿ, ಇಂಡಿಯನ್ ನೇವಿಯ ನಿವೃತ್ತ ಕಮಾಂಡರ್ ನರೇನ್ ಸೇರಿದಂತೆ ಹಲವು ಶಿಕ್ಷಣತಜ್ಞರು, ಪ್ರಾಂಶುಪಾಲರು ಮತ್ತು ಶಿಕ್ಷಕರು ಈ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, "ಮಕ್ಕಳ ಸಂವಿಧಾನ ಕ್ಲಬ್" ಎಂಬುದು ಕೇವಲ ಒಂದು ಯೋಜನೆ ಅಲ್ಲ, ಅದು ಮಕ್ಕಳ ಮನಸ್ಸಿನಲ್ಲಿ ಸಮಾನತೆ, ಹಕ್ಕುಗಳ ಅರಿವು ಮತ್ತು ಜವಾಬ್ದಾರಿಯ ಭಾವನೆಗಳನ್ನು ಬಿತ್ತುವ ಒಂದು ಸಾಮಾಜಿಕ ಚಳವಳಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಮಕ್ಕಳು ಸಾಂವಿಧಾನಿಕ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ದೇಶದ ಭವಿಷ್ಯ ಬಲಿಷ್ಠವಾಗುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಐಡಿಬಿಐ ಬ್ಯಾಂಕ್ ತನ್ನ ಸಿಎಸ್‌ಆರ್ ಯೋಜನೆಯಡಿ ಈ ಕಾರ್ಯಕ್ಕೆ ಕೈಜೋಡಿಸಿರುವುದನ್ನು ಅವರು ಹೃತ್ಪೂರ್ವಕವಾಗಿ ಶ್ಲಾಘಿಸಿದರು.

ಕಾರ್ಯಕ್ರಮವನ್ನು ಸಿಎಂಸಿಎ ಸಂಸ್ಥೆಯ ಸಹ ನಿರ್ದೇಶಕ ಮರುಳಪ್ಪ ಪಿ.ಆರ್ ನಿರೂಪಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ವಸತಿ ಶಾಲೆಗಳಲ್ಲಿ ಸಮಾಜ ವಿಜ್ಞಾನ ಶಿಕ್ಷಕರ ಮೂಲಕ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿರುವುದಾಗಿ ತಿಳಿಸಿದರು. ವಿದ್ಯಾರ್ಥಿಗಳಲ್ಲಿ ವಿಮರ್ಶಾತ್ಮಕ ಚಿಂತನೆ, ಲಿಂಗ ಸಮಾನತೆ, ಅನುಭೂತಿ ಹಾಗೂ ನಾಗರಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಈ ಯೋಜನೆ ಮಹತ್ವದ ಪಾತ್ರವಹಿಸುತ್ತಿದೆ ಎಂದರು. ಜೊತೆಗೆ 21ನೇ ಶತಮಾನದ ಅಗತ್ಯ ಕೌಶಲ್ಯಗಳಾದ ನಾಯಕತ್ವ, ಭಾವನಾತ್ಮಕ ಬುದ್ಧಿಮತ್ತೆ ಮತ್ತು ನಾಗರಿಕ ಭಾಗವಹಿಸುವಿಕೆಯನ್ನು ಉತ್ತೇಜಿಸುವಲ್ಲಿ ಈ ಉಪಕ್ರಮ ಸಹಕಾರಿಯಾಗಿದೆ ಎಂದು ಹೇಳಿದರು.

ಐಡಿಬಿಐ ಬ್ಯಾಂಕ್‌ನ ಸಿಎಸ್‌ಆರ್ ಸಹಾಯದೊಂದಿಗೆ ಜಾರಿಗೊಳ್ಳುತ್ತಿರುವ ಈ ಯೋಜನೆ, ಸರ್ಕಾರಿ ಶಾಲೆಗಳ ಡಿಜಿಟಲ್ ಪರಿವರ್ತನೆಗೆ ವೇಗ ನೀಡುತ್ತಿದೆ. ಸಿಎಂಸಿಎ ಸಂಸ್ಥೆಯು ಇದನ್ನು ಸಿವಿಕ್ ಕ್ಲಬ್ ಮತ್ತು ಮಕ್ಕಳ ಸಂವಿಧಾನ ಕ್ಲಬ್ ಕಾರ್ಯಕ್ರಮಗಳಡಿ ಸಮರ್ಪಕವಾಗಿ ಅನುಷ್ಠಾನಗೊಳಿಸುತ್ತಿದ್ದು, ಗ್ರಾಮೀಣ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಸಮಕಾಲೀನ ಶಿಕ್ಷಣ ಸೌಲಭ್ಯಗಳನ್ನು ಒದಗಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ಒಟ್ಟಿನಲ್ಲಿ, 65 ಇಂಚಿನ ಸ್ಮಾರ್ಟ್ ಟಿವಿ/ಬೋರ್ಡ್, ಲಘು ಯುಪಿಎಸ್ ಮತ್ತು ಇಂಟರ್ನೆಟ್ ಸೌಲಭ್ಯಗಳೊಂದಿಗೆ ಸಜ್ಜುಗೊಳ್ಳುತ್ತಿರುವ ಈ ಶಾಲೆಗಳು, ವಿದ್ಯಾರ್ಥಿಗಳ ಕಲಿಕೆಯನ್ನು ಇನ್ನಷ್ಟು ಆಕರ್ಷಕ ಮತ್ತು ಪರಿಣಾಮಕಾರಿಯಾಗಿಸಲು ಸಿದ್ಧವಾಗಿವೆ. ಈ ಯೋಜನೆ ಮೂಲಕ ಮಕ್ಕಳಲ್ಲಿ ಜ್ಞಾನವರ್ಧನೆ ಮಾತ್ರವಲ್ಲ, ಉತ್ತಮ ನಾಗರಿಕರಾಗಿ ರೂಪುಗೊಳ್ಳುವ ದಾರಿಗೆ ದೀಪ ಬೆಳಗಿದಂತಾಗಿದೆ.

# ಸಿಲಿಂಡರ್ ಸಿಗದೇ ಗ್ಯಾಸ್ ಪಡೆದುಕೊಳ್ಳಲು ಗ್ರಾಹಕರ ಹರಸಾಹಸ



ಕೆ.ಆರ್.ಪೇಟೆ: ಪಟ್ಟಣದ ಹೇಮಗಿರಿ ವೃತ್ತದಲ್ಲಿರುವ ಹೆಚ್.ಪಿ.ಗ್ಯಾಸ್ ಏಜೆನ್ಸಿ ಶಾಖಾ ಕಚೇರಿ ಮುಂಭಾಗ ನೂರಾರು ಗ್ರಾಹಕರು ಕಳೆದ 10 ದಿನಗಳ ಹಿಂದೆ ಬುಕಿಂಗ್ ಮಾಡಿದ್ದರೂ ಗ್ಯಾಸ್ ವಿತರಣೆ ಮಾಡದೇ ಕಡಿಮೆ ಸಿಲಿಂಡರ್ ತಂದಿರುವ ಕಾರಣ ಗ್ರಾಹಕರು ಮುಗಿಬಿದ್ದು ಗ್ಯಾಸ್ ಪಡೆದುಕೊಳ್ಳಲು ಹರಸಾಹಸ ಪಟ್ಟ ಘಟನೆ ನಡೆಯಿತು.

ಚನ್ನರಾಯಪಟ್ಟಣ ಮೂಲದ ಶ್ರೀ ಮಂಜುನಾಥ ಹೆಚ್.ಪಿ.ಗ್ಯಾಸ್ ಏಜೆನ್ಸಿ ಯವರು ಪಟ್ಟಣದ ಹಳೆ ಹೇಮಗಿರಿ ವೃತ್ತದ ಬಳಿ ಹಲವಾರು ವರ್ಷಗಳಿಂದಲೂ ಸುಗಮವಾಗಿ ಗ್ಯಾಸ್ ವಿತರಣೆ ಮಾಡಿಕೊಂಡು ಬರುತ್ತಿದ್ದರು. ಆದರೆ ಕಳೆದ 20ದಿನಗಳಿಂದ ಕೊಲ್ಲಿ ದೇಶಗಳಲ್ಲಿ ನಡೆಯುತ್ತಿರುವ ಇರಾನ್ ಹಾಗೂ ಇಸ್ರೇಲ್, ಅಮೇರಿಕಾ ದೇಶಗಳ ನಡುವೆ ನಡೆಯುತ್ತಿರುವ ಯುದ್ದದ ಪರಿಣಾಮ ಸಿಲಿಂಡರ್ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ ಕಳೆದ ಎರಡು ವಾರಗಳಿಂದ ಗ್ಯಾಸ್ ಗಾಗಿ ಗ್ರಾಹಕರು ಮುಗಿಬಿದ್ದಿರುವ ಈ ಹಿನ್ನೆಲೆಯಲ್ಲಿ ಭರ್ತಿ ಸಿಲಿಂಡರ್ ಪಡೆದುಕೊಳ್ಳಲು ಗ್ರಾಹಕರು ಸತಿಯ ಸಾಲಿನಲ್ಲಿ ನಿಂತು ಪರದಾಡುತ್ತಿದ್ದಾರೆ. ಆದರೆ ಗ್ಯಾಸ್ ಏಜೆನ್ಸಿಯವರು ಗ್ರಾಹಕರ ಬೇಡಿಕೆಗೆ ತಕ್ಕಂತೆ ಸಿಲಿಂಡರ್ ತಂದು ವಿತರಣೆ ಮಾಡುವ ಬದಲು ಕಡಿಮೆ ಸಿಲಿಂಡರ್ ಕೊಡುವ ಮೂಲಕ ಗ್ರಾಹಕರ ಗ್ರಾಹಕರಿಗೆ ತೊಂದರೆ ಕೊಡುತ್ತಿದ್ದಾರೆ ಎಂದು ಸಿಲಿಂಡರ್ ಸಿಗದೇ ಇರುವ ಗ್ರಾಹಕರು ದೂರಿದರು.

ಹೆಚ್ಚು ಗ್ರಾಹಕರಿದ್ದು, ಕಡಿಮೆ ಸಿಲಿಂಡರ್ ಬಂದಿದ್ದ ಕಾರಣ ಗ್ರಾಹಕರು ಸಿಲಿಂಡರ್ ಮೊದಲು ಪಡೆಯುವ ಸಲುವಾಗಿ ಕ್ಯೂ ಬಿಟ್ಟು ಸಿಲಿಂಡರ್ ತುಂಬಿದ ಲಾರಿಯ ಮುಂದೆ ಮಿಗಿಬಿದ್ದರು ಆಗ ಪೊಲೀಸರು ಸ್ಥಳಕ್ಕೆ ಆಗಮಿಸಿ ಸಿಲಿಂಡರ್ ಕೊಡಿಸಲು ಮುಂದಾದರೂ ಆದರೆ ಹೆಚ್ಚು ಜನರಿದ್ದ ಕಾರಣ ತಳ್ಳಾಟ–ನೂಕಾಟ ನಡೆಯಿತು. ಗ್ರಾಹಕರ ಗಲಾಟೆ ಕಡಿಮೆಯಾಗದೇ ಇರುವ ಕಾರಣ ಏಜೆನ್ಸಿಯವರ ಕೋರಿಕೆಯ ಮೇರೆಗೆ ಪೋಲೀಸ್ ಠಾಣೆ ಬಳಿ ಹೆಚ್ಚು ಪೋಲೀಸರ ನೆರವಿನೊಂದಿಗೆ 75ಮಂದಿ ಗ್ರಾಹಕರಿಗೆ ಸಿಲಿಂಡರ್ ವಿತರಣೆ ಮಾಡಲಾಯಿತು. ಉಳಿದ ಗ್ರಾಹಕರಿಗೆ ನಾಳೆ ವಿತರಣೆ ಮಾಡುವ ಭರವಸೆ ನೀಡಿ ಸರತಿಯ ಸಾಲಿನಲ್ಲಿ ನಿಂತಿದ್ದ ಗ್ರಾಹಕರಿಗೆ ಟೋಕನ್ ವಿತರಣೆ ಮಾಡಿದರು.

ಈ ವೇಳೆ ಮಾತನಾಡಿದ ಟೌನ್ ಪೋಲೀಸ್ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಸುನಿಲ್‌ಕುಮಾರ್ ಕೆ.ಆರ್.ಪೇಟೆ ತಾಲ್ಲೂಕಿನ ಹೆಚ್.ಪಿ.ಕನೆಕ್ಷನ್ ಪಡೆದಿರುವ ಗ್ರಾಹಕರಿಗೆ ನಿಗದಿತ ದಿನಗಳಂದು ಗ್ಯಾಸ್ ವಿತರಣೆಗೆ ಅಗತ್ಯ ಕ್ರಮ ವಹಿಸಬೇಕು ಎಂದು ಗ್ಯಾಸ್ ಏಜೆನ್ಸಿಯವರಿಗೆ ಸೂಚನೆ ನೀಡಿದರು. ಒಂದು ವೇಳೆ ನಿಗಧಿತ ದಿನಗಳಂದು ಸಿಲಿಂಡರ್ ವಿತರಿಸಿದೇ ಕೃತಕ ಅಭಾವ ಸೃಷ್ಟಿಸಿದರೆ ಏಜೆನ್ಸಿ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

**THIS IS A PUBLIC ANNOUNCEMENT FOR INFORMATION PURPOSES ONLY AND IS NOT A PROSPECTUS ANNOUNCEMENT AND DOES NOT CONSTITUTE AN INVITATION OR OFFER TO ACQUIRE, PURCHASE OR SUBSCRIBE TO SECURITIES. THIS PUBLIC ANNOUNCEMENT IS NOT INTENDED FOR PUBLICATION OR DISTRIBUTION, DIRECTLY OR INDIRECTLY OUTSIDE INDIA. INITIAL PUBLIC OFFERING OF EQUITY SHARES ON THE EMERGE PLATFORM OF THE NSE LIMITED IN COMPLIANCE WITH THE CHAPTER IX OF THE SECURITIES AND EXCHANGE BOARD OF INDIA (ISSUE OF CAPITAL AND DISCLOSURE REQUIREMENTS) REGULATIONS, 2018, AS AMENDED ("SEBI ICDR REGULATIONS").**

**PUBLIC ANNOUNCEMENT**

*(Please scan this QR code to view DRHP)*

SpectraA TECHNOLOGY SOLUTIONS LIMITED

## SPECTRAA TECHNOLOGY SOLUTIONS LIMITED

***(Formerly Known as SpectraA Technology Solutions Private Limited)***

**CIN: U74999KA2009PLC048905**

Our Company was incorporated as a Private Limited Company in the name 'SpectraA Technology Solutions Private Limited', under the provisions of the Companies Act, 1956 vide Certificate of Incorporation dated January 20, 2009, issued by the Registrar of Companies, Karnataka. Subsequently, pursuant to a special resolution passed by the shareholders of our company in the Extra-Ordinary General Meeting held on January 13, 2021, our Company was converted from a Private Limited Company to Public Limited Company and consequently, the name of our Company was changed to 'SpectraA Technology Solutions Limited' and a Fresh Certificate of Incorporation consequent to Conversion was issued on February 01, 2021, by the Registrar of Companies, Bangalore. The Corporate Identification Number of the Company is U74999KA2009PLC048905

**Registered Office:** 17/7 Ali Asker Road, Cunningham Rd, Bangalore G.P.O, Bangalore North, Karnataka, India, 560001;
**Contact Person:** Mona Poddar, Company Secretary and Compliance Officer; **E-mail:** cs@spectraa.com ; **Tel:** +91 80 41150466; **Website:** www.spectraa.com

**OUR PROMOTERS: A L ARUN KUMAR, SAILAJA ARUN KUMAR, PRAVEEN KUMAR APPUKUTTAN NAIR LEELA AND DIVYA PRAVEEN**

**DETAILS OF THE OFFER**

**INITIAL PUBLIC OFFER OF UPTO 34,76,000 EQUITY SHARES OF FACE VALUE OF ₹ 10/- EACH OF SPECTRAA TECHNOLOGY SOLUTIONS LIMITED (THE "COMPANY" OR THE "ISSUER") FOR CASH AT AN OFFER PRICE OF ₹ [•]/- PER EQUITY SHARE INCLUDING A SHARE PREMIUM OF ₹ [•]/- PER EQUITY SHARE (THE "OFFER PRICE") COMPRISING OF A FRESH ISSUE OF UPTO 27,84,000 EQUITY SHARES OF FACE VALUE OF ₹ 10/- EACH AGGREGATING TO ₹ [•] LAKHS (THE "FRESH ISSUE") AND AN OFFER FOR SALE OF UPTO 6,92,000 EQUITY SHARES OF FACE VALUE OF ₹ 10/- EACH COMPRISING OF UPTO 3,46,000 EQUITY SHARES OF FACE VALUE OF ₹10 EACH BY A L ARUN KUMAR AND UPTO 3,46,000 EQUITY SHARES OF FACE VALUE OF ₹10 EACH BY SAILAJA ARUN KUMAR ("THE SELLING SHAREHOLDERS OR "PROMOTER SELLING SHAREHOLDERS") ("OFFER FOR SALE") AGGREGATING TO ₹ [•] LAKHS, OF WHICH [•] EQUITY SHARES OF FACE VALUE OF ₹ 10/- EACH FOR AGGREGATING TO ₹ [•] LAKHS WILL BE RESERVED FOR SUBSCRIPTION BY MARKET MAKER TO THE OFFER (THE "MARKET MAKER RESERVATION PORTION"). THE PUBLIC OFFER LESS THE MARKET MAKER RESERVATION PORTION I.E. NET OFFER OF [•] EQUITY SHARES OF FACE VALUE OF ₹ 10/- EACH AGGREGATING TO ₹ [•] LAKHS IS HEREINAFTER REFERRED TO AS THE "NET OFFER". THE PUBLIC OFFER AND THE NET OFFER WILL CONSTITUTE UPTO [•] % AND [•] %, RESPECTIVELY, OF THE POST-OFFER PAID-UP EQUITY SHARE CAPITAL OF OUR COMPANY. THE FACE VALUE OF THE EQUITY SHARES IS ₹ 10/- EACH.**

**THE PRICE BAND AND THE MINIMUM BID LOT WILL BE TWO AND THE PRICE BAND WILL BE DECIDED BY OUR COMPANY IN CONSULTATION WITH THE BOOK RUNNING LEAD MANAGER AND WILL BE ADVERTISED IN ALL EDITIONS OF [•] (A WIDELY CIRCULATED ENGLISH NATIONAL DAILY NEWSPAPER), ALL EDITIONS OF [•] (A WIDELY CIRCULATED HINDI NATIONAL DAILY NEWSPAPER) AND EDITIONS OF [•] KANNADA DAILY NEWSPAPER (KANNADA BEING REGIONAL LANGUAGE OF KARNATAKA, WHERE OUR REGISTERED OFFICE IS LOCATED) EACH WITH WIDE CIRCULATION, AT LEAST TWO WORKING DAYS PRIOR TO THE BID/OFFER OPENING DATE AND SHALL BE MADE AVAILABLE TO THE EMERGE PLATFORM OF THE NATIONAL STOCK EXCHANGE OF INDIA LIMITED ("NSE EMERGE") FOR THE PURPOSES OF UPLOADING ON ITS WEBSITE IN ACCORDANCE WITH THE SEBI ICDR REGULATIONS. FOR FURTHER DETAILS KINDLY REFER TO CHAPTER TITLED *"TERMS OF THE OFFER"* BEGINNING ON PAGE NO. 326 OF THIS DRAFT RED HERRING PROSPECTUS.**

IIn case of any revision in the Price Band, the Bid/Offer Period will be extended by at least 3 (three) additional Working Days after such revision in the Price Band, subject to the Bid/ Offer Period not exceeding 10 (Ten)Working Days. In cases of force majeure, banking strike or similar circumstances, our Company may, for reasons to be recorded in writing, extend the Bid/Offer Period for a minimum of 1 (One) Working Day, subject to the Bid/Offer Period not exceeding 10 (Ten) Working Days. Any revision in the Price Band and the revised Bid/Offer Period, if applicable, shall be widely disseminated by notification to the Stock Exchange, by issuing a press release, and also by indicating the change on the respective websites of the BRLM and at the terminals of the members of the Syndicate and by intimation to Designated Intermediaries and the Sponsor Bank, as applicable.

The offer is being made through the Book Building Process, in terms of Rule 19(2)(b)(i) of the Securities Contracts (Regulation) Rules, 1957, as amended ("SCRR") read with Regulation 253 of the SEBI ICDR Regulations, as amended, wherein not more than 50% of the Net Offer shall be allocated on a proportionate basis to Qualified Institutional Buyers ("QIBs", the "QIB Portion"), provided that our Company may, in consultation with the Book Running Lead Manager, allocate up to 60% of the QIB Portion to Anchor Investors on a discretionary basis in accordance with the SEBI ICDR Regulations ("Anchor Investor Portion"), of which forty per cent of the anchor investor portion, shall be reserved as under - (i) 33.33 per cent for domestic mutual funds; and (ii) 6.67 per cent for life insurance companies and pension funds: Any undersubscription in the reserved category specified in clause (ii) above may be allocated to domestic mutual funds. In the event of under-subscription, or non-allocation in the Anchor Investor Portion, the balance Equity Shares shall be added to the Net QIB Portion. Further, 5% of the Net QIB Portion shall be available for allocation on a proportionate basis only to Mutual Funds, and the remainder of the Net QIB Portion shall be available for allocation on a proportionate basis to all QIBs, including Mutual Funds, subject to valid Bids being received at or above the Offer Price. However, if the aggregate demand from Mutual Funds is less than 5% of the Net QIB Portion, the balance Equity Shares available for allocation in the Mutual Fund Portion will be added to the remaining Net QIB Portion for proportionate allocation to QIBs. Further, not less than 15% of the Net Offer shall be available for allocation on a proportionate basis to Non-Institutional Bidders out of which (a) one-third of such portion shall be reserved for applicants with application size of more than two lots and up to such lots equivalent to not more than ₹10 lakhs; and (b) two third of such portion shall be reserved for applicants with application size of more than ₹10 lakhs provided that the unsubscribed portion in either of such subcategories could have been allocated to applicants in the other sub-category of Non-Institutional Bidders and not less than 35% of the Net Offer shall be available for allocation to Individual Bidders (who applies for minimum application size) in accordance with the SEBI ICDR Regulations, subject to valid Bids being received at or above the Offer Price. All potential Bidders (except Anchor Investors) are required to mandatorily utilize the Application Supported by Blocked Amount ("ASBA") process providing details of their respective ASBA accounts, and UPI ID in case of IBs using the UPI Mechanism, if applicable, in which the corresponding Bid Amounts will be blocked by the SCSBs or by the Sponsor Bank under the UPI Mechanism, as the case may be, to the extent of respective Bid Amounts. Anchor Investors are not permitted to participate in the Offer through the ASBA process. For details, see *"Offer Procedure"* beginning on page 346 of the Draft Red Herring Prospectus.

All potential investors shall participate in the Offer through an Application Supported by Blocked Amount ("ASBA") process including through UPI mode (as applicable) by providing details about the bank account which will be blocked by the Self Certified Syndicate Banks ("SCSBs") for the same. For details in this regard, specific attention is invited to *"Offer Procedure"* on page no. 346 of this Draft Red Herring Prospectus. A copy of Red Herring Prospectus will be delivered to the Registrar of Companies for filing in accordance with Section 32 of the Companies Act, 2013. Provided further that for the purpose of public issue by an issuer to be listed /listed on SME exchange made in accordance with Chapter IX of these regulations, the words "retail individual investors" shall be read as words "individual investors who applies for Minimum Application Size".

In relation to above, the DRHP filed with NSE shall be made available to the public for comments, if any, for a period of atleast 21 days, from the date mentioned below by hosting it on the respective websites of the Stock Exchange i.e., NSE at www.nseindia.com , website of the Company at www.spectraa.com and the websites of the Book Running Lead Manager ("BRLM") to the Offer at www.indcap.in.

Our Company hereby invites the members of the public to give comments on the DRHP filed with NSE with respect to disclosures made in the DRHP. The members of the public are requested to send a copy of their comments to NSE and/or to the Company Secretary and Compliance Officer (cs@spectraa.com) of our Company and/or the BRLM to the Offer at their respective address mentioned herein below in relation to the Offer on or before 5:00 p.m. on the 21st day, i.e. 21 days from the date of filing of "Offer Document" With Emerge Platform Of the National Stock Exchange Of India Limited (NSE EMERGE).

Investments in Equity and Equity-related securities involve a degree of risk and investors should not invest any funds in this Offer unless they can afford to take the risk of losing their entire investment. Investors are advised to read the risk factors carefully before taking an investment decision in the Offer. For taking an investment decision, investors must rely on their own examination of our Company and the Offer including the risks involved. The Equity Shares offered in the issue have not been recommended or approved by the Securities and Exchange Board of India ("SEBI"), nor does SEBI guarantee the accuracy or adequacy of the Draft Red Herring Prospectus. Specific attention of the investors is invited of the section titled *"Risk Factors"* beginning on page No. 27 of this Draft Red Herring Prospectus.

Any decision to invest in the Equity Shares described in the DRHP may only be made after the Red Herring Prospectus (RHP) has been filed with the RoC and must be made solely on the basis of such RHP as there may be material changes in the RHP from the Draft Red Herring Prospectus.

The Equity Shares, when Issued, through the RHP, are proposed to be listed on the EMERGE Platform of the National Stock Exchange of India Limited (NSE EMERGE)

For details of the main objects of our Company as contained in its Memorandum of Association, see "*History and Certain Other Corporate Matters*" on page 203 of the DRHP. The liability of the members of our Company is limited. For details of the share capital, capital structure of our Company, the names of the signatories to the Memorandum of Association and the number of shares of our Company subscribed by them of our Company, please see "*Capital Structure*" beginning on page 94 of the DRHP.

| BOOK RUNNING LEAD MANAGER TO THE OFFER | REGISTRAR TO THE OFFER |
|---|---|
| Indcap Advisors – Enabling Growth \| Creating Value | Maashitla |
| **Indcap Advisors Private Limited** | **Maashitla Securities Private Limited** |
| **Address:** Suite# 1201, 12th Floor, Aurora Waterfront, GN 34/1, Sector V, Salt Lake City, Kolkata 700091, West Bengal, India | **Address:** 451, Krishna Apra Business Square, Netaji Subhash Place, Pitampura, Delhi-110034 |
| **Telephone:** 033-4069 8001 | **Telephone:** 011-47581432 |
| **Email:** smeipo@indcap.in | **E-mail:** investor.ipo@maashitla.com |
| **Investor grievance email:** investors@indcap.in | **Investor grievance:** investor.ipo@maashitla.com |
| **Website:** www.indcap.in | **Contact Person:** Mr. Mukul Agrawal |
| **Contact Person:** Shraddha Khanna | **Website:** www.maashitla.com |
| **SEBI registration number:** INM000013031 | **SEBI Registration Number:** INR000004370 |
| | **CIN:** U67100DL2010PTC208725 |

All capitalized terms used herein and not specifically defined shall have the same meaning as ascribed to them in the Draft Red Herring Prospectus.

**On behalf of Board of Directors**
**FOR SPECTRAA TECHNOLOGY SOLUTIONS LIMITED**
**Sd/-**
**Date: March 23, 2026** **Mr. A L Arun Kumar**
**Place: Bengaluru** **Designation: Managing Director**

**SPECTRAA TECHNOLOGY SOLUTIONS LIMITED** is proposing, subject to receipt of requisite approvals, market conditions and other considerations, to make an initial public offer of its Equity Shares and has filed the DRHP dated March 20, 2026 with NSE on March 21, 2026. The DRHP shall be available on the website of the NSE at www.nseindia.com and is available on website of the Company i.e. www.spectraa.com, website of the BRLM to the Offer, Indcap Advisors Private Limited at www.indcap.in. Potential investors should note that investment in equity shares involves a high degree of risk and for details relating to such risks, please see the section entitled 'Risk Factors" on page 27 of the DRHP and the details as may be set out in the RHP, when filed. Potential investors should not rely on the DRHP for making any investment decision.

This announcement has been prepared for publication in India and may not be released in the United States. This announcement does not constitute an offer of securities for sale in any jurisdiction, including the United States, and any securities described in this announcement may not be offered or sold in the United States absent registration under the U.S. Securities Act of 1933 or an exemption from registration. Any public offering of securities to be made in the United States will be made by means of a prospectus that may be obtained from the Company and that will contain detailed information about the Company and management, as well as financial statements. However, the securities described in this announcement are not being offered or sold in the United States



## ಬಾಗಲಕೋಟೆ ಉಪಚುನಾವಣೆ ಮಾಧ್ಯಮ ಕೇಂದ್ರ ಉದ್ಘಾಟನೆ

ಬೆಂಗಳೂರು: ಇಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಬಾಗಲಕೋಟೆ ಉಪಚುನಾವಣೆ ಮಾಧ್ಯಮ ಕೇಂದ್ರವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಅಭ್ಯರ್ಥಿ ವೀರಣ್ಣ ಚರಂತಿಮಠ, ರಾಜ್ಯಸಭಾ ಸದಸ್ಯ ನಾರಾಯಣ ಸಾ ಭಾಂಡಗೆ, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ್, ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪುರ, ರಾಜ್ಯ ಮಾಧ್ಯಮ ಸಹ-ಸಂಚಾಲಕ ಪ್ರಶಾಂತ್ ಕೆಡಂಜಿ ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.



## ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮಾಧ್ಯಮ ಕೇಂದ್ರ ಉದ್ಘಾಟನೆ

ಬೆಂಗಳೂರು: ಇಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮಾಧ್ಯಮ ಕೇಂದ್ರವನ್ನು ಜಿಲ್ಲಾಧ್ಯಕ್ಷ ಎನ್. ರಾಜಶೇಖರ, ಮಾಜಿ ಜಿಲ್ಲಾ ಅಧ್ಯಕ್ಷ ಯಶವಂತರಾವ್ ಜಾಧವ್, ಮಾಜಿ ಶಾಸಕ ಎಂ.ಡಿ. ಲಕ್ಷ್ಮೀನಾರಾಯಣ್, ಮುಖಂಡರಾದ ಶ್ರೀಮತಿ ಗಾಯತ್ರಿ ಸಿದ್ದೇಶ್ವರ, ಲೋಕಿಕೇರಿ ನಾಗರಾಜ್, ರಾಜನಹಳ್ಳಿ ಶಿವಕುಮಾರ್, ದೇವರಮನೆ ಶಿವಕುಮಾರ್, ಕೊಳ್ಳೇಹಳ್ಳಿ ಸತೀಶ್, ಬಿ ರಮೇಶ್ ನಾಯಕ್, ರಾಜ್ಯ ಮಾಧ್ಯಮ ಸಹ-ಸಂಚಾಲಕ ಪ್ರಶಾಂತ್ ಕೆಡಂಜಿ ಉದ್ಘಾಟಿಸಿದರು.

## ಶ್ರೀ ನರೇಂದ್ರಾಚಾರ್ಯಜಿ ಮಹಾರಾಜರಿಂದ 'ಮನುಷ್ಯ ದೈವತ್ವದ ಕಡೆಗೆ' ದಿವ್ಯ ಸಂದೇಶ





ಬೆಂಗಳೂರು: "ಮಾನವ ಜೀವನವು ಅತ್ಯಂತ ಪಾವನ ಮತ್ತು ಮಹತ್ವಪೂರ್ಣವಾದುದು. ಭಗವಂತನು ನಮ್ಮನ್ನು ಭೂಮಿಗೆ ಕಳುಹಿಸಿದ್ದು ಕೇವಲ ಬದುಕಲು ಮಾತ್ರವಲ್ಲ, ಒಂದು ಮಹತ್ತರ ಸಾಧನೆಯನ್ನು ಸಾಕಾರಗೊಳಿಸಲು. ಪ್ರತಿಯೊಬ್ಬರೂ 'ನೀವು ಬಾಳಿರಿ, ಇತರರನ್ನೂ ಬಾಳಿಸಿರಿ' ಎನ್ನುವ ತತ್ತ್ವವನ್ನು ಅಳವಡಿಸಿಕೊಂಡು, ಸಮಾಜಕ್ಕೆ ಭಾರವಾಗದೆ, ಅತ್ಯಗತ್ಯವಾದ ವ್ಯಕ್ತಿಯಾಗಿ ಬಾಳಬೇಕು. ಜನರಲ್ಲಿ ಆಸ್ತಿಕ ಭಾವನೆಯನ್ನು ಜಾಗೃತಗೊಳಿಸಿ, ಜಗತ್ತಿನ ಇಹ ಮತ್ತು ಪರವನ್ನು ಸರಿಯಾಗಿ ಅರಿತಾಗ ಮನುಷ್ಯನು ದೈವತ್ವದ ಕಡೆಗೆ ಸಾಗಲು ಸಾಧ್ಯ," ಎಂದು ಜಗದ್ಗುರು ರಾಮಾನಂದಾಚಾರ್ಯ ನರೇಂದ್ರಾಚಾರ್ಯಜಿ ಮಹಾರಾಜರು ದಿವ್ಯ ಸಂದೇಶ ನೀಡಿದರು.

ಮಹಾರಾಷ್ಟ್ರದ ರತ್ನಾಗಿರಿ ಜಿಲ್ಲೆಯ ನಾಣಿಜಧಾಮದ (ಜಗದ್ಗುರು ರಾಮಾನಂದಾಚಾರ್ಯ ಪರಂಪರೆಯ ದಕ್ಷಿಣಪೀಠ) ಪೀಠಾಧೀಪತಿಗಳಾದ ಶ್ರೀ ಜಗದ್ಗುರು ನರೇಂದ್ರಾಚಾರ್ಯಜಿ ಮಹಾರಾಜರು, ತಮ್ಮ ಧರ್ಮ ಸಂಚಾರದ ಅಂಗವಾಗಿ ಬೆಂಗಳೂರಿಗೆ ಆಗಮಿಸಿದ್ದರು. ಇಂದು ನಗರದ ಶಂಕರಪುರಂನ ನ್ಯಾಷನಲ್ ಕಾಲೇಜು ಹತ್ತಿರವಿರುವ ಶ್ರೀ ಚಂದ್ರಶೇಖರ ಭಾರತಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ವಿಶೇಷ ಸಭೆಯಲ್ಲಿ ಅವರು ಭಕ್ತರನ್ನು ಉದ್ದೇಶಿಸಿ ಮಾತನಾಡಿದರು.

ತಮ್ಮ ದಿವ್ಯ ಆಶೀರ್ವಚನದಲ್ಲಿ ಶ್ರೀಗಳು, "ಇಂದಿನ ಆಧುನಿಕ ಯುಗದಲ್ಲಿ ಆಧ್ಯಾತ್ಮ ಮತ್ತು ವಿಜ್ಞಾನ ಎರಡನ್ನೂ ಸಮಾನವಾಗಿ ಅರಿತು ಮುನ್ನಡೆಯುವ ಅಗತ್ಯವಿದೆ. ವಿಜ್ಞಾನವು ಭೌತಿಕ ಜೀವನವನ್ನು ಸುಗಮಗೊಳಿಸಿದರೆ, ಆಧ್ಯಾತ್ಮವು ಮಾನಸಿಕ ಶಾಂತಿ ಮತ್ತು ಜೀವನದ ಉದ್ದೇಶವನ್ನು ಕಂಡುಕೊಳ್ಳಲು ಸಹಾಯ ಮಾಡುತ್ತದೆ. ಈ ಎರಡರ ಸಮನ್ವಯವು ಪರಿಪೂರ್ಣ ಬದುಕಿಗೆ ನಾಂದಿ ಹಾಡುತ್ತದೆ," ಎಂದು ಒತ್ತಿ ಹೇಳಿದರು. ಮುಂದುವರಿದು, "ಕೇವಲ ತಾನು ಬಾಳುವುದು ಮುಖ್ಯವಲ್ಲ, ಇತರರೂ ಗೌರವದಿಂದ ಬಾಳಲು ಅವಕಾಶ ಮಾಡಿಕೊಡುವುದು ಮತ್ತು ಅವರ ಜೀವನಕ್ಕೆ ನಮ್ಮ ಕೈಲಾದ ಕೊಡುಗೆ ನೀಡುವುದು ಮುಖ್ಯ. ಈ ದಯಾ ಮತ್ತು ಸಹಬಾಳ್ವೆಯ ಗುಣಗಳು ನಮ್ಮಲ್ಲಿದ್ದಾಗ ಮಾತ್ರ ನಾವು ಭಗವತ್ ಪ್ರಾಪ್ತಿಗೆ ಅರ್ಹರಾಗುತ್ತೇವೆ," ಎಂದು ಅವರು ಮಾರ್ಮಿಕವಾಗಿ ವಿವರಿಸಿದರು.

ಬೆಳಿಗ್ಗೆಯಿಂದಲೇ ಸರದಿ ಸಾಲಿನಲ್ಲಿ ನಿಂತಿದ್ದ ಹಳೆ ಮೈಸೂರು ಭಾಗ ಸೇರಿದಂತೆ ರಾಜ್ಯದ ವಿವಿಧೆಡೆಯಿಂದ ಆಗಮಿಸಿದ್ದ ಸಾವಿರಾರು ಭಕ್ತರಿಗೆ ಜಗದ್ಗುರುಗಳು ದರ್ಶನವಿತ್ತರು. ಪ್ರತಿಯೊಬ್ಬ ಭಕ್ತರನ್ನು ಖುದ್ದು ಮಾತನಾಡಿಸಿದ ಶ್ರೀಗಳು, ಅವರ ಕಷ್ಟ-ಕಾರ್ಪಣ್ಯಗಳನ್ನು ಮತ್ತು ಸಮಸ್ಯೆಗಳನ್ನು ತಾಳ್ಮೆಯಿಂದ ಆಲಿಸಿದರು. ಕೇವಲ ಆಧ್ಯಾತ್ಮಿಕ ಸಲಹೆಗಳನ್ನಷ್ಟೇ ನೀಡದೆ, ಪ್ರಾಯೋಗಿಕ ಮತ್ತು ಲೌಕಿಕ ಪರಿಹಾರಗಳನ್ನೂ ಸೂಚಿಸಿ ಅವರಿಗೆ ಅಭಯ ಹಸ್ತ ನೀಡಿದರು. "ಪರಿಹಾರವಿಲ್ಲದ ಸಮಸ್ಯೆಯೇ ಇಲ್ಲ. ಪ್ರತಿಯೊಂದು ಸಮಸ್ಯೆಗೂ ಒಂದು ಪರಿಹಾರವಿದ್ದೇ ಇರುತ್ತದೆ. ಅದನ್ನು ಹುಡುಕುವ ಪ್ರಯತ್ನ ಮತ್ತು ದೇವರಲ್ಲಿ ಅಚಲವಾದ ಭಕ್ತಿ ನಮ್ಮಲ್ಲಿರಬೇಕು," ಎಂದು ಹೇಳುವ ಮೂಲಕ ಭಕ್ತರಲ್ಲಿ ಆಶಾಭಾವನೆ ಮತ್ತು ಆತ್ಮವಿಶ್ವಾಸವನ್ನು ತುಂಬಿದರು.

ಬೆಂಗಳೂರು ಭಾಗದ ಭಕ್ತರಿಗೆ ದರ್ಶನ ಪಡೆಯಲು ಮತ್ತು ಕಾರ್ಯಕ್ರಮದಲ್ಲಿ ಭಾಗವಹಿಸಲು ಸಕಲ ವ್ಯವಸ್ಥೆಗಳನ್ನು ಮಾಡಲಾಗಿತ್ತು. ಕಾರ್ಯಕ್ರಮವು ಅತ್ಯಂತ ಸಾಂಗವಾಗಿ ಮತ್ತು ಶಿಸ್ತುಬದ್ಧವಾಗಿ ನಡೆಯುವಂತೆ 'ಶ್ರೀ ರಾಮಾನಂದ ಸಂಪ್ರದಾಯ ಭಕ್ತ ಸೇವಾ ಸಮಿತಿ, ಬೆಂಗಳೂರು' ಇವರು ಶ್ರಮಿಸಿದ್ದರು.

## ಯೋಜನಾ ಬದ್ಧವಾಗಿ ಪಟ್ಟಣಗಳ ಅಭಿವೃದ್ಧಿಯಾಗಲಿ : ಬಸವರಾಜ ಬೊಮ್ಮಾಯಿ

ಹಾವೇರಿ (ರಟ್ಟಿಹಳ್ಳಿ) : ಭದ್ರಾ ಮೇಲ್ದಂಡೆ ಯೋಜನೆಗೆ ತಾಂತ್ರಿಕ ಸಲಹಾ ಸಮಿತಿ (ಟಿಎಸಿ) ಒಪ್ಪಿಗೆ ನೀಡಿದೆ. ಆದಷ್ಟು ಬೇಗನೇ ಈ ಯೋಜನೆಗೆ ಕಾಯಕಲ್ಪ ಆಗುತ್ತದೆ. ಕೇಂದ್ರ ಮತ್ತು ರಾಜ್ಯದ ಸಹಕಾರದಿಂದ ಭದ್ರಾ ಮೇಲ್ದಂಡೆ ಯೋಜನೆ ಯಶಸ್ವಿಯಾಗುವ ವಿಶ್ವಾಸ ಇದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿ ಜಿಲ್ಲೆಯ ರಟ್ಟಿಹಳ್ಳಿಯಲ್ಲಿ ಪಟ್ಟಣ ಪಂಚಾಯತ ವತಿಯಿಂದ ನಿರ್ಮಿಸಲಾದ ಕುಮದ್ವತಿ ವಾಣಿಜ್ಯ ಸಂಕೀರ್ಣದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ, ಮಾತನಾಡಿದರು. ಬಹಳ ದಿನಗಳಿಂದ ನೆನೆಗುದಿಗೆ ಬಿದ್ದಿರುವ ವಾಣಿಜ್ಯ ಸಂಕೀರ್ಣ ಇವತ್ತು ಉದ್ಘಾಟನೆ ಆಗುತ್ತಿರುವುದು ಸಂತಸದ ಸಂಗತಿ, ಶಾಸಕರು ಆಸಕ್ತಿ ವಹಿಸಿ ಪೂರ್ಣಗೊಳಿಸಿದ್ದಾರೆ. ಹೆಚ್ಚಿನ ಆದಾಯ ಬಂದು ಪಟ್ಟಣ ಪಂಚಾಯತಿಗೆ ಅನುಕೂಲವಾಗುತ್ತದೆ. ಪಟ್ಟಣ ಪಂಚಾಯತಿ ಸದಸ್ಯರು ಮತ್ತು ಶಾಸಕರಿಗೆ ವಿಶೇಷ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ರಟ್ಟಿಹಳ್ಳಿ ಈಗ ತಾಲೂಕು ಪಂಚಾಯತಿ, 1998 ರಲ್ಲಿ ನಾನು ವಿಧಾನ ಪರಿಷತ್ತಿಗೆ ಚುನಾವಣೆಗೆ ನಿಂತಾಗ ರಟ್ಟಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಬಂದು ಚುನಾವಣಾ ಪ್ರಚಾರ ಮಾಡಿದ್ದೆ. ಆಗ ಎಲ್ಲರೂ ಪಕ್ಷಾತೀತವಾಗಿ ಸಹಾಯ ಮಾಡಿದ್ದರು. ಈ ಊರು ದೊಡ್ಡ ಪ್ರಮಾಣದಲ್ಲಿ ಅಭಿವೃದ್ಧಿಯಾಗಲು ಎಲ್ಲ ಅವಕಾಶಗಳಿವೆ. ತಾಲೂಕಾ ಕೇಂದ್ರಕ್ಕೆ ಬೇಕಾಗಿರುವ ಆಡಳಿತ ಸಂಕೀರ್ಣ, ಆಸ್ಪತ್ರೆ, ಕಾಲೇಜು, ಮಿನಿ ವಿಧಾನಸೌಧ ಆಗುವ ಅವಶ್ಯಕತೆ ಇದೆ. ಇದರ ಜೊತೆಗೆ ಊರಿನ ಅಭಿವೃದ್ಧಿ ಯೋಜನಾ ಬದ್ಧವಾಗಿ ಆಗಬೇಕು. ಪಟ್ಟಣ ಪಂಚಾಯತಿ ಸದಸ್ಯರು ಯೋಜನೆಯನ್ನು ಸಂಪೂರ್ಣವಾಗಿ ಮನಗಂಡು ವಿಸ್ತರಣೆ ಮಾಡಿದರೆ ಜನ ಮೆಚ್ಚುತ್ತಾರೆ. ಇಲ್ಲದಿದ್ದರೆ ಹಳೆ ಊರು ಆದಂಗೆ ಆಗುತ್ತದೆ. ಯೋಜನಾ ಬದ್ಧವಾಗಿ ಅಭಿವೃದ್ಧಿ ಮಾಡುವುದು ಅವಶ್ಯಕತೆ ಇದೆ. ನಮ್ಮ ಕಾಲದಲ್ಲಿ ಸುಮಾರು



7 ಸಾವಿರ ಕೋಟಿ ರೂ. ಪಟ್ಟಣ ಪಂಚಾಯತಿ, ಪುರಸಭೆಗೆ ಹಣ ಕೊಟ್ಟಿದ್ದೇವು. ನ್ಯಾಯಸಮ್ಮತವಾಗಿ ಹಣ ರಟ್ಟಿಹಳ್ಳಿ, ಹಿರೆಕೆರೂರು, ರಾಣೆಬೆನ್ನೂರು ಸೇರಿದಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಟೇಟ್ ಫೈನಾನ್ಸ್ ಕಮಿಷನ್ ಶಿಫಾರಸ್ಸು ಮಾಡಿರುವ ಹಣ್ಣ ಬಂದಿಲ್ಲ. ಅದು ಬಂದರೆ ದೊಡ್ಡ ಪ್ರಮಾಣದಲ್ಲಿ ಹಣ ಬರುತ್ತದೆ. ಅದನ್ನು ತರಲು ಶಾಸಕರೊಂದಿಗೆ ಕೈ ಜೋಡಿಸಲು ನಾನು ಸಿದ್ಧನಿದ್ದೇನೆ ಎಂದು ಹೇಳಿದರು.

ಅಭಿವೃದ್ದಿಗೆ ಆದ್ಯತೆ

ಗ್ರಾಮ, ತಾಲೂಕು, ಜಿಲ್ಲಾ, ವಿಧಾನಸಭೆ, ಎಂಪಿ ಐದೂ ಸಂಸ್ಥೆಗಳು ಒಂದಾಗಿ ಕೆಲಸ ಮಾಡಬೇಕು. ಐದು ವರ್ಷದಲ್ಲಿ ಒಂದು ತಿಂಗಳು ರಾಜಕೀಯ ಮಾಡೋಣ. ಉಳಿದ ಅವಧಿ ಅಭಿವೃದ್ಧಿ ಮಾಡೋಣ. ಆಗ ಜನರು ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಡುತ್ತಾರೆ. ಆ ನಿಟ್ಟಿನಲ್ಲಿ ರಟ್ಟಿಹಳ್ಳಿ ಪಟ್ಟಣ ಪಂಚಾಯತಿ ಸದಸ್ಯರು ಉತ್ಸಾಹದಲ್ಲಿದ್ದಾರೆ. ಅವರು ಅಭಿವೃದ್ಧಿ ಕೆಲಸ ಮಾಡಲು ಮುಂದಾಗಿದ್ದಾರೆ. ಅವರಿಗೆ ಖಂಡಿತವಾಗಿ ಬೆಂಬಲ ಕೊಡುತ್ತೇವೆ. ಈ ದೇಶದಲ್ಲಿ ಶೇ 40 ರಷ್ಟು ಜನ ನಗರ ವಾಸಿಗಳಾಗಿದ್ದಾರೆ. ನಗರೀಕರಣ ಪ್ರತಿ ವರ್ಷ ಹೆಚ್ಚಾಗುತ್ತಿದೆ. ಈಗಿನಿಂದಲೇ ಪುರಸಭೆ, ಪಟ್ಟಣ ಪಂಚಾಯತಿ, ನಗರ, ಮಹಾನಗರ ಪಾಲಿಕೆಗಳನ್ನು ಸದೃಢ ಮಾಡಿ ಯೋಜನಾ ಬದ್ಧವಾಗಿ ಅಭಿವೃದ್ಧಿ ಮಾಡಿದರೆ ಉತ್ತಮ ನಾಡು, ದೇಶ ಕಟ್ಟಲು ಸಾಧ್ಯ. ಇಲ್ಲದಿದ್ದರೆ ಸ್ಲಮ್‌ಗಳ ಸಂಖ್ಯೆ ಹೆಚ್ಚಾಗುತ್ತವೆ. ಇದರಿಂದ ಸ್ಲಮ್ ಗಳ ಭಾರತ ಆಗುತ್ತದೆ. ಅದು ಆಗದಂತೆ ನೋಡಿಕೊಳ್ಳಬೇಕು. ಯೋಜನೆಗಳು ಕೆಳಗಿನಿಂದ ಹೋಗಬೇಕು. ಅನುದಾನ ಮೇಲಿನಿಂದ ಬರಬೇಕು. ಹಣಕಾಸು ಜೇನು ತುಪ್ಪದಂತೆ ನೇರವಾಗಿ ಕೆಳಗೆ ಬರಬೇಕು. ಅದು ಗ್ರೀಸ್ ಆದಂತೆ ಮಧ್ಯದಲ್ಲಿ ನಿಂತಿದೆ. ಈ ವ್ಯವಸ್ಥೆಯನ್ನು ನಾವೆಲ್ಲರೂ ಸೇರಿ ಸರಿ ಮಾಡೋಣ. ರಟ್ಟಿಹಳ್ಳಿ ಪಟ್ಟಣ ಪಂಚಾಯತಿ ತಾಲೂಕು ಹೊಸದಾಗಿ ಆಗಿದೆ. ಯುವ ತಾಲೂಕು ಈಗಲೇ ಶಕ್ತಿ ತುಂಬಿದರೆ ಉತ್ತಮ ನಗರ ಮಾಡಲು ಸಾಧ್ಯ ಆ ಕೆಲಸ ನಾವು ನೀವು ಸೇರಿ ಮಾಡೋಣ ಎಂದು ಹೇಳಿದರು.

ನೀರಾವರಿಗೆ ಆದ್ಯತೆ

ಈ ಭಾಗದಲ್ಲಿ ಇನ್ನಷ್ಟು ನೀರಾವರಿ ಆಗಬೇಕಿದೆ. ಜನ, ಅಭಿವೃದ್ಧಿ, ನೆಲ, ಜಲ ವಿಚಾರದಲ್ಲಿ ನಾವೆಲ್ಲ ಒಂದಾಗಿದ್ದೇವೆ. ಆ ನಿಟ್ಟಿನಲ್ಲಿ ಕೆಲಸ ಮಾಡೋಣ. ತುಂಗಾ ಮೇಲ್ದಂಡೆ ಯೋಜನೆ ದೊಡ್ಡ ಸವಾಲಾಗಿತ್ತು. ಅದನ್ನು ನಾವು ಯಶಸ್ವಿಯಾಗಿ ನಿಭಾಯಿಸಿದ್ದೇವು. ನಾಲ್ಕು ಜನ ಗುತ್ತಿಗೆದಾರರು ಯೋಜನೆ ಬಿಟ್ಟು ಹೋಗಿದ್ದರು. ನಾನು 2012 ಕ್ಕೆ ನೀರು ಕೊಡುವುದಾಗಿ ಹೇಳಿದ್ದೆ. ನನ್ನ ಗೆಳೆಯ ಇಂಜನೀಯರ್ ಇದ್ದ ಅವನಿಗೆ ಹೇಳಿದೆ ಅವನು ಕೊಂಕಣ ರೈಲ್ವೆ ಎಂಜನೀಯರ್ ಅವರನ್ನು ಕರೆದುಕೊಂಡು ಹೋಗುವಂತೆ ಹೇಳಿದ ಅವರನ್ನು ಕರೆಯಿಸಿ ಯೋಜನೆ ಯಶಸ್ವಿ ಮಾಡಿದೆವು. ಅಸಾಧ್ಯ ಇದ್ದನ್ನು ಸಾಧ್ಯ ಮಾಡಿ ನೀರು ಹರಿಸಿದ್ದು ಸಂತೋಷ ಆಗಿತ್ತು. ಭದ್ರಾ ಮೇಲ್ದಂಡೆ ಯೋಜನೆ ಕೂಡ ಸವಾಲಾಗಿತ್ತು. ಅದನ್ನೂ ನಾವೇ ಶುರು ಮಾಡಿದ್ದೇವು. ಮುಂದಿನ ಕೆಲಸಕ್ಕಾಗಿ ಕೇಂದ್ರದ ನೆರವಿಗೆ ಗುರುಗಳು ದೆಹಲಿಗೆ ಬಂದಿದ್ದರು. ತಾಂತ್ರಿಕ ಸಲಹಾ ಸಮಿತಿ (ಟಿಎಸಿ) ಕೂಡ ಒಪ್ಪಿಗೆ ನೀಡಿದೆ. ಆದಷ್ಟು ಬೇಗನೇ ಅಪ್ಪರ್ ಭದ್ರಾ ಯೋಜನೆಗೆ ಕಾಯಕಲ್ಪ ಆಗುತ್ತದೆ. ಆ ಯೋಜನೆಗೂ ಕೇಂದ್ರ ಮತ್ತು ರಾಜ್ಯದ ಸಹಕಾರದಿಂದ ಯಶಸ್ವಿಯಾಗುವ ವಿಶ್ವಾಸ ಇದೆ ಎಂದು ಹೇಳಿದರು.

ಡಿಸಿಸಿ ಬ್ಯಾಂಕ್ ಅಗತ್ಯ

ನಮ್ಮ ಹಾವೇರಿಗೆ ಒಂದು ಡಿಸಿಸಿ ಬ್ಯಾಂಕ್ ಬೇಕು ಎಂದು ಹೋರಾಟ ಮಾಡುತ್ತ ಬಂದಿದ್ದೇವೆ. ಕೆಎಂಎಫ್ ಮತ್ತು ಡಿಸಿಸಿ ಬ್ಯಾಂಕ್ ಗಾಗಿ ಹೋರಾಟ ಮಾಡಿದ್ದೇವು. ನಾನು ಸಿಎಂ ಆಗಿದ್ದಾಗ ಕೆಎಂಎಫ್ ತಂದಿದ್ದೇವೆ. ಮೆಗಾ ಡೈರಿಗೆ 100 ಕೋಟಿ ರೂ. ಕೊಟ್ಟಿದ್ದೇನೆ. ಕೇಂದ್ರ ಸಚಿವ ಅಮಿತ್ ಶಾ ಅವರಿಗೆ ಈ ಬಗ್ಗೆ ಮನವರಿಕೆ ಮಾಡಿದೆವು ಅವರು ಒಂದು ಜಿಲ್ಲೆಗೆ ಒಂದು ಡಿಸಿಸಿ ಬ್ಯಾಂಕ್ ಅಂತ ಆದೇಶ ಮಾಡಿದ್ದಾರೆ. ಆ ಆದೇಶ ನಬಾರ್ಡ್‌ಗೆ ಬಂದಿದ್ದು, ಅದರ ಮೂಲಕ ರಾಜ್ಯ ಸರ್ಕಾರಕ್ಕೆ ಬಂದಿದೆ. ರಾಜ್ಯ ಸರ್ಕಾರ ಆರ್‌ಬಿಐ ಗೆ ಶಿಫಾರಸ್ಸು ಮಾಡಿದರೆ ಆದಷ್ಟು ಬೇಗ ನಮ್ಮದೇ ಆದ ಡಿಸಿಸಿ ಬ್ಯಾಂಕ್ ಆಗುತ್ತದೆ. ಅತಿ ಹೆಚ್ಚು ಠೇವಣಿ ಇರುವುದು ಹಾವೇರಿ ಜಿಲ್ಲೆಯದು, ಅದು ಬಹಳ ಮುಖ್ಯ ನಮ್ಮ ಠೇವಣಿ ಹಣ ನಮ್ಮ ರೈತರಿಗೆ ಹೆಚ್ಚಿನ ಸಾಲ ಸಿಗಬೇಕು. ಆದಷ್ಟು ಬೇಗ ಆಗುತ್ತದೆ ಎನ್ನುವ ವಿಶ್ವಾಸ ಇದೆ. ಎಲ್ಲರೂ ಸಹಕಾರ ಕೊಡುವ ವಿಶ್ವಾಸ ಇದೆ. ಶಾಸಕರ ಸಹಕಾರವೂ ಇರಲಿ ಎಂದು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಶಾಸಕರಾದ ಯು.ಬಿ.ಬಣಕಾರ, ಪಟ್ಟಣ ಪಂಚಾಯತ ಅಧ್ಯಕ್ಷರಾದ ರವೀಂದ್ರಪ್ಪ ಮುದಿಯಪ್ಪನವರ, ಉಪಾಧ್ಯಕ್ಷರಾದ ಶಿವಕುಮಾರ ಉಪ್ಪಾರ ಸೇರಿದಂತೆ ಪಟ್ಟಣ ಪಂಚಾಯತ ಸದಸ್ಯರು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ಭಾರತೀಯ ಸಂಸ್ಕೃತಿ ಪುರಾಣಗಳಲ್ಲಿ ಅಪಾರವಾದ ಮಹತ್ವವನ್ನು ನೀರಿಗೆ ನೀಡಲಾಗಿದೆ ನೀರನ್ನು ಜೀವಧಾರೆ ತಾಯಿ ಎನ್ನುತ್ತಾರೆ

ಚಾಮರಾಜನಗರ: ಭಾರತೀಯ ಸಂಸ್ಕೃತಿ ಪುರಾಣಗಳಲ್ಲಿ ಅಪಾರವಾದ ಮಹತ್ವವನ್ನು ನೀರಿಗೆ ನೀಡಲಾಗಿದೆ .ನೀರನ್ನು ಜೀವಧಾರೆ ತಾಯಿ ಎಂದು ಕರೆಯುಲಾಗಿದೆ .ಶಿವ ಪುರಾಣ,ಮತ್ಸ್ಯ ಪುರಾಣ ರಾಮಾಯಣ ಮಾಭಾರತ ಹಾಗೂ ವೇದವ್ಯಾಸರು ನೀರನ್ನು ತ್ಯಾಗದ ಸಂಕೇತ ಎಂದಿದ್ದಾರೆ ಎಂದು ಸಂಸ್ಕೃತಿ ಚಿಂತಕ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ಜೈಹಿಂದ್ ಪ್ರತಿಷ್ಠಾನ.ಹಾಗೂ ಋಗ್ವೇದಿ ಯೂತ್ ಕ್ಲಬ್ ಹರದನಹಳ್ಳಿ ಕಲ್ಯಾಣಿಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜಲ ದಿನದಲ್ಲಿ ಮಾತನಾಡಿ ವಿಶ್ವ ಜಲ ದಿನವನ್ನು ಪ್ರತಿ ವರ್ಷ ಮಾರ್ಚ್ 22 ರಂದು ಆಚರಿಸಲಾಗುತ್ತಿದೆ. 1993 ರಿಂದ ವಿಶ್ವ ಸಂಸ್ಥೆ ಪ್ರಪಂಚದ ಎಲ್ಲಾ ದೇಶಗಳಲ್ಲೂ ನೀರಿನ ಜಾಗೃತಿ, ಶುದ್ಧ ನೀರು ನೈರ್ಮಲ್ಯ ಹಾಗೂ ಸುಸ್ಥಿರ ಅಭಿವೃದ್ಧಿಗಾಗಿ ಪ್ರತಿ ವರ್ಷ ಒಂದೊಂದು ಪರಿಕಲ್ಪನೆಯ ಮೂಲಕ ಜನರಲ್ಲಿ ಜಾಗೃತಗೊಳಿಸುವ ಮತ್ತು ನೀರನ್ನು ವ್ಯರ್ಥ ಮಾಡಡಿರುವ ಹಾಗೂ ಸದ್ಬಳಕೆ, ಜಾಗೃತಿಯನ್ನು ನಿರಂತರವಾಗಿ ನೆರವೇರಿಸಿಕೊಂಡು ಬರುತ್ತಿದೆ. ವಿಶ್ವಸಂಸ್ಥೆಯ ಈ ಕಾರ್ಯ ಮಹತ್ತರವಾದ ಕಾರ್ಯ. ಜಲ ನಮ್ಮ ಬ್ರಹ್ಮಾಂಡದ ಮೂಲ. ಭಾರತೀಯ ಸಂಸ್ಕೃತಿಯಲ್ಲಿ ನೀರಿಗೆ ಪ್ರಮುಖ ಸ್ಥಾನಮಾನವನ್ನು ನೀಡಲಾಗಿದೆ. ಪ್ರತಿ ಕಾರ್ಯದ ಮೊದಲು ಶುದ್ಧೀಕರಣದ ಮೂಲಕ ಕಳಶ ಪೂಜೆಯನ್ನು ಮಾಡಿ ಪ್ರತಿ ಮನೆಯಲ್ಲಿ ಕಳಶ ಪ್ರತಿಷ್ಠಾಪನೆಯ ಮೂಲಕ ಗಂಗೆಯನ್ನು ಸಂರಕ್ಷಿಸುವ , ಮಹತ್ವ ಸಾರುವ ಜವಾಬ್ದಾರಿ ರೂಢಿಗೆ ಬಂದಿದೆ. ಭಾರತೀಯ ಎಲ್ಲಾ ನದಿಗಳ ಹೆಸರುಗಳು ತಾಯಿ ಸ್ವರೂಪದಲ್ಲಿದ್ದು ಎಲ್ಲ ನದಿಗಳ ಸಂರಕ್ಷಣೆ, ಕೊಳ, ಕಲ್ಯಾಣಿಗಳ ಅಭಿವೃದ್ಧಿ ಮಾಡಬೇಕಾಗಿದೆ ಎಂದರು.

ಗ್ರಾಮ ವಿಕಾಸ ಸಂಸ್ಥೆಯ ಸಂಯೋಜಕರಾದ ಚಂದ್ರ ಮೋಹನ್ ಕಟ್ಟೆಪುರ ಮಾತನಾಡಿ.ಹರದನಹಳ್ಳಿ ಐತಿಹಾಸಿಕ ಗ್ರಾಮ. ಇಲ್ಲಿನ ಕಲ್ಯಾಣಿ 2017ರಲ್ಲಿ ಬಹಳ ಶಿಥಿಲಗೊಂಡು ಬಳಸಲು ಯೋಗ್ಯವಾಗಿ ಇರಲಿಲ್ಲ. ಗ್ರಾಮಸ್ತರು, ಯುವಕರು, ಸರ್ಕಾರ ಗ್ರಾಮಪಂಚಾಯಿತಿ ಇಂದು ಪುನರ್ನಿರ್ಮಾಣ ಮಾಡಿ ರಾಜ್ಯಕ್ಕೆ ಆದರ್ಶವಾಗಿದೆ. ಕಲ್ಯಾಣಿ ಸಂಗ್ರಹಣೆಯಿಂದ ವಾತಾವರಣ ಬಹಳ ಅತ್ಯುತ್ತಮವಾಗಿದೆ ಎಂದರು.

ಹರದನಹಳ್ಳಿಯ ಸಮಾಜ ಸೇವಕರಾದ ಗಿರೀಶ್ ಮಾತನಾಡಿ ಹರದನಹಳ್ಳಿಯ ಕಲ್ಯಾಣ ನಿರ್ಮಾಣದ ಹಿಂದೆ ಬಹಳಷ್ಟು ಜನರ ಸೇವೆ ಇದೆ. ಕಲ್ಯಾಣಿಯಲ್ಲಿ ದೇವರ ಕಾರ್ಯ, ತೆಪ್ಪೋತ್ಸವ ನಡೆಯುತ್ತಿದ್ದು ಜನರಿಗೆ ಆನಂದವನ್ನು ತಂದಿದೆ. ಕಲ್ಯಾಣಿಯಲ್ಲಿ ಯಡಿಯೂರು ಸಿದ್ದಲಿಂಗೇಶ್ವರರು ದೇವತಾ ಕಾರ್ಯಕ್ಕೆ ಜಲವನ್ನು ಬಳಸುತ್ತಿದ್ದರು ಎಂದು ನಂಬಿಕೆ ಇದೆ ಎಂದರು.

ಕಾರ್ಯಕ್ರಮದಲ್ಲಿ ಹಸಿರುಪಡೆಯ ಡಾ. ಅಕ್ಷತಾ ಜೈನ್, ಸತೀಶಕುಮಾರ್, ಗ್ರಾಮ ವಿಕಾಸ ಸಂಸ್ಥೆಯ ಮಂಜುನಾಥ್, ವಿವೇಕಾನಂದ ಪಾಠಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.



## ಜಯನಗರದಲ್ಲಿ ಸಾಂಸ್ಕೃತಿಕ ಸೌರಭ: 'ಪರಮ್ ವಿಹಾರ' ವೇದಿಕೆಯಲ್ಲಿ ಮೇಳೈಸಿದ ಗಾನ-ನೃತ್ಯ ವೈಭವ

ಪರಮ್ ವಿಹಾರದಲ್ಲಿ ಉದಯೋನ್ಮುಖ ಕಲಾವಿದರ ಅನಾವರಣ

ಮಾನ್ಯ ಮಂಜುನಾಥ್ ಗಾಯನಕ್ಕೆ ಶ್ರೋತೃಗಳು ಫಿದಾ

ಮನಸೂರೆಗೊಂಡ ಶ್ರೀನಿಧಿ ರಾಮಸ್ವಾಮಿ ನೃತ್ಯ ಪ್ರದರ್ಶನ

ಪಟ್ಟಾಭಿರಾಮ ಸೇವಾ ಮಂಡಳಿಯಲ್ಲಿ ಮೇಳೈಸಿದ ಶಾಸ್ತ್ರೀಯ ನಾದ

ಗಾನ-ನೃತ್ಯ ಸಂಗಮಕ್ಕೆ ಬೆಂಗಳೂರು ಕಲಾಪ್ರೇಮಿಗಳ ಸಾಕ್ಷಿ

ಪರಮ್ ಫೌಂಡೇಶನ್‌ನ ಪರಮ್ ವಿಹಾರ ಹತ್ತನೇ ಸರಣಿ ಯಶಸ್ವಿ

ಬೆಂಗಳೂರು: ಇಲ್ಲಿನ ಜಯನಗರದಲ್ಲಿರುವ ಪಟ್ಟಾಭಿರಾಮ ಸೇವಾ ಮಂಡಳಿಯ ಸಭಾಂಗಣವು ಭಾನುವಾರ ಸಂಜೆ ಒಂದು ಅಪರೂಪದ ಕಲಾ ದರ್ಶನಕ್ಕೆ ಸಾಕ್ಷಿಯಾಯಿತು. 'ಪರಮ್ ಫೌಂಡೇಶನ್' ವತಿಯಿಂದ ಆಯೋಜಿಸಲಾಗಿದ್ದ 'ಪರಮ್ ವಿಹಾರ-10' ಕಾರ್ಯಕ್ರಮವು ಶಾಸ್ತ್ರೀಯ ಸಂಗೀತ ಮತ್ತು ನೃತ್ಯದ ಘಮವನ್ನು ಪಸರಿಸಿ, ಸೇರಿದ್ದ ಕಲಾಪ್ರೇಮಿಗಳ ಮನಗೆಲ್ಲುವಲ್ಲಿ ಯಶಸ್ವಿಯಾಯಿತು. ಉದಯೋನ್ಮುಖ ಕಲಾವಿದರಿಗೆ ವೇದಿಕೆ ಕಲ್ಪಿಸುವ ಈ ಪ್ರಯತ್ನಕ್ಕೆ ಪ್ರೇಕ್ಷಕರಿಂದ ಮೆಚ್ಚುಗೆ ವ್ಯಕ್ತವಾಯಿತು.

**ಮನಸೂರೆಗೊಂಡ ಮಾನ್ಯ ಮಂಜುನಾಥ್ ಕಂಠಸಿರಿ**

ಕಾರ್ಯಕ್ರಮದ ಆರಂಭದಲ್ಲಿ ಕುಮಾರಿ ಮಾನ್ಯ ಮಂಜುನಾಥ್ ಅವರ ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿಯು ಸಭಿಕರನ್ನು ಮಂತ್ರಮುಗ್ಧಗೊಳಿಸಿತು. ತಮ್ಮ




ಸುಶ್ರಾವ್ಯ ಕಂಠದಿಂದ ವಿವಿಧ ರಾಗಗಳನ್ನು ಪ್ರಸ್ತುತಪಡಿಸಿದ ಅವರು, ಲಯಬದ್ಧ ಗಾಯನದ ಮೂಲಕ ಗಮನ ಸೆಳೆದರು. ಇವರಿಗೆ ಮೃದಂಗದಲ್ಲಿ ವಿದ್ವಾನ್ ಸುಮಧುರ್ ಅನೂರ್ ಹಾಗೂ ಪಿಟೀಲಿನಲ್ಲಿ ವಿದ್ವಾನ್ ರಾಘವೇಂದ್ರ ಡಿ.ಆರ್. ಅವರು ಅತ್ಯುತ್ತಮ ಸಾಥ್ ನೀಡುವ ಮೂಲಕ ಸಂಗೀತ ಕಛೇರಿಯ ರಂಗನ್ನು ಹೆಚ್ಚಿಸಿದರು. ವಾದ್ಯಗಳ ನಾದ ಮತ್ತು ಗಾಯನದ ಸಮನ್ವಯವು ಶ್ರೋತೃಗಳಿಗೆ ಹಿತವಾದ ಅನುಭವ ನೀಡಿತು.

**ಶ್ರೀನಿಧಿ ರಾಮಸ್ವಾಮಿ ಅವರ ನೃತ್ಯ ವೈಭವ**

ಗಾಯನದ ನಂತರ ನಡೆದ ಕುಮಾರಿ ಶ್ರೀನಿಧಿ ರಾಮಸ್ವಾಮಿ ಅವರ ಏಕವ್ಯಕ್ತಿ ಭರತನಾಟ್ಯ ಪ್ರದರ್ಶನವು ಸಭೆಯ ಕಣ್ಮಣಿಯಾಯಿತು. ಸಾಂಪ್ರದಾಯಿಕ ನೃತ್ಯ ಪ್ರಕಾರದ ಘನತೆ ಮತ್ತು ಲಾಸ್ಯವನ್ನು ತಮ್ಮ ಅಭಿನಯದ ಮೂಲಕ ಶ್ರೀನಿಧಿಯವರು ತೆರೆದಿಟ್ಟರು. ಅವರ ಹಾವಭಾವಗಳು ಹಾಗೂ ಪಾದಚಲನೆಯು ಶಾಸ್ತ್ರೀಯ ನೃತ್ಯದ ಶಿಸ್ತನ್ನು ಸಾರುತ್ತಿತ್ತು. ರಂಗದ ಮೇಲಿನ ಅವರ ಪ್ರತಿಯೊಂದು ಭಂಗಿಯೂ ಕಲಾಪ್ರೇಮಿಗಳ ಮೆಚ್ಚುಗೆಗೆ ಪಾತ್ರವಾಯಿತು.

ಪರಮ್‌ನಿಂದ 10ನೇ ಆವೃತ್ತಿ ಕಾರ್ಯಕ್ರಮ

ಪರಮ್ ಫೌಂಡೇಶನ್‌ನ ಈ 10ನೇ ಆವೃತ್ತಿಯು ಹೊಸ ತಲೆಮಾರಿನ ಕಲಾವಿದರ ಪ್ರತಿಭೆಯನ್ನು ಅನಾವರಣಗೊಳಿಸುವಲ್ಲಿ ದೊಡ್ಡ ಯಶಸ್ಸು ಕಂಡಿದೆ. ಸಂಜೆ 6 ಗಂಟೆಯಿಂದ ಆರಂಭವಾದ ಈ ಕಾರ್ಯಕ್ರಮಕ್ಕೆ ಬೆಂಗಳೂರಿನ ನಾನಾ ಭಾಗಗಳಿಂದ ಬಂದಿದ್ದ ಸಂಗೀತ ಮತ್ತು ನೃತ್ಯ ಆಸಕ್ತರು ಕಲಾವಿದರನ್ನು ಹುರಿದುಂಬಿಸಿದರು.

# ಒಳ್ಳೆಯ ಕೆಲಸ ಮಾಡುವುದರಿಂದ ಪುಣ್ಯ ಪ್ರಾಪ್ತಿ : ಬಸವರಾಜ ಬೊಮ್ಮಾಯಿ

ಹಾವೇರಿ(ಶಿಗ್ಗಾವಿ) ಕೆರೆ ಅಭಿವೃದ್ಧಿ ಮಾಡುವುದರಿಂದ ರೈತರಿಗೆ ಅನುಕೂಲವಾಗುತ್ತದೆ. ರೈತರಿಗೆ ಒಳ್ಳೆಯದಾದರೆ ಸೃಷ್ಟಿಗೆ ಒಳ್ಳೆಯದಾಗುತ್ತದೆ. ಅದರಿಂದ ಸಮಾಜಕ್ಕೆ, ದೇಶಕ್ಕೆ, ಮನುಕುಲಕ್ಕೆ ಒಳ್ಳೆಯದಾಗುತ್ತದೆ. ದೊಡ್ಡ ಪರೋಪಕಾರಿ ಆಗುವ ವಿಧಾನದಲ್ಲಿ ನಾವೂ ಕಾರಣೀಕರ್ತರಾಗುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದರು.

ಹಾವೇರಿ ಜಿಲ್ಲೆಯ ಶಿಗ್ಗಾಂವ ತಾಲೂಕಿನ ತಡಸ ಗ್ರಾಮದಲ್ಲಿ ಭಾರತ ಸೇವಾ ಸಂಸ್ಥೆ ಏರ್ಪಡಿಸಿದ ಕಂಚಗಾರಗಟ್ಟಿ ಕೆರೆ ಹೂಳೆತ್ತುವ ಕಾಮಗಾರಿಯ ಪ್ರಾರಂಭೋತ್ಸವವನ್ನು ಮಾಡಿ, ಮಾತನಾಡಿದರು. ಕೆರೆ ನಮ್ಮೆಲ್ಲರ ಆಸ್ತಿ. ಕೆರೆಯ ಬಗ್ಗೆ ನಮಗೆಲ್ಲರಿಗೂ ಬಹಳಷ್ಟು ಕಳಕಳಿ ಇರುವುದು ನಮ್ಮ ಕರ್ತವ್ಯ ನೀರು ಯಾರಿಗೆ ಸೇರಿದೆ. ನೀರು ಯಾವುದಾದರೂ ವ್ಯಕ್ತಿಗೆ ಸೇರಿದೆಯೋ, ಯಾವುದಾದರೂ ಗುಂಪಿಗೆ, ರಾಜ್ಯಕ್ಕೆ ದೇಶಕ್ಕೆ ಸೇರಿದೆಯೋ, ನೀರು ಸರ್ಕಾರಕ್ಕೆ ಸೇರಿದ್ದಲ್ಲ. ಒಂದು ರಾಜ್ಯ ಅಥವಾ ಕೇಂದ್ರಕ್ಕೆ ಸೇರಿದ್ದಲ್ಲ. ಇಡೀ ಸಮೂಹ ಸಮಾಜಕ್ಕೆ ಸೇರಿದ್ದು ನೀರು ನಿಸರ್ಗದತ್ತ ಕೊಡುಗೆ, ನಿಸರ್ಗ ಸಮಸ್ತ ಸಮೂಹಕ್ಕೆ ತನ್ನ ಕಾಣಿಕೆ ಕೊಡುತ್ತದೆ. ಹೀಗಾಗಿ ನೀರಿನ ಬಗ್ಗೆ ಅಷ್ಟೇ ಕಳಕಳಿ ಇರಬೇಕು. ಹೇಗೆ ನಮ್ಮ ಮನೆ, ನಮ್ಮ ಹೊಲ ಅನ್ನುವ ಕಳಕಳಿ ಇದೆಯೋ ಅದೇ ರೀತಿ ನಮ್ಮ ಕೆರೆ ಅನ್ನುವ ಕಳಕಳಿ ಬರಬೇಕು. ಅದನ್ನು ಸ್ವಚ್ಛವಾಗಿ ಇಟ್ಟುಕೊಂಡು ಸದುಪಯೋಗ ಮಾಡಿಕೊಳ್ಳಬೇಕು. ಇದನ್ನು ನಾವೆಲ್ಲರೂ ಅರ್ಥ ಮಾಡಿಕೊಂಡರೆ ಎಲ್ಲ ಕರೆಗಳು ಉತ್ತಮ ರೀತಿಯಲ್ಲಿ ಇರುತ್ತವೆ. ಕಾಲಕಾಲಕ್ಕೆ ಹೂಳು ತುಂಬುತ್ತದೆ. ಅದನ್ನು ಕಾಲಕಾಲಕ್ಕೆ ತೆಗೆಯಬೇಕು. ಮನುಷ್ಯನಲ್ಲಿಯೂ ಕಾಲಕಾಲಕ್ಕೆ ಬೇಕಾದ, ಬೇಡಾದ ವಿಚಾರಗಳು ತುಂಬುತ್ತವೆ. ಅವುಗಳನ್ನು ತೆಗೆದು ಹಾಕಬೇಕು ಎಂದು ಹೇಳಿದರು.

ಪವಿತ್ರ ಕೆಲಸ

ಕೆರೆ ಹೂಳು ತೆಗೆಯುವುದು ಪವಿತ್ರ ಕೆಲಸ, ಕೆಲವು ಸರ್ಕಾರಗಳು ಆಸಕ್ತಿ ತೆಗೆದುಕೊಂಡು ಮಾಡುತ್ತವೆ. ನಾವು ಸರ್ಕಾರದಲ್ಲಿ ಇದ್ದಾಗ ನಮ್ಮ ನಾಯಕರಾಗಿರುವ ಯಡಿಯೂರಪ್ಪ ಅವರು ಎಲ್ಲ ಶಾಸಕರಿಗೂ ತಮ್ಮ ಕ್ಷೇತ್ರದಲ್ಲಿ ಐದು ಕೆರೆಗಳನ್ನು ಸ್ವಂತ ಖರ್ಚಿನಲ್ಲಿ ಹೂಳು ತೆಗೆಸಬೇಕು ಅಂತ ಹೇಳಿದರು. ನಾವು ಜನರ ಒತ್ತಾಸೆಯಿಂದ ಐದು ಕೆರೆ ಬದಲು ಐವತ್ತು ಕೆರೆ ಹೂಳು ತೆಗೆಸಿದೆವು. ಅದರಲ್ಲಿ ಬಹಳ ಜನರು ಸಹಾಯ ಮಾಡಿದರು. ಶ್ರೀಕಾಂತ ದುಂಡಿಗೌಡರು ತಮ್ಮ ಭಾರತ ಸೇವಾ ಸಂಸ್ಥೆ ವತಿಯಿಂದ ಹೂಳು ತೆಗೆಸಿದರು. ಪರೋಪಕಾರ ಮಾಡುವ ರುಚಿ ಹತ್ತಿದರೆ ಅದನ್ನು ಬಿಡಲು ಆಗುವುದಿಲ್ಲ. ಒಳ್ಳೆಯ ಕೆಲಸ ಮಾಡುವುದನ್ನು ಪ್ರಾರಂಭಿಸಿ, ಮುಂಜಾನೆ ಚಹಾ ಕುಡಿಯುವ ಮುಂಚೆ ಐದು ನಿಮಿಷ ಪ್ರಾರ್ಥನೆ ಮಾಡಿದರೆ ಅದು ಬಿಡಲು ಆಗುವುದಿಲ್ಲ. ಪರೋಪಕಾರಿಯಾಗಿ ಕೆಲಸ ಮಾಡುವ ಗುಣ ಬೆಳೆಸಿಕೊಳ್ಳಬೇಕು. ಸ್ವಚ್ಛವಾಗಿ ನಮ್ಮ ಮನೆ, ಊರು ಇಟ್ಟುಕೊಳ್ಳುವುದು ಒಳ್ಳೆಯ ಗುಣ ಎಂದರು.



ಭಾರತ ಸೇವಾ ಸಂಸ್ಥೆ ಏಳೆಂಟು ವರ್ಷಗಳಿಂದ ಕೆರೆ ಹೂಳೆತ್ತುವ ಕೆಲಸ ಮಾಡಿದ್ದರು. ಮೂರು ವರ್ಷಗಳಿಂದ ಮಳೆಯಾಗಿದ್ದರಿಂದ ಹೂಳು ತೆಗೆಯಲು ಆಗಿರಲಿಲ್ಲ. ಒಳ್ಳೆಯ ಕೆಲಸ ಮಾಡಲು ರೂಢಿ ಮಾಡಿಕೊಂಡರೆ ಬದುಕಿನಲ್ಲಿ ಒಳ್ಳೆಯ ಸಾಧನೆ. ಯಶಸ್ಸು ಬದುಕಿನ ಒಂದು ಸಣ್ಣ ಭಾಗ. ಸಾಧನೆ ಬಹಳ ದೊಡ್ಡದು. ಯಶಸ್ಸು ಮತ್ತು ಸಾಧನೆಗೆ ಇರುವ ವ್ಯತ್ಯಾಸ, ಯಶಸು ನನ್ನ ಸ್ವಂತಕ್ಕಾಗಿ. ಸಾಧನೆ ನನ್ನ ಯಶಸ್ಸಿನ ಮೂಲಕ ಸಮಾಜಕ್ಕೆ ಬಡವರಿಗೆ ಸಹಾಯ ಮಾಡುವುದು ಅದೇ ಸಾಧನೆ. ಅದಕ್ಕೆ ಸ್ವಾಮಿ ವಿವೇಕಾನಂದರು ಹೇಳಿದ್ದಾರೆ. ಸಾಧಕನಿಗೆ ಸಾವು ಅಂತ್ಯವಲ್ಲ. ಸಾವಿನ ನಂತರವೂ ಬದುಕುವುದು ಸಾಧಕ. ಅಂತಹ ಕೆಲಸ ನಾವು ಮಾಡಬೇಕು. ಕೆರೆ ಅಭಿವೃದ್ಧಿ ಮಾಡುವುದು ರೈತರಿಗೆ ಅನುಕೂಲವಾಗುತ್ತದೆ. ರೈತರಿಗೆ ಒಳ್ಳೆಯದಾದರೆ ಸೃಷ್ಟಿಗೆ ಒಳ್ಳೆಯದಾಗುತ್ತದೆ. ಅದರಿಂದ ಸಮಾಜಕ್ಕೆ ದೇಶಕ್ಕೆ ಒಳ್ಳೆಯದಾಗುತ್ತದೆ. ಅದರಿಂದ ಇಡೀ ಮನುಕುಲಕ್ಕೆ ಒಳ್ಳೆಯದಾಗುತ್ತದೆ. ದೊಡ್ಡ ಪರೋಪಕಾರಿ ಆಗುವ ವಿಧಾನದಲ್ಲಿ ನಾವೂ ಕಾರಣೀಕರ್ತರಾಗಬೇಕು ಇದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ಹೇಳಿದರು.

ವರದಾ ನದಿಯಿಂದ ನೀರು

ವರದಾ ನದಿಯಿಂದ ತಡಸ್ ಕೆರೆಗೆ ನೀರು ತುಂಬಿಸುವ ಕೆಲಸವನ್ನು ಮಾಡಿದ್ದೇವೆ. ಸವಣೂರಿನಲ್ಲಿ ಹಿರೇ ಬೆಂಡಿಗೆರಿವರೆಗೆ ಮಾಡಿದ್ದೇವೆ. ಇದರಿಂದ ನಮಗೆ ಇನ್ನಷ್ಟು ಒಳ್ಳೆಯ ಕೆಲಸ ಮಾಡುವ ಪೇರಣೆ ಆಗಿದೆ. ಹೂಳು ತೆಗೆಯುವುದರಿಂದ ಇನ್ನಷ್ಟು ನೀರು ಹಿಡಿದಿಡಲು ಅನುಕೂಲವಾಗುತ್ತದೆ. ಶಿಗ್ಗಾವಿ ಸವಣೂರಿನಲ್ಲಿ 500 ಕ್ಕೂ ಹೆಚ್ಚು ಕೆರೆಗಳಿವೆ. 180 ಎಕರೆ ವಿಸ್ತಾರದ ಮೋತಿ ತಾಲಾಬ್ ತುಂಬಿಸುವಂತೆ ಜನರ ಬಹಳ ಬೇಡಿಕೆಯಾಗಿತ್ತು ಆ ಕೆಲಸ ಮಾಡಿರುವ ಸಂತೃಪ್ತಿ ಇದೆ. ಹುನಗುಂದ ಕೆರೆ ಪೂರ್ತಿ ಮಾಡಿದೆವು. ಸ್ವಂತ ಖರ್ಚಿನಲ್ಲಿ ರಸ್ತೆ ಮಾಡಿ ಕೆರೆ ಅಭಿವೃದ್ಧಿ ಮಾಡಿದ್ದೇವೆ. ಬೆಳಗಲಿ, ಗಂಜಿಗಟ್ಟಿ, ದುಂಡಸಿ, ಹೊಸೂರು, ಯತ್ನಳ್ಳಿ ಕರೆ ಹೂಳೆತ್ತುವ ಕೆಲಸ ಮಾಡಿದ್ದೇವೆ. ಒಳ್ಳೆಯ ಕೆಲಸಕ್ಕೆ ಎಲ್ಲರೂ ಸಹಕಾರಿ ಮಾಡಿ, ಈ ಕೆಲಸ ಇತರರಿಗೆ ಪ್ರೇರಣೆಯಾಗಲಿ, ಇದರಿಂದ ನಮ್ಮ ತಾಲೂಕು ಅಭಿವೃದ್ಧಿಯಾಗಲು ಅನುಕೂಲವಾಗುತ್ತದೆ. ಒಳ್ಳೆಯ ಕೆಲಸದಿಂದ ತಾಲೂಕು ಉಳಿಯುತ್ತದೆ. ಜನರು ಸಂತೋಷವಾಗಿರಬೇಕೆಂದರೆ ಶಾಸ್ವತ ಕೆಲಸ ಮಾಡಬೇಕು. ಶ್ರೀಕಾಂತ ಅವರು ಕೆರೆಯ ನೀರನ್ನು ಕೆರೆಗೆ ಚೆಲ್ಲಿ ಅನ್ನುವಂತೆ ತಮ್ಮ ದುಡಿಮೆಯ ಸ್ವಲ್ಪ ಭಾಗವನ್ನು ಶಿಗ್ಗಾವಿ ತಾಲೂಕಿನ ಜನರ ಸೇವೆಗೆ ಇಟ್ಟಿದ್ದಾರೆ. ಒಳ್ಳೆಯ ಕೆಲಸ ಮಾಡುವ ಸಮೂಹ ನಮ್ಮ ತಾಲೂಕಿನಲ್ಲಿ ಬಂದು ಇತರ ತಾಲೂಕುಗಳಿಗೆ ಮಾದರಿಯಾಗಲಿ. ನನ್ನ ಮೊದಲ ಪ್ರಾಶಸ್ತ್ರ ರೈತ ನೂರು ಬೇರೆ ಕೆಲಸ ಇದ್ದರೂ ನಾನು ಇಂತಹ ಕೆಲಸಕ್ಕೆ ಯಾವಾಗಲೂ ಬರುತ್ತೇನೆ. ಈ ಕೆಲಸಕ್ಕೆ ಗಂಜಿಗಟ್ಟಿ ಪರಮಪೂಜ್ಯರ ಆಶೀರ್ವಾದ ಇರಲಿ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಶ್ರೀ ಷ.ಬ್ರ ವೈಜಿನಾಥ ಶಿವಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಚರಮೂರ್ತೇಶ್ವರ ಮಠ, ಗಂಜಿಗಟ್ಟಿ ಶ್ರೀ ಗಳು ಸಾನಿಧ್ಯ ವಹಿಸಿದ್ದರು. ಖ್ಯಾತ ಚಲನಚಿತ್ರ ನಟರಾದ ಅನಿರುದ್ಧ ಜೆ, ಭಾರತ ಸೇವಾ ಸಂಸ್ಥೆಯ ಅಧ್ಯಕ್ಷರಾದ ಶ್ರೀಕಾಂತ ದುಂಡಿಗೌಡ್ರ, ಭಾರತೀಯ ಜನತಾ ಪಕ್ಷದ ಶಿಗ್ಗಾಂವ ಮಂಡಳದ ಅಧ್ಯಕ್ಷರಾದ ವಿಶ್ವನಾಥ ಹರವಿ, ಮುಖಂಡರಾದ ಮಹೇಂದ್ರ ಸಿಂಘಿ, ಜಯಣ್ಣ ಅಗಡಿ, ಪ್ರಕಾಶ ದಾಸನೂರ, ಬಿ.ಟಿ ಇನಾಮತಿ, ಶಿವಾನಂದ ಮ್ಯಾಗೇರಿ, ತಿಪ್ಪಣ್ಣ ಸಾತಣ್ಣವರ, ಅರ್ಜುನ ಹಂಚಿನಮನಿ, ವರುಣಗೌಡ ಪಾಟೀಲ್, ಶಿವಾನಂದ ಸೊಬರದ ಸೇರಿದಂತೆ ಹಲವಾರು ಪ್ರಮುಖರು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಚನ್ನಪಟ್ಟಣದಲ್ಲಿ ಶುದ್ಧ ಕುಡಿಯುವ ನೀರು ಮತ್ತು ಸಾರ್ವಜನಿಕ ಸೌಕರ್ಯಗಳಿಗೆ ಬಲ: ಸಂಸದ ಡಾ. ಸಿ.ಎನ್. ಮಂಜುನಾಥ್

ಚನ್ನಪಟ್ಟಣ: ಶುದ್ಧ ಕುಡಿಯುವ ನೀರು ಆರೋಗ್ಯಕರ ಸಮಾಜದ ಮೂಲಾಧಾರವಾಗಿದ್ದು, ಪ್ರತಿಯೊಬ್ಬ ನಾಗರಿಕನಿಗೂ ಇದು ಮೂಲಭೂತ ಹಕ್ಕು ಎಂದು ಸಂಸದ ಡಾ.ಮಂಜುನಾಥ ತಿಳಿಸಿದ್ದಾರೆ.

ತಾಲ್ಲೂಕಿನಲ್ಲಿ ಸಂಸದರ ನಿಧಿ ಹಾಗೂ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಎಸ್.ಆರ್.) ಯೋಜನೆಯಡಿ, ಆರ್‌ಎಕ್ಸ್‌ಡಿಎಕ್ಸ್ (RXDX) ಮತ್ತು ಪೀಪಲ್ ಟು ಪೀಪಲ್ ಟ್ರಸ್ಟ್ ವತಿಯಿಂದ ಕೈಗೊಳ್ಳಲಾದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ಯೋಜನೆಗಳು ಗ್ರಾಮಗಳ ಅಭಿವೃದ್ಧಿಗೆ ಬಲ ತುಂಬುತ್ತವೆ. ಅದೇ ರೀತಿ ಬಸ್ ತಂಗುದಾಣಗಳು ಜನರ ಸಂಚಾರಕ್ಕೆ ಅನುಕೂಲ ಒದಗಿಸಿ, ದಿನನಿತ್ಯದ ಜೀವನವನ್ನು ಸುಗಮಗೊಳಿಸುತ್ತವೆ," ಎಂದು ಅಭಿಪ್ರಾಯಪಟ್ಟರು.

ಉದ್ಘಾಟನೆಗೊಂಡ ಕಾಮಗಾರಿಗಳು:

ಶುದ್ಧ ಕುಡಿಯುವ ನೀರಿನ ಘಟಕ

ಸ್ಥಳ: ರಾಮನರಸಿಂಹರಾಜಪುರ ಗ್ರಾಮ, ಮಾಕಳಿ ಗ್ರಾಮ ಪಂಚಾಯಿತಿ

ಶುದ್ಧ ಕುಡಿಯುವ ನೀರಿನ ಘಟಕ

ಸ್ಥಳ: ಶೀರಗುಡ್ಡ ಗ್ರಾಮ, ದಶವಾರ ಗ್ರಾಮ ಪಂಚಾಯಿತಿ.

ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಬಸ್ ತಂಗುದಾಣ

ಸ್ಥಳ: ರಾಂಪುರ ಗ್ರಾಮ, ರಾಂಪುರ ಗ್ರಾಮ ಪಂಚಾಯಿತಿ.

ಶುದ್ಧ ಕುಡಿಯುವ ನೀರಿನ ಘಟಕ

ಸ್ಥಳ: ಕೂಡೂರು ಗ್ರಾಮ, ಕೂಡೂರು ಗ್ರಾಮ ಪಂಚಾಯಿತಿ.

ಶುದ್ಧ ಕುಡಿಯುವ ನೀರಿನ ಘಟಕ

ಸ್ಥಳ: ಸಂತೆಮೊಗೇನಹಳ್ಳಿದೊಡ್ಡಿ ಗ್ರಾಮ, ಕೂಡೂರು ಗ್ರಾಮ ಪಂಚಾಯಿತಿ.




ಬಸ್ ತಂಗುದಾಣ

ಸ್ಥಳ: ಸುಳ್ಳೇರಿ ಗ್ರಾಮ, ಸುಳ್ಳೇರಿ ಗ್ರಾಮ ಪಂಚಾಯಿತಿ.

ಶುದ್ಧ ಕುಡಿಯುವ ನೀರಿನ ಘಟಕ

ಸ್ಥಳ: ಎ.ವಿ.ಹಳ್ಳಿ ಗ್ರಾಮ, ಸುಳ್ಳೇರಿ ಗ್ರಾಮ ಪಂಚಾಯಿತಿ.

ಈ ಸಂದರ್ಭದಲ್ಲಿ ಡಾ. ಸುನಿತಾ ಮಹೇಶ್ವರಿ (ಟ್ರಸ್ಟಿ), ಡಾ. ಅರ್ಜುನ್ ಕಲ್ಯಾಣಪುರ್ (ಟ್ರಸ್ಟಿ), ದೀಪಿಕಾ ಬೇಡಿ (ಜನಸಂಪರ್ಕ ಮತ್ತು ಸಂಸ್ಕೃತಿ ವಿಭಾಗದ ಮುಖ್ಯಸ್ಥೆ), ಅಶ್ವಿನಿ ಸಿನ್ಹಾ (ಮುಖ್ಯ ಪರಿಣಾಮಾಧಿಕಾರಿ), ಧನಲಕ್ಷ್ಮಿ (ಗೌರವ ಅತಿಥಿ, ಬೆಯರ್ ಸಂಸ್ಥೆ), ವನಿಶ್ರೀ (ಹಣಕಾಸು ಮತ್ತು ಯೋಜನಾ ಸಂಯೋಜಕಿ), ಸುಮಾ (ಕಾರ್ಯಾಚರಣೆ ವ್ಯವಸ್ಥಾಪಕಿ), ಅನಿಂದಿತಾ ಚೌಧುರಿ (ಸಂಪರ್ಕ ವ್ಯವಸ್ಥಾಪಕಿ), ಸುರೇಶ್ ಕುಮಾರ್ (ಸಹಾಯಕ ವ್ಯವಸ್ಥಾಪಕ  ಬ್ರಾಂಡಿಂಗ್), ಜೆಡಿಎಸ್ ಜಿಲ್ಲಾಧ್ಯಕ್ಷರಾದ ಶ್ರೀ ಜಯಮುತ್ತು ಅವರು, ಬಿಜೆಪಿ ಜಿಲ್ಲಾಧ್ಯಕ್ಷರಾದ ಶ್ರೀ ಆನಂದಸ್ವಾಮಿ ಅವರು, ಜೆಡಿಎಸ್ ತಾಲೂಕು ಘಟಕದ ಅಧ್ಯಕ್ಷರಾದ ಶ್ರೀ ನಾಗರಾಜ್ ಅವರು ಹಾಗೂ ಎನ್‌ಡಿಎ ಪಕ್ಷದ ಎಲ್ಲಾ ಮುಖಂಡರು ಉಪಸ್ಥಿತರಿದ್ದರು.ಕಾರ್ಯಕ್ರಮವು ಸಾರ್ವಜನಿಕರ ಭಾಗವಹಿಸುವಿಕೆಯಿಂದ ಯಶಸ್ವಿಯಾಗಿ ನೆರವೇರಿತು.

# ಅಭಿಜಿತ್ ಬೆಂಗೇರಿ ಫೌಂಡೇಷನ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ




ಬೆಂಗಳೂರು : ಅಭಿಜಿತ್ ಬೆಂಗೇರಿ ಫೌಂಡೇಷನ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಸಾಯಿ ಸಂಗಮ ಮಲ್ಟಿ ಸ್ಪೆಸಿಯಾಲಿಟಿ ಹಾಸ್ಪಿಟಲ್, 7ನೇ ಬ್ಲಾಕ್ ಬೆಂಗಳೂರಲ್ಲಿ ಆಯೋಜಿಸಲಾಗಿತ್ತು. ಇದರಲ್ಲಿ ಬಡಾವಣೆಯ ಜನರಿಗೆ ಉಚಿತ ಆರೋಗ್ಯ ತಪಾಸಣೆಯನ್ನು ಡಾಕ್ಟರ್. ವೀರೇಶ್ ಅವರ ನೇತೃತ್ವದಲ್ಲಿ ಆಯೋಜಿಸಲಾಗಿತ್ತು. ಇದರ ಉಪಯೋಗವನ್ನು 60 ಹಿರಿಯ ಹಾಗೂ ಕಿರಿಯ ಬಡಾವಣೆಯ ಜನರು ಪಡೆದರು.

ಸಭೆಯಲ್ಲಿ ಅತಿಥಿಗಳಾಗಿ ಶಿವಕುಮಾರ್ ಎಸ್.ವಿ, ಮಾಲೀಕರು, ಸಾಯಿ ಸಂಗಮ ಮಲ್ಟಿ ಸ್ಪೆಸಿಯಾಲಿಟಿ ಹಾಸ್ಪಿಟಲ್, ಗುರುರಾಜ ಕುಲಕರ್ಣಿ, ಹಿರಿಯ ಕ್ರೀಡಾ ಪಟುಗಳು, ಲಕ್ಷ್ಮಿಕಾಂತ್, ಕಾರ್ಪೊರೇಟರ್ ಭಾಗವಿಸಿದ್ದರು.

ಕಾರ್ಯಕ್ರವನ್ನು ಅಭಿಜಿತ್ ಬೆಂಗೇರಿ ಅಧ್ಯಕ್ಷರು, ನಿರೂಪಿಸಿದರು, ಶ್ರೀಮತಿ ವಿಮರ್ಶಾ ಕಾರ್ಯದರ್ಶಿ ವಂದನಾರ್ಪಣೆ ಸಲ್ಲಿಸಿದರು.

# ಬೆಂಗಳೂರಲ್ಲಿ ಲ್ಯಾಂಬೋರ್ಗಿನಿ ಡ್ರಿಫ್ಟಿಂಗ್: ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಕಾರು ಸೀಜ್..!

ಬೆಂಗಳೂರು: ಸಿಲಿಕಾನ್ ಸಿಟಿಯ ಅನಿಲ್ ಕುಂಬ್ಳೆ ಸರ್ಕಲ್‌ನಲ್ಲಿ ಐಷಾರಾಮಿ ಲ್ಯಾಂಬೋರ್ಗಿನಿ ಕಾರೊಂದನ್ನು ಅಪಾಯಕಾರಿಯಾಗಿ ಡ್ರಿಫ್ಟಿಂಗ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಬ್ಬನ್ ಪಾರ್ಕ್ ಸಂಚಾರಿ ಪೊಲೀಸರು ಕಠಿಣ ಕ್ರಮ ಕೈಗೊಂಡಿದ್ದಾರೆ. ಈ ಕೃತ್ಯದಲ್ಲಿ



ಭೂಗತ ಲೋಕದ ಮಾಜಿ ಡಾನ್ ಮುತ್ತಪ್ಪ ರೈ ಅವರ ಪುತ್ರ ರಿಕ್ಕಿ ರೈ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ಅವರ ಐಷಾರಾಮಿ ಕಾರನ್ನು ವಶಕ್ಕೆ ಪಡೆದಿದ್ದಾರೆ.ಒಚಿಠಿ

ಕಳೆದ ಕೆಲವು ದಿನಗಳ ಹಿಂದೆ ತಡರಾತ್ರಿ ಅನಿಲ್ ಕುಂಬ್ಳೆ ಸರ್ಕಲ್‌ನಲ್ಲಿ ಲ್ಯಾಂಬೋರ್ಗಿನಿ ಕಾರೊಂದು ಅತ್ಯಂತ ವೇಗವಾಗಿ ಬಂದು, ವೃತ್ತಾಕಾರವಾಗಿ ಸರಣಿ ಡ್ರಿಫ್ಟಿಂಗ್ ಮಾಡಿತ್ತು. ಜನನಿಬಿಡ ರಸ್ತೆಯಲ್ಲಿ ಸುಮಾರು ಎರಡರಿಂದ ಮೂರು ಬಾರಿ ಕಾರನ್ನು ರಸ್ತೆಯ ಮೇಲೆ ತಿರುಗಿಸಿ ಡ್ರಿಫ್ಟಿಂಗ್ ಮಾಡಲಾಗಿತ್ತು. ಈ ವೇಳೆ ಕಾರಿನ ಟೈರ್‌ಗಳಿಂದ ಹೊಗೆ ಏಳುತ್ತಿದ್ದುದು ಮತ್ತು ಭಯಾನಕ ಶಬ್ದ ಬರುತ್ತಿದ್ದುದು ರಸ್ತೆಯಲ್ಲಿದ್ದ ಇತರ ವಾಹನ ಸವಾರರಲ್ಲಿ ಆತಂಕ ಮೂಡಿಸಿತ್ತು. ಈ ಭೀಕರ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆಯೇ ಎಚ್ಚೆತ್ತ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಘಟನೆ ನಡೆದ ಸ್ಥಳದ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಕಲೆಹಾಕಿರುವ ಕಬ್ಬನ್ ಪಾರ್ಕ್ ಸಂಚಾರಿ ಠಾಣೆ ಪೊಲೀಸರು, ಕಾರಿನ ನೋಂದಣಿ ಸಂಖ್ಯೆಯನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ಕಾರ್ಯಾಚರಣೆ ನಡೆಸಿದ ಪೊಲೀಸರು ತಕ್ಷಣವೇ ಲ್ಯಾಂಬೋರ್ಗಿನಿ ಕಾರನ್ನು ಪತ್ತೆಹಚ್ಚಿ ಸೀಜ್ ಮಾಡಿದ್ದಾರೆ. ಸದ್ಯ ಕಾರು ಪೊಲೀಸ್ ವಶದಲ್ಲಿದ್ದು, ವಾಹನದ ಅಧಿಕೃತ ದಾಖಲೆಗಳು ಯಾರ ಹೆಸರಿನಲ್ಲಿವೆ ಎಂಬ ಬಗ್ಗೆ ಮಾಹಿತಿ ನೀಡುವಂತೆ ಆರ್‌ಟಿಒ (RTO) ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಪ್ರಾಥಮಿಕ ತನಿಖೆಯ ಪ್ರಕಾರ, ಕಾರನ್ನು ರಿಕ್ಕಿ ರೈ ಅವರೇ ಚಾಲನೆ ಮಾಡುತ್ತಿದ್ದರು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ರಿಕ್ಕಿ ರೈಗೆ ಅಧಿಕೃತ ನೋಟಿಸ್ ಜಾರಿ ಮಾಡಿದ್ದು, ತಕ್ಷಣವೇ ವಿಚಾರಣೆಗೆ ಹಾಜರಾಗುವಂತೆ ಸೂಚನೆ ನೀಡಿದ್ದಾರೆ. ಸಾರ್ವಜನಿಕ ರಸ್ತೆಯಲ್ಲಿ ಬೇಜವಾಬ್ದಾರಿಯಿಂದ ವಾಹನ ಚಾಲನೆ ಮಾಡಿ ಇತರರ ಪ್ರಾಣಕ್ಕೆ ಅಪಾಯ ತಂದೊಡ್ಡಿದ ಆರೋಪದಡಿ ಅವರ ವಿರುದ್ಧ ಎಫ್‌ಐಆರ್ ದಾಖಲಾಗುವ ಸಾಧ್ಯತೆಯಿದೆ.

# ಸಮರ್ಥ್ ಮಲ್ಲಿಕಾರ್ಜುನ್, ಉಮೇಶ್ ಮೇಟಿಗೆ 'ಕೈ' ಟಿಕೆಟ್ ಘೋಷಣೆ

1ನೇ ಪುಟದಿಂದ

ಮಾಡಿದ್ದರು. ಅನಂತರ ಅವರ ಪುತ್ರ ಎಸ್.ಎಸ್.ಮಲ್ಲಿಕಾರ್ಜುನ್ ಕೂಡ ಶಾಸಕರಾಗಿ, ಸಚಿವರಾಗಿ ಕೆಲಸ ಮಾಡುತ್ತಿದ್ದಾರೆ. ಮಲ್ಲಿಕಾರ್ಜುನ್ ಅವರ ಪತ್ನಿ ಡಾ.ಪ್ರಭಾ ಮಲ್ಲಿಕಾರ್ಜುನ್ ಕಳೆದ ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿದ್ದಾರೆ. ಈಗ ಮೂರನೇ ತಲೆಮಾರಾಗಿರುವ ಸಮರ್ಥ್‌ಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಲಾಗಿದೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಎಚ್.ವೈ.ಮೇಟಿ ಅವರ ಪುತ್ರ ಉಮೇಶ್ ಮೇಟಿಗೆ ಟಿಕೆಟ್ ನೀಡಲಾಗಿದೆ. ಬಾಗಲಕೋಟೆ ಕ್ಷೇತ್ರದಿಂದ ಸ್ಪರ್ಧಿಸಲು ಮೇಟಿ ಅವರ ಪುತ್ರಿ ಬಾಯಕ್ಕ ಹಾಗೂ ಉಮಾದೇವಿ ಅಕಾಂಕ್ಷಿಗಳಾಗಿದ್ದರು. ಮತ್ತೊಬ್ಬ ಪುತ್ರ ಮಲ್ಲಿಕಾರ್ಜುನ್ ಕೂಡ ಟಿಕೆಟ್ ಕೇಳಿದ್ದರು. ಹೆಣ್ಣು ಮಕ್ಕಳಿಗೆ ಟಿಕೆಟ್ ನೀಡುವುದರಿಂದ ಮೇಟಿ ಅವರ ಕುಟುಂಬದ

ಪರಂಪರೆ ಮುಂದುವರೆಯುವುದಿಲ್ಲ ಎಂಬ ವ್ಯಾಖ್ಯಾನ ಕುಟುಂಬದ ಸದಸ್ಯರಲ್ಲೇ ವ್ಯಕ್ತವಾಗಿತ್ತು.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ತಮ ಕಚೇರಿಯಲ್ಲಿ ಕುಟುಂಬದ ಸದಸ್ಯರ ಜೊತೆ ಚರ್ಚೆ ಮಾಡಿ ಸಂಧಾನ ನಡೆಸಿದರು. ಬಾಗಲಕೋಟೆಯಲ್ಲಿ ಮೇಟಿಯವರ ಕುಟುಂಬ ಹೊರತಾಗಿ ಟಿಕೆಟ್ ನೀಡಬೇಕು ಎಂಬ ಆಗ್ರಹಗಳು ಕೇಳಿ ಬಂದಿದ್ದವು. ಆದರೆ ಅಂತಿಮವಾಗಿ ಕಾಂಗ್ರೆಸ್ ಹೈಕಮಾಂಡ್ ಮೇಟಿ ಅವರ ಕುಟುಂಬಕ್ಕೆ ಮಣೆ ಹಾಕಿದೆ.

ಉಪಚುನಾವಣೆಗೆ ನಾಮಪತ್ರ ಸಲ್ಲಿಸಲು ಮಾರ್ಚ್ 16 ರಿಂದ ಅಧಿಸೂಚನೆ ಹೊರಡಿಸಲಾಗಿತ್ತು. ನಾಳೆ ನಾಮಪತ್ರ ಸಲ್ಲಿಸಲು ಕೊನೆ ದಿನವಾಗಿದೆ. ಈ ಹಿನ್ನೆಲೆಯಲ್ಲಿ ಕೊನೇ ಕ್ಷಣದಲ್ಲಿ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಘೋಷಣೆ ಮಾಡಿದೆ.

# ಉಪಚುನಾವಣೆಗೆ ಒಮ್ಮತದಿಂದ ಅಭ್ಯರ್ಥಿಗಳ ಆಯ್ಕೆ: ಡಿಸಿಎಂ ಡಿ.ಕೆ. ಶಿವಕುಮಾರ್

1ನೇ ಪುಟದಿಂದ

ಅಭಿವೃದ್ಧಿ ಅತ್ಯುತ್ತಮವಾಗಿದೆ. ಬೆಂಗಳೂರು ನಗರ ಯಾವ ರೀತಿ ಇದೆಯೋ ಅದಕ್ಕಿಂತ ಚೆನ್ನಾಗಿ ದಾವಣಗೆರೆಯಿದೆ. ನಾನೇ ಅದನ್ನೆಲ್ಲಾ ಕಣ್ಣಲ್ಲಿ ನೋಡಿದ್ದೇನೆ. ಕುಡಿಯುವ ನೀರು, ಬಡವರಿಗೆ ಮನೆ ನೀಡಿದ್ದಾರೆ. ವಿದ್ಯಾಸಂಸ್ಥೆಗಳನ್ನು ಕಟ್ಟಿ ಬೆಳೆಸಿದ್ದಾರೆ. ಕಳೆದ 40 ವರ್ಷಗಳಿಂದ ಸೇವೆ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಶಾಮನೂರು ಅವರ ಕುಟುಂಬ ಮೊದಲಿನಿಂದಲೂ ನಿಂತಿದೆ" ಎಂದರು.

ಶಿವಶಂಕರಪ್ಪ ಅವರು ನನ್ನ ನಂತರ ಮುಸ್ಲಿಂ ಸಮುದಾಯಕ್ಕೆ ಟಿಕೆಟ್ ನೀಡುತ್ತೇವೆ ಎಂದು ಹೇಳಿದ್ದರು. ಆ ಮಾತಿನಂತೆ ನಡೆದುಕೊಳ್ಳುತ್ತಿಲ್ಲ ಎನ್ನುವ ಅಸಮಾಧಾನದ ಬಗ್ಗೆ ಕೇಳಿದಾಗ, "ಅಸಮಾಧಾನ ನಿಮ್ಮ ಬಳಿ ಹೇಳಿರಬಹುದು. ನಮ್ಮ ಬಳಿ ಹೇಳಿಲ್ಲ. ಅದಕ್ಕೆ ನಾವು ಮೂರು ಬಾರಿ ಜಬ್ಬಾರ್ ಅವರನ್ನು ಎಂಎಲ್ ಸಿ ಮಾಡಿರುವುದು. ಜಬ್ಬಾರ್ ಅವರನ್ನು ಇದೇ ಶಿವಶಂಕರಪ್ಪ ಅವರು ಎಸ್.ಎಂ.ಕೃಷ್ಣ ಅವರ ಕಾಲ, ಸಿದ್ದರಾಮಯ್ಯ ಅವರ ಕಾಲದಲ್ಲೂ ಎಂಎಲ್ ಸಿ ಮಾಡಿದ್ದಾರೆ. ಆಗಾಗ್ಗೆ ಪರ್ಯಾಯ ವ್ಯವಸ್ಥೆಗಳನ್ನು ಮಾಡಲಾಗುತ್ತಿರುತ್ತದೆ. ಪರಿಷತ್ ಸ್ಥಾನವನ್ನು ಮಾನೆ ಅವರ ಬದಲಿಗೆ ಧಾರವಾಡದಿಂದ ಸಲೀಂ ಅವರಿಗೆ ನೀಡಿದೆವು. ಬೋಸ್ ಅವರಿಗೆ ನೀಡಬೇಕಿತ್ತು. ಅದನ್ನು ಬಿಟ್ಟು ಪರ್ಯಾಯ ವ್ಯವಸ್ಥೆ ಮಾಡಲಿಲ್ಲವೇ? ಕೆಲವು ಸಂದರ್ಭಗಳಲ್ಲಿ ಈ ರೀತಿ ಮಾಡಬೇಕಾಗುತ್ತದೆ" ಎಂದರು.

**ಪ್ರತಿಪಕ್ಷಗಳು ಯಾವ ಚುನಾವಣೆ ಗೆದ್ದಿವೆ**

ಸರ್ಕಾರಕ್ಕೆ ಮೂರು ವರ್ಷಗಳು ತುಂಬಿರುವ ಸಂದರ್ಭದಲ್ಲಿ ಈ ಉಪಚುನಾವಣೆ ಭವಿಷ್ಯದ ದಿಕ್ಸೂಚಿಯೇ ಎಂದು ಕೇಳಿದಾಗ, "ಪ್ರತಿಪಕ್ಷಗಳು ಯಾವ ಚುನಾವಣೆ ಗೆದ್ದಿವೆ. ಅವರ ಸ್ಥಾನಗಳನ್ನು ನಾವು ಗೆದ್ದುಕೊಂಡು ಬಂದಿದ್ದೇವೆ. ಬಸವರಾಜ ಬೊಮ್ಮಾಯಿ ಅವರ ಸ್ಥಾನ, ಕುಮಾರಸ್ವಾಮಿ ಅವರ ಮಗನ ಸ್ಥಾನ ಗೆದ್ದಿದ್ದೇವಲ್ಲ" ಎಂದರು.

**ನೀರಿನ ಬಿಲ್ ಬಡ್ಡಿ ಮನ್ನಾ**

"ಯುಗಾದಿ ಹಬ್ಬದ ಕೊಡುಗೆಯಾಗಿ ಜಲಮಂಡಳಿಯಿಂದ ನೀರಿನ ಬಿಲ್ ಮೇಲಿನ ಬಡ್ಡಿಮನ್ನಾ ಮಾಡಿದ್ದೇವೆ. ಬೆಂಗಳೂರಿನ ಗ್ರಾಹಕರಿಗೆ ಬಹಳ ಅನುಕೂಲವಾಗುತ್ತದೆ. ನಾನು ಬೆಂಗಳೂರು ನಗರದ ಜವಾಬ್ದಾರಿ ತೆಗೆದುಕೊಂಡ ಮೇಲೆ ಕುಡಿಯುವ ನೀರಿನ ವಿಚಾರದಲ್ಲಿ ಎಲ್ಲಾ ರೀತಿಯ ಅನುಕೂಲಗಳನ್ನು ಮಾಡಿಕೊಟ್ಟಿದ್ದೇನೆ. ಕಾವೇರಿ ಐದನೇ ಹಂತ ಪೂರ್ಣಗೊಳಿಸಿ ನೀರು ನೀಡುತ್ತಿದ್ದೇವೆ. ಆರನೇ ಹಂತಕ್ಕೂ ಕ್ಯಾಬಿನೆಟ್ ಅಲ್ಲಿ ಒಪ್ಪಿಗೆ ನೀಡಲಾಗಿದೆ. ಬೆಂಗಳೂರಿಗೆ ಯಾವ ರೀತಿಯಲ್ಲೂ ನೀರಿನ ಸಮಸ್ಯೆ ಇಲ್ಲ. ಆದರೆ ಬಹಳಷ್ಟು ಜನ ಹೊರಗಡೆಯಿಂದ ಬರುತ್ತಿದ್ದಾರೆ. ಅದನ್ನು ನಾವು ತಡೆಯಲು ಆಗುತ್ತಿಲ್ಲ. ಭವಿಷ್ಯದಲ್ಲಿ ಎಲ್ಲಾ ರೀತಿಯ ವ್ಯವಸ್ಥೆ ಮಾಡಿಕೊಳ್ಳಲು ಸಿದ್ಧರಾಗಿದ್ದೇವೆ" ಎಂದರು.

# ಶ್ರೀರಾಮನವಮಿಯ ನಿಮಿತ್ತ ಸನಾತನ ಸಂಸ್ಥೆಯ ವಿಶೇಷ ಲೇಖನ!

ತಿಥಿ :ಚೈತ್ರ ಶುಕ್ಲ ನವಮಿ

**ಇತಿಹಾಸ :** ಶ್ರೀವಿಷ್ಣುವಿನ ಏಳನೆಯ ಅವತಾರನಾದ ಶ್ರೀರಾಮನ ಜನ್ಮ ಪ್ರೀತ್ಯರ್ಥವಾಗಿ ಶ್ರೀರಾಮ ನವಮಿಯನ್ನು ಆಚರಿಸುತ್ತಾರೆ. ಈ ದಿನ ಪುಷ್ಯ ನಕ್ಷತ್ರದಲ್ಲಿ, ಮಧ್ಯಾಹ್ನದಲ್ಲಿ, ಕರ್ಕ ಲಗ್ನದಲ್ಲಿ ಸೂರ್ಯಾದಿ ಐದು ಗ್ರಹಗಳಿದ್ದಾಗ ಅಯೋಧ್ಯೆಯಲ್ಲಿ ಶ್ರೀರಾಮಚಂದ್ರನ ಜನ್ಮವಾಯಿತು.

**ಮಹತ್ವ**

ದೇವತೆಗಳು ಮತ್ತು ಅವತಾರಗಳ ಜನ್ಮತಿಥಿಯಂದು ಭೂಮಿಯ ಮೇಲೆ ಅವರ ತತ್ತ್ವವು ಹೆಚ್ಚು ಪ್ರಮಾಣದಲ್ಲಿ ಕಾರ್ಯನಿರತವಾಗಿರುತ್ತದೆ. ಶ್ರೀರಾಮ ನವಮಿಗೆ ಶ್ರೀರಾಮತತ್ತ್ವವು ಎಂದಿಗಿಂತ 1000 ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಶ್ರೀರಾಮ ನವಮಿಗೆ 'ಶ್ರೀರಾಮ ಜಯ ರಾಮ ಜಯ ಜಯ ರಾಮ ।' ನಾಮಜಪ, ಹಾಗೆಯೇ ಶ್ರೀರಾಮನ ಇತರ ಉಪಾಸನೆಗಳನ್ನು ಭಾವಪೂರ್ಣವಾಗಿ ಮಾಡುವುದರಿಂದ ಶ್ರೀರಾಮತತ್ತ್ವದ ಲಾಭವನ್ನು ಆದಷ್ಟು ಹೆಚ್ಚು ಪಡೆಯಲು ಸಹಾಯವಾಗುತ್ತದೆ.

**ಉತ್ಸವವನ್ನು ಆಚರಿಸುವ ಪದ್ಧತಿ**

ಅನೇಕ ರಾಮ ಮಂದಿರಗಳಲ್ಲಿ ಚೈತ್ರ ಶುಕ್ಲ ಪ್ರತಿಪದೆಯಿಂದ ಒಂಭತ್ತು ದಿನಗಳ ಕಾಲ ಈ ಉತ್ಸವವು ನಡೆಯುತ್ತದೆ. ರಾಮಾಯಣದ ಪಾರಾಯಣ, ಹರಿಕಥೆ ಮತ್ತು ರಾಮನ ಮೂರ್ತಿಗೆ ವಿವಿಧ ಶೃಂಗಾರ ಮುಂತಾದವುಗಳೊಂದಿಗೆ ಈ ಉತ್ಸವವನ್ನು ಆಚರಿಸುತ್ತಾರೆ. ನವಮಿಯಂದು ಮಧ್ಯಾಹ್ನ ರಾಮಜನ್ಮದ ಕೀರ್ತನೆ (ಹರಿಕಥೆ) ಯಾಗುತ್ತದೆ. ಮಧ್ಯಾಹ್ನ ಕುಂಚಿಗೆ (ಮಗುವಿನ ತಲೆಗೆ ಕಟ್ಟುವ ಒಂದು ವಸ್ತ್ರ. ಈ ವಸ್ತ್ರವು ಬೆನ್ನಿನವರೆಗೆ ಇರುತ್ತದೆ.) ಹಾಕಿದ ತೆಂಗಿನಕಾಯಿಯನ್ನು ತೊಟ್ಟಿಲಿನಲ್ಲಿಟ್ಟು ತೂಗುತ್ತಾರೆ. ಭಕ್ತರು ಅದರ ಮೇಲೆ, ಗುಲಾಲು ಮತ್ತು ಹೂವುಗಳನ್ನು ಅರ್ಪಿಸುತ್ತಾರೆ.' (ಕೆಲವು ಕಡೆಗಳಲ್ಲಿ ತೆಂಗಿನ ಕಾಯಿಯ ಬದಲು ಶ್ರೀರಾಮನ ಮೂರ್ತಿಯನ್ನು ತೊಟ್ಟಿಲಿನಲ್ಲಿ ಇಡುತ್ತಾರೆ. ) ಈ ಸಂದರ್ಭದಲ್ಲಿ ಶ್ರೀರಾಮನ ಜನ್ಮದ ಗೀತೆಯನ್ನು ಹೇಳಲಾಗುತ್ತದೆ. ಅದರ ನಂತರ ಶ್ರೀರಾಮನ ಮೂರ್ತಿಯನ್ನು ಪೂಜಿಸುತ್ತಾರೆ ಮತ್ತು ಪ್ರಸಾದವೆಂದು ಶುಂಠಿಚೂರ್ಣವನ್ನು ಕೊಡುತ್ತಾರೆ. ಕೆಲವು ಕಡೆಗಳಲ್ಲಿ ಶುಂಠಿಚೂರ್ಣದೊಂದಿಗೆ ಮಹಾಪ್ರಸಾದವನ್ನೂ ನೀಡುತ್ತಾರೆ.

**ರಾಮನವಮಿಯ ಮಹತ್ವ**

ತ್ರೇತಾಯುಗದಲ್ಲಿ ರಾಮನ ಜನ್ಮವಾದಾಗ ಕಾರ್ಯನಿರತವಾಗಿದ್ದ ಶ್ರೀವಿಷ್ಣುವಿನ ಸಂಕಲ್ಪ, ತ್ರೇತಾಯುಗದಲ್ಲಿನ ಅಯೋಧ್ಯಾವಾಸಿಗಳ ಭಕ್ತಿ ಭಾವ ಮತ್ತು ಪೃಥ್ವಿಯಲ್ಲಿನ ಸಾತ್ತ್ವಿಕ ವಾತಾವರಣದಿಂದಾಗಿ ಪ್ರಭು ಶ್ರೀರಾಮನ ಜನ್ಮದಿಂದ ಶೇ. 100 ರಷ್ಟು ಪರಿಣಾಮವಾಗಿತ್ತು. ಅನಂತರ ಪ್ರತಿವರ್ಷ ಬರುವಂತಹ ಚೈತ್ರ ಶುಕ್ಲ ನವಮಿಗೆ ಬ್ರಹ್ಮಾಂಡದಲ್ಲಿನ ವಾತಾವರಣದಲ್ಲಿ ರಾಮತತ್ತ್ವವು ಪ್ರಕ್ಷೇಪಿಸಿ ವಾತಾವರಣವನ್ನು ಸಾತ್ತ್ವಿಕ ಮತ್ತು ಚೈತನ್ಯಮಯವನ್ನಾಗಿಸಲು ವಿಷ್ಣುಲೋಕದಿಂದ ಶ್ರೀರಾಮತತ್ತ್ವಯುಕ್ತ ವಿಷ್ಣುತತ್ತ್ವವು ಭೂಲೋಕದ ದಿಕ್ಕಿನತ್ತ ಪ್ರಕ್ಷೇಪಿತವಾಗುತ್ತದೆ ಮತ್ತು ಆ ದಿನ ಶ್ರೀರಾಮನ ಅಂಶಾತ್ಮಕ ಜನ್ಮವಾಗುತ್ತದೆ. ಇದರ ಪರಿಣಾಮ ಇಡೀ ವರ್ಷವಿದ್ದು ಬ್ರಹ್ಮಾಂಡದಲ್ಲಿ ರಾಮ ತತ್ತ್ವಯುಕ್ತ ಸಾತ್ತ್ವಿಕತೆ ಮತ್ತು ಚೈತನ್ಯದ ಪ್ರಕ್ಷೇಪಣೆಯಾಗುತ್ತದೆ. ರಾಮ ತತ್ತ್ವಯುಕ್ತ ಸಾತ್ತ್ವಿಕತೆ ಮತ್ತು ಚೈತನ್ಯವನ್ನು ಬ್ರಹ್ಮಾಂಡದಲ್ಲಿನ ಪ್ರತಿಯೊಂದು ಸಜೀವ ಮತ್ತು ನಿರ್ಜೀವ ವಸ್ತುಗಳು ಗ್ರಹಿಸಿಕೊಳ್ಳುತ್ತವೆ ಮತ್ತು ಅದರಿಂದ ಅವುಗಳಿಗೆ ತಮ್ಮ ಕಾರ್ಯವನ್ನು ಒಳ್ಳೆಯ ರೀತಿಯಿಂದ ಮಾಡಲು ಸಾಧ್ಯವಾಗುತ್ತದೆ.




**ರಾಮಭಕ್ತರ ಮಹತ್ವ**

ಶ್ರೀರಾಮನಂತೂ ಶ್ರೇಷ್ಠ ಮತ್ತು ಪೂಜನೀಯನಾಗಿದ್ದನು, ಅಲ್ಲದೆ ಅವನ ಭಕ್ತರೂ ಅಷ್ಟೇ ವಂದನೀಯರಾಗಿದ್ದರು. ಕಲಿಯುಗದಲ್ಲಿ ಶ್ರೀರಾಮನು ಪುನಃ ಅವತಾರ ತಾಳಬಹುದು. ಆದರೆ ಶ್ರೀರಾಮನ ಸೀಮಾತೀತ ಭಕ್ತಿಯನ್ನು ಮಾಡುವಂತಹ ಉಚ್ಚ ಮಟ್ಟದ ಭಕ್ತರು ಸಿಗುವುದು ಕಠಿಣವಾಗಿದೆ. ಸಾಧಕರು ಶ್ರೀರಾಮನ ಭಕ್ತರ ಗುಣಗಳನ್ನು ಅಂಗೀಕರಿಸಿ ಅದಕ್ಕನುಸಾರ ಸಾಧನೆ ಮಾಡಿದರೆ ಅವರ ಮೇಲೆ ಗುರುರೂಪೀ ಶ್ರೀರಾಮನ ಕೃಪೆಯಾಗಿ ಅವರಿಗೆ ಅಂತರ್ಬಾಹ್ಯ ಕ್ಷಾತ್ರಧರ್ಮ ಹೋರಾಟವನ್ನು ಯಶಸ್ವಿಯಾಗಿ ನಡೆಸಲು ಆಗುವುದು ಮತ್ತು ಅವರಲ್ಲಿ ಅಂತರ್ಬಾಹ್ಯ ರಾಮರಾಜ್ಯವು ಖಂಡಿತವಾಗಿಯೂ ಸ್ಥಾಪನೆಯಾಗುವುದು.

**ಆಧಾರ : ಸನಾತನ ನಿರ್ಮಿತ ಗ್ರಂಥ 'ಶ್ರೀರಾಮ'**

**ಸಂಗ್ರಹ : ಶ್ರೀ ವಿನೋದ್ ಕಾಮತ್,**

# ನಿವೃತ್ತ ಐಜಿಪಿ ಚಂದ್ರಶೇಖರ್ ಆತ್ಮಕಥನ ರೀಸನ್ ಪಾಯಿನ್ಸ್ ಫ್ಯಾಶನ್ ಪುಸ್ತಕ ಲೋಕಾರ್ಪಣೆ




ಬೆಂಗಳೂರು, ಮಾ.22: ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡಿದ ಅಧಿಕಾರಿಗಳು ಆಸಕ್ತಿದಾಯಕ ಸಾಹಿತ್ಯ ರಚಿಸಿ ಗಮನ ಸೆಳೆದಿದ್ದು, ಇದು ಸಾಹಿತ್ಯ ಕ್ಷೇತ್ರಕ್ಕೆ ಉತ್ತಮ ಕೊಡುಗೆಯಾಗಿದೆ ಎಂದು ನಿವೃತ್ತ ಐಎಎಸ್ ಅಧಿಕಾರಿ ಚಿರಂಜೀವಿ ಸಿಂಗ್ ಹೇಳಿದ್ದಾರೆ.

ಚಿತ್ರಕಲಾ ಪರಿಷತ್ ನಲ್ಲಿ ಅಭಿರುಚಿ ಪ್ರಕಾಶನ ಮತ್ತು ಕಾಡುಮಲ್ಲೇಶ್ವರ ಗೆಳಯರ ಬಳಗದಿಂದ ನಿವೃತ್ತ ಐಜಿಪಿ ಚಂದ್ರಶೇಖರ್ ಅವರ ಆತ್ಮಕಥೆ ರೀಸನ್ ಪಾಯಿನ್ಸ್ ಫ್ಯಾಶನ್ ಪುಸ್ತಕ ಲೋಕರ್ಪಣೆ ಮಾಡಿ ಮಾತನಾಡಿದ ಅವರು, ಅಧಿಕಾರಿಗಳಾದಿ ಸಾಹಿತ್ಯ ರಚಿಸಿದ ಸಾಲಿಗೆ ಸಿ. ಚಂದ್ರಶೇಖರ್ ಸೇರ್ಪಡೆಯಾಗುತ್ತಾರೆ. ಈ ಕೃತಿ ಅತ್ಯಂತ ಆಸಕ್ತಿದಾಯಕವಾಗಿದ್ದು, ಇವರ ಬರವಣಿಗೆಯಲ್ಲಿ ಸಾಹಿತ್ಯದ ಬೆಳಕಿದೆ ಎಂದರು.

ಸಿ.ಚಂದ್ರಶೇಖರ್ ಮಾತನಾಡಿ, ಇದು ನನ್ನ ಜೀವನದ ಕಥೆ ಅನ್ನುವ ಬದಲು ನಾನು ನೋಡಿದ ವ್ಯಕ್ತಿಗಳು, ಸಮಾಜದಲ್ಲಿ ನಡೆದ ನೈಜ ಘಟನೆಗಳು. ರೈತ ಸಂಘಟನೆ ಹೋರಾಟದ ವಿಷಯಗಳನ್ನು ಒಳಗೊಂಡಿದೆ. ಇದು ತಮ್ಮ ನಾಲ್ಕನೇ ಪುಸ್ತಕವಾಗಿದೆ. 1974ರಲ್ಲಿ ಭೂ ಕಾಯಿದೆ ಬಂದಾಗ ರೈತರ ಬೇಡಿಕೆಗಳಿಗೆ ಸರ್ಕಾರ ಹೇಗೆ ಸ್ಪಂದಿಸಿತು ಎಂಬುದನ್ನು ಪೊಲೀಸ್ ಅಧಿಕಾರಿಯಾಗಿ ಯಾವ ರೀತಿಯಲ್ಲಿ ಮಧ್ಯಸ್ಥಿಕೆ ವಹಿಸಿದೆ ಅನ್ನುವ ವಿವರಗಳು ಇದರಲ್ಲಿವೆ ಎಂದರು.

ರೈತ ಹೋರಾಟಗಾರರಾದ ನಂಜುಂಡಸ್ವಾಮಿ, ಹೆಚ್.ಎಸ್.ರುದ್ರಪ್ಪ, ಸುಂದರೇಶ್, ಕಡಿದಾಳು ಶಾಮಣ್ಣ ಅವರ ಜೊತೆಯಲ್ಲಿ ಉತ್ತಮ ಒಡನಾಟದಿಂದ ರೈತ ಚಳುವಳಿ, ರೈತರಿಗೆ ಸಮಸ್ಯೆಗಳು ಅರ್ಥವಾಯಿತು. ರಾಜ್ಯದ ಎಲ್ಲ ರೈತರ ಸಮಸ್ಯೆಗಳು ಒಂದೇ ಆಗಿರುವುದಿಲ್ಲ. ಇಂದಿನ ಯುವ ಸಮಾಜ ನಮಗಿಂತ ದೊಡ್ಡವರು, ಸಾಧನೆ ಮಾಡಿರುವ ವ್ಯಕ್ತಿಗಳ ಆದರ್ಶಗಳನ್ನು ನಾವು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾಡು ಮಲ್ಲೇಶ್ವರ ಗೆಳಯರ ಬಳಗದ ಅಧ್ಯಕ್ಷ ಬಿ.ಕೆ.ಶಿವರಾಂ ಮಾತನಾಡಿ, ಸಿ. ಚಂದ್ರಶೇಖರ್ ಐಜಿಪಿಯಾಗಿ ಪೊಲೀಸ್ ಇಲಾಖೆಯ ಸಾಂಸ್ಕೃತಿಕ ಪ್ರತಿನಿಧಿಯಾಗಿದ್ದಾರೆ. ಕಾಡು ಮಲ್ಲೇಶ್ವರ ಗೆಳಯರ ಬಳಗ ಕಲೆ, ಸಾಹಿತ್ಯ, ಜನಪದ, ಸಂಗೀತ ಪ್ರೋತ್ಸಾಹ ಮತ್ತು ಕಲಾವಿದರಿಗೆ ಸಹಕಾರ ನೀಡುತ್ತಾ ಬಂದಿದೆ. ಇದನ್ನು ನಿರಂತರವಾಗಿ ಮುಂದುವರೆಸುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಕಾಶಕರಾದ ಅಭಿರುಚಿ ಗಣೇಶ್, ಸುಚಿತ ನಾಗೇಶ್, ಕಾಡು ಮಲ್ಲೇಶ್ವರ ಗೆಳಯರ ಬಳಗದ ಅಧ್ಯಕ್ಷ ಬಿ.ಕೆ.ಶಿವರಾಂ ಮತ್ತಿತರರು ಉಪಸ್ಥಿತರಿದ್ದರು.

# ಭಾವನಾ ರಾಮಣ್ಣ ಮಗಳ ಅದ್ದೂರಿ ನಾಮಕರಣ ಶಾಸ್ತ್ರ

ಸ್ಯಾಂಡಲ್‌ವುಡ್ ನಟಿ ಭಾವನಾ ರಾಮಣ್ಣ ಜೀವನದಲ್ಲಿ ಇದೀಗ ಹೊಸ ಅಧ್ಯಾಯ ಶುರುವಾಗಿದೆ. ಮದುವೆ ಇಲ್ಲ ಆದ್ರೂ ತಾಯಿತನದ ಸೌಭಾಗ್ಯ ಪಡೆದ ಈ ಸ್ಟ್ರಾಂಗ್ ವುಮನ್, ಈಗ ತಮ್ಮ ಮುದ್ದು ಮಗಳಿಗೆ ಅದ್ದೂರಿ ನಾಮಕರಣ ಮಾಡಿಸಿ ಸಂಭ್ರಮಿಸಿದ್ದಾರೆ. ಕ್ಯೂಟ್ ಬೇಬಿಗೆ ಇಟ್ಟಿರುವ ಹೆಸರು ಏನು ಗೊತ್ತಾ? ಈ ಸ್ಟೋರಿ ಕ್ರವಾಳ ಸೆಲೆಬ್ರೇಷನ್ ಅಲ್ಲ ಇದು ಒಬ್ಬ ಮಹಿಳೆಯ ಧೈರ್ಯ, ಸ್ವಾಭಿಮಾನ ಮತ್ತು ತಾಯಿತನದ ಎಮೋಶನಲ್ ಜರ್ನಿ.



ಸ್ಯಾಂಡಲ್‌ವುಡ್‌ನಲ್ಲಿ ಒಮ್ಮೆ ಗ್ಲಾಮರ್, ಟ್ಯಾಲೆಂಟ್ ಮತ್ತು ಪವರ್‌ಫುಲ್ ಪಾತ್ರಗಳ ಮೂಲಕ ಸದ್ದು ಮಾಡಿದ ನಟಿ ಭಾವನಾ ರಾಮಣ್ಣ ಹಲವು ಹಿಟ್ ಸಿನಿಮಾಗಳ ಮೂಲಕ ಕನ್ನಡಿಗರ ಮನ ಗೆದ್ದವರು. ವಿಭಿನ್ನ ಪಾತ್ರಗಳಲ್ಲಿ ಕಾಣಿಸಿಕೊಂಡು ತಮ್ಮದೇ ಗುರುತು ಮೂಡಿಸಿದ ಈ ನಟಿ ಈಗ ರಿಯಲ್ ಲೈಫ್‌ನಲ್ಲಿ ಇನ್ನೊಂದು ಸ್ಪೆಷಲ್ ಪಾತ್ರದಲ್ಲಿ ಮಿಂಚುತ್ತಿದ್ದಾರೆ ಅದು 'ತಾಯಿ' ಎಂಬ ಪಾತ್ರ. ಹೌದು 40ನೇ ವಯಸ್ಸಿನಲ್ಲಿ ಐವಿಎಫ್ ಮೂಲಕ ತಾಯಿಯಾದ ಭಾವನಾ ರಾಮಣ್ಣ ಸಮಾಜದ ರೂಲ್ಸ್‌ಗಿಂತ ತಮ್ಮ ಹೃದಯದ ಮಾತು ಕೇಳಿಕೊಂಡವರು. ಮದುವೆ ಇಲ್ಲದೆ ಸಿಂಗಲ್ ಪೇರೆಂಟ್ ಆಗಿ ತಾಯಿತನವನ್ನು ಸ್ವೀಕರಿಸಿದ ಭಾವನಾ ಅನೇಕ ಮಹಿಳೆಯರಿಗೆ ಪ್ರೇರಣೆಯಾಗಿದ್ದಾರೆ. ಕಳೆದ ವರ್ಷ ಆಗಸ್ಟ್ 20ರಂದು ಜನ್ಮ ನೀಡಿದ ತಮ್ಮ ಮುದ್ದು ಮಗಳಿಗೆ ಈಗ ಬದುಕಿನ ಸಂಪೂರ್ಣ ಪ್ರೀತಿಯನ್ನು ಸುರಿಸುತ್ತಿದ್ದಾರೆ.

ಈಗಿನ ಟ್ರೆಂಡ್‌ಗೆ ತಕ್ಕಂತೆ ಸ್ಟೈಲಿಷ್ ಹೆಸರು ಇಡುವುದನ್ನು ಬಿಟ್ಟು ಭಾವನಾ ತಮ್ಮ ಕುಟುಂಬದ ಪರಂಪರೆಯನ್ನು ಗೌರವಿಸಿ ಮುಂದುವರೆಸಲು ಮಗಳಿಗೆ 'ರುಕ್ಮಿಣಿ' ಎಂದು ಹೆಸರಿಟ್ಟಿದ್ದಾರೆ. ಅಜ್ಜಿಯ ನೆನಪಿಗಾಗಿ ಇಟ್ಟ ಈ ಹೆಸರು ಈಗ ಎಲ್ಲರ ಮನ ಗೆದ್ದಿದೆ. ಕನ್ನಡ ಚಿತ್ರರಂಗಕ್ಕೆ ಹಲವು ವರ್ಷಗಳ ಕಾಲ ತಮ್ಮ ಅಭಿನಯದಿಂದ ಕೊಡುಗೆ ನೀಡಿದ ಭಾವನಾ ಈಗ ಜೀವನದಲ್ಲೂ ಒಂದು ಸ್ಫೂರ್ತಿದಾಯಕ ಪಾತ್ರ ಮಾಡುತ್ತಿದ್ದಾರೆ. ಪರದೆಯ ಮೇಲೆ ನಟಿಯಾಗಿ ಗೆದ್ದವರು ಜೀವನದಲ್ಲೂ ತಾಯಿಯಾಗಿ ಗೆದ್ದಿದ್ದಾರೆ.

# ಮಂಡ್ಯದ ಮಗಳ ಮಿಂಚಿನ ಓಟ: ಇಂಡಿಯನ್ ಓಪನ್‌ನಲ್ಲಿ ವಿಜಯಕುಮಾರಿಗೆ ಬೆಳ್ಳಿ ಪದಕ

ಬೆಂಗಳೂರು: ಛಲವೊಂದಿದ್ದರೆ ಎಂತಹ ಕಷ್ಟಗಳನ್ನೂ ಮೆಟ್ಟಿ ನಿಲ್ಲಬಹುದು ಎಂಬುದಕ್ಕೆ ಮಂಡ್ಯದ ಕ್ರೀಡಾಪಟು ವಿಜಯಕುಮಾರಿ ಜಿ.ಕೆ. ಅವರ ಸಾಧನೆಯೇ ಸಾಕ್ಷಿ. ಮಾರ್ಚ್ 21ರ ಶನಿವಾರ ಕೇರಳದ ತ್ರಿವೇಂಡ್ರಮ್‌ನಲ್ಲಿ ನಡೆದ '7ನೇ ಇಂಡಿಯನ್ ಓಪನ್ 400 ಮೀಟರ್ ಸ್ಪರ್ಧೆ'ಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ವಿಜಯಕುಮಾರಿ ಅವರು 2ನೇ ಸ್ಥಾನ ಪಡೆಯುವ ಮೂಲಕ ಬೆಳ್ಳಿ ಪದಕವನ್ನು ಮುಡಿಗೇರಿಸಿಕೊಂಡು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ಇದಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಕಾಲಿಕ ನೆರವು ಕಾರಣವಾಯಿತು ಎಂಬುದಾಗಿ ವಿಜಯಕುಮಾರಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲೂಕಿನ ಗೌಡೇನಹಳ್ಳಿ ಮೂಲದ ವಿಜಯಕುಮಾರಿ, ಆರ್ಥಿಕ ಮುಗ್ಗಟ್ಟು ಮತ್ತು ಗಾಯದ ಸಮಸ್ಯೆಯಿಂದ ಕ್ರೀಡಾಲೋಕದಿಂದಲೇ ದೂರ ಸರಿಯುವ ನಿರ್ಧಾರಕ್ಕೆ ಬಂದಿದ್ದರು. ಈ ಸಂದರ್ಭದಲ್ಲಿ ಅವರ ನೆರವಿಗೆ ಬಂದಿದ್ದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್. ಇವರ ಕಷ್ಟಕ್ಕೆ ಸ್ಪಂದಿಸಿದ ಡಿಸಿಎಂ ಅವರು ಸರ್ಕಾರದಿಂದ 10 ಲಕ್ಷ ರೂಪಾಯಿ ಪ್ರೋತ್ಸಾಹಧನ ಘೋಷಿಸಿದ್ದರು. ಆ ಪೈಕಿ ಮೊದಲ ಕಂತಿನ 5 ಲಕ್ಷ ರೂಪಾಯಿಗಳನ್ನು ಬಿಬಿಎಂಪಿ ಮೂಲಕ ಈಗಾಗಲೇ ಹಸ್ತಾಂತರಿಸಿದ್ದು, ಇದು ಅವರ ತರಬೇತಿ ಮತ್ತು ಚಿಕಿತ್ಸೆಗೆ ಸಂಜೀವಿನಿಯಾಯಿತು.

**ಕೃತಜ್ಞತೆ ಸಲ್ಲಿಸಿದ ಸಾಧಕಿ:**

ಪದಕ ಗೆದ್ದ ನಂತರ ಮಾತನಾಡಿದ ವಿಜಯಕುಮಾರಿ, "ರಾಷ್ಟ್ರ ಮಟ್ಟದ ಈ ಸ್ಪರ್ಧೆಯಲ್ಲಿ ಎರಡನೇ ಸ್ಥಾನ ಗೆದ್ದಿರುವುದು ಖುಷಿ ತಂದಿದೆ. ನನ್ನ ಸಂಕಷ್ಟದ ಸಮಯದಲ್ಲಿ ಧೈರ್ಯ ತುಂಬಿ ಆರ್ಥಿಕ ಸಹಾಯ ಮಾಡಿದ ಡಿಸಿಎಂ ಡಿ.ಕೆ. ಶಿವಕುಮಾರ್ ಸರ್ ಅವರಿಗೆ ನಾನು ಚಿರಋಣಿ. ಅವರ ಬೆಂಬಲವಿಲ್ಲದಿದ್ದರೆ ಈ ಮಟ್ಟದ ಸಾಧನೆ ಅಸಾಧ್ಯವಾಗಿತ್ತು" ಎಂದು ಭಾವುಕರಾಗಿ ನುಡಿದಿದ್ದಾರೆ.

**ಕಾಮನ್‌ವೆಲ್ತ್, ಏಷ್ಯನ್ ಗೇಮ್ಸ್ ಮುಂದಿನ ಗುರಿ**

ಈಗಾಗಲೇ ಏಕಲವ್ಯ ಮತ್ತು ರಾಜ್ಯೋತ್ಸವ ಪ್ರಶಸ್ತಿಗಳಿಗೆ ಭಾಜನರಾಗಿರುವ ಇವರು, ಮುಂದಿನ ದಿನಗಳಲ್ಲಿ ಕಾಮನ್‌ವೆಲ್ತ್ ಮತ್ತು ಏಷ್ಯನ್ ಗೇಮ್ಸ್‌ಗಳಲ್ಲಿ ಭಾಗವಹಿಸಿ ದೇಶಕ್ಕೆ ಪದಕ ತರುವ ಗುರಿಯನ್ನು ಹೊಂದಿದ್ದಾರೆ.

***ರಾಜ್ಯಕ್ಕೆ ಹೆಮ್ಮೆ ತಂದ ಮಂಡ್ಯದ ಕುವರಿ ವಿಜಯಕುಮಾರಿ ಅವರ ಈ ಸಾಧನೆ ಮಂಡ್ಯ ಜಿಲ್ಲೆ ಮತ್ತು ಇಡೀ ಕರ್ನಾಟಕ ರಾಜ್ಯಕ್ಕೆ ಹೆಮ್ಮೆಯ***



***ವಿಷಯವಾಗಿದೆ. ಅವರ ಕಠಿಣ ಶ್ರಮ, ಛಲ ಮತ್ತು ಸರ್ಕಾರದ ಬೆಂಬಲವು ಇತರ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಲಿದೆ. ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರ ನೆರವು ನಿಜಕ್ಕೂ ಒಬ್ಬ ಕ್ರೀಡಾಪಟುವಿನ ಬೆಳವಣಿಗೆಗೆ ಪೂರಕವಾಗಿದೆ. ಅಲ್ಲದೆ, ವಿಜಯಕುಮಾರಿಯವರ ಮುಂದಿನ ಕ್ರೀಡಾ ಸಾಧನೆಗೆ ಬೆನ್ನುಲುಭಾಗಿ ನಿಲ್ಲುವುದಾಗಿ ಡಿಸಿಎಂ ಹೇಳಿದ್ದಾರೆ. ಮುಂದಿನ ಕ್ರೀಡೆಗಳಿಗೆ ಅಗತ್ಯ ಸಹಕಾರ ನೀಡುವುದಾಗಿಯೂ ಹೇಳಿದ್ದಾರೆ. ಇನ್ನು 5 ಲಕ್ಷ ರೂಪಾಯಿಯನ್ನು ಶೀಘ್ರದಲ್ಲೇ ಅವರಿಗೆ ನೀಡುವುದಲ್ಲದೆ, ಅವರನ್ನು ಕರೆಸಿ ಸನ್ಮಾನಿಸುವುದಾಗಿಯೂ ಹೇಳಿದ್ದಾರೆ. ವಿಜಯಕುಮಾರಿ ಅವರು ಮುಂದಿನ ಕ್ರೀಡಾಕೂಟಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಗಳನ್ನು ಮಾಡಿ ರಾಜ್ಯ ಮತ್ತು ದೇಶದ ಕೀರ್ತಿ ಹೆಚ್ಚಿಸಲಿ***

# ಮುಖ್ಯಮಂತ್ರಿ ಮತ್ತು ಪ್ರಧಾನಿ ಆಗಿ ಮತ್ತೊಂದು ದಾಖಲೆ ಬರೆದ ನರೇಂದ್ರ ಮೋದಿ

ನವದೆಹಲಿ: ಭಾರತೀಯ ರಾಜಕೀಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇನ್ನೊಂದು ಐತಿಹಾಸಿಕ ಮೈಲಿಗಲ್ಲು ಸಾಧಿಸಿದ್ದಾರೆ. ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಿ ಅವರ ಒಟ್ಟು ಅಧಿಕಾರಾವಧಿಯು 8,931 ದಿನಗಳನ್ನು ದಾಟಿದೆ. ಈ ಮೂಲಕ ದೇಶದಲ್ಲಿ ಚುನಾಯಿತ ಸರ್ಕಾರದ ಅತ್ಯಂತ ದೀರ್ಘಾವಧಿಯ ಮುಖ್ಯಸ್ಥ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.



ಈ ಸಾಧನೆಯೊಂದಿಗೆ ಮೋದಿ ಅವರು, ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿ ಪವನ್ ಕುಮಾರ್ ಚಾಮ್ಲಿಂಗ್ ಅವರ 8,930 ದಿನಗಳ ಆಡಳಿತದ ದಾಖಲೆಯನ್ನು ಮೀರಿಸಿದ್ದಾರೆ. ಚಾಮ್ಲಿಂಗ್ ಅವರು ದೀರ್ಘಾವಧಿಯ ಮುಖ್ಯಮಂತ್ರಿಯಾಗಿ ಪ್ರಸಿದ್ಧರಾಗಿದ್ದರು.

ಮೋದಿಯವರ ರಾಜಕೀಯ ಪಯಣವು 2001ರ ಅಕ್ಟೋಬರ್ 7ರಂದು ಆರಂಭವಾಯಿತು. ಆ ದಿನ ಅವರು ಗುಜರಾತ್ ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರು. ನಂತರ 2014ರ ಮೇ 21ರವರೆಗೆ ಸುಮಾರು 13 ವರ್ಷಗಳ ಕಾಲ ರಾಜ್ಯವನ್ನು ಮುನ್ನಡೆಸಿದರು. ಈ ಅವಧಿಯಲ್ಲಿ ಅಭಿವೃದ್ಧಿ, ಕೈಗಾರಿಕಾ ವೃದ್ಧಿ ಮತ್ತು ಆಡಳಿತದ ಹೊಸ ಮಾದರಿಗಳನ್ನು ಪರಿಚಯಿಸಿ, ಗುಜರಾತ್ ರಾಜ್ಯವನ್ನು ದೇಶದ ಪ್ರಮುಖ ಆರ್ಥಿಕ ಕೇಂದ್ರಗಳಲ್ಲಿ ಒಂದಾಗಿ ರೂಪಿಸಿದರು.

ರಾಜ್ಯ ಮಟ್ಟದಲ್ಲಿ ಯಶಸ್ವೀ ಆಡಳಿತ ನಡೆಸಿದ ಬಳಿಕ ಮೋದಿ ಅವರು ರಾಷ್ಟ್ರ ರಾಜಕಾರಣಕ್ಕೆ ಕಾಲಿಟ್ಟರು. 2014ರ ಮೇ 26ರಂದು ಭಾರತದ 14ನೇ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಈ ವೇಳೆ ಅವರು ಲೋಕಸಭೆಯಲ್ಲಿ ಪೂರ್ಣ ಬಹುಮತ ಪಡೆದ ಮೊದಲ ಕಾಂಗ್ರೆಸ್ಸೇತರ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

2019ರಲ್ಲಿ ಮತ್ತೊಮ್ಮೆ ಭರ್ಜರಿ ಜಯ ಸಾಧಿಸಿದ ಮೋದಿ, ಎರಡನೇ ಅವಧಿಗೂ ಪ್ರಧಾನಿಯಾಗಿ ಮುಂದುವರಿದರು. ಬಳಿಕ 2024ರ ಲೋಕಸಭಾ ಚುನಾವಣೆಯಲ್ಲೂ ಜಯಗಳಿಸಿ, ಸತತ ಮೂರನೇ ಬಾರಿ ಪ್ರಧಾನಿಯಾಗಿ ಅಧಿಕಾರಕ್ಕೆ ಮರಳಿದರು. ಇದು ಕಾಂಗ್ರೆಸ್ಸೇತರ ನಾಯಕನಾಗಿ ಅಪರೂಪದ ಸಾಧನೆ ಎಂದು ಪರಿಗಣಿಸಲಾಗಿದೆ.

ಅವರು ಸ್ವಾತಂತ್ರ್ಯದ ನಂತರ ಜನಿಸಿದ ಭಾರತದ ಮೊದಲ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರ ರಾಜಕೀಯ ಜೀವನದಲ್ಲಿ ಹಲವು ದಾಖಲೆಗಳು ಸೇರಿಕೊಂಡಿವೆ. ದೀರ್ಘಾವಧಿಯ ಮುಖ್ಯಮಂತ್ರಿ, ಸತತ ಮೂರು ಬಾರಿ ಪ್ರಧಾನಿಯಾಗಿ ಅಧಿಕಾರ ವಹಿಸಿದ ನಾಯಕ ಎಂದು ಎನಿಸಿಕೊಂಡಿದ್ದಾರೆ.

# ವಿಶ್ವ ರಕ್ಷಣಾ ಆಂದೋಲನ.....

( GLOBAL PROTECTION MOVEMENT......)

ಬದುಕಿರುವ ಮತ್ತು ಈಗಲೂ ಚಟುವಟಿಕೆಯಂದಿರುವ,

ಶಾಂತಿಗಾಗಿ ನೊಬೆಲ್ ಪ್ರಶಸ್ತಿ ಪಡೆದಿರುವ ಎಲ್ಲರಿಗೂ ಒಂದು ಕಳಕಳಿಯ ಮನವಿ...

ಯುದ್ಧ ನಿಲ್ಲಿಸಿ, ಭೂಮಿ ರಕ್ಷಿಸಿ,

ಕದನ ವಿರಾಮ ಘೋಷಿಸಿ...

ಅಮೇರಿಕಾದ ಮಾಜಿ ಅಧ್ಯಕ್ಷ ಬರಾಕ್ ಒಬಾಮ ನೇತೃತ್ವದಲ್ಲಿ ಯೂನಿಯನ್ ಆಫ್ ಅರ್ಥ್ ( Union of Earth ) ಅಥವಾ ಯೂನಿಯನ್ ಆಫ್ ವರ್ಲ್ಡ್ ( Union of world ) ಎಂಬ ಸಂಘಟನೆ ಸ್ಥಾಪಿಸಿ ತಕ್ಷಣ ಕಾರ್ಯೋನ್ಮುಖರಾಗಿ .....

ಈಗ ಅತ್ಯಂತ ತುರ್ತಾಗಿ ವಿಶ್ವಕ್ಕೆ ಮತ್ತೊಂದು ಪ್ರಬಲ ನಾಯಕತ್ವದ ಸಂಸ್ಥೆ ಬೇಕಾಗಿದೆ. ಮೊದಲ ವಿಶ್ವ ಮಹಾ ಯುದ್ಧದ ನಂತರ ರಾಷ್ಟ್ರಗಳ ಸಂಘ ( League of nation ) ಅಸ್ತಿತ್ವಕ್ಕೆ ಬಂದಿತು. ಆದರೂ ಎರಡನೆಯ ಮಹಾಯುದ್ಧ ತಡೆಯಲು ಸಾಧ್ಯವಾಗಲಿಲ್ಲ. ಭೀಕರ ಯುದ್ಧ ನಡೆದೇ ಹೋಯಿತು. ಆ ನಂತರ ವಿಶ್ವಸಂಸ್ಥೆ ( United Nations Organisation ) ಅಸ್ತಿತ್ವಕ್ಕೆ ಬಂದಿತು. ಹಾಗೂ ಹೀಗೂ ಸುಮಾರು 80 ವರ್ಷಗಳಿಂದ ಅಸ್ತಿತ್ವದಲ್ಲಿದ್ದ ವಿಶ್ವಸಂಸ್ಥೆ ಈಗ ಬಹುತೇಕ ನಿರ್ಜೀವವಾಗಿದೆ. ವಿಶ್ವ ಮೂರನೇ ಮಹಾ ಯುದ್ಧದ ಹೊಸ್ತಿಲಲ್ಲಿದೆ. ಸುಮಾರು 25 ದೇಶಗಳು ವಿವಿಧ ಭಾಗಗಳಲ್ಲಿ ನೇರ

ಯುದ್ಧದಲ್ಲಿ ತೊಡಗಿದ್ದರೆ, ಉಳಿದ ಎಲ್ಲಾ ದೇಶಗಳ ಮೇಲೆ, ಜನರ ಜೀವನದ ಮೇಲೆ ಯುದ್ಧ ಪರೋಕ್ಷ ಪರಿಣಾಮ ಬೀರಿ ಆತಂಕಕ್ಕೆ ದೂಡಿದೆ. ಭೂಮಿಯ ಒಟ್ಟು ವಾತಾವರಣ ತೀರಾ ಕಲುಷಿತವಾಗುತ್ತಿದೆ.

ಇದೀಗ ತೀರಾ ತುರ್ತಾಗಿ ಮತ್ತೊಂದು ಸಂಸ್ಥೆಯ ಅಗತ್ಯವಿದೆ. ಅದನ್ನು ಯೋಚಿಸುವ ಮೊದಲು ಕ್ಷಿಪ್ರವಾಗಿ ಯುದ್ಧದ ಕಾರ್ಮೋಡ ಹೋಗಲಾಡಿಸಲು ಎಲ್ಲಾ ದೇಶಗಳ ಪ್ರಮುಖ ಶಾಂತಿಪ್ರಿಯರ ಬಲವಾದ ಸಂಘಟನಾ ಪ್ರಯತ್ನ ಬೇಕಾಗಿದೆ.

ನನಗೆ ತುಂಬಾ ಆಶ್ಚರ್ಯವಾಗುತ್ತಿರುವುದು ಎಲ್ಲಿಗೆ ಹೋದರು ಈಗಲೂ ಜೀವಂತವಿರುವ ನೊಬೆಲ್ ಶಾಂತಿ ಪುರಸ್ಕೃತರು. ಏಕೆಂದರೆ ಅವರಿಗೆ ನೊಬೆಲ್ ಪ್ರಶಸ್ತಿ ದೊರೆತಿರುವುದೇ ವಿಶ್ವದ ಶಾಂತಿಯ ಸ್ಥಾಪನೆಗಾಗಿ. ಅವರೇ ಈ ಸಂದರ್ಭದಲ್ಲಿ ಮೌನವಾದರೆ ಈ ಭೂಮಂಡಲವನ್ನು ಈ ಹುಚ್ಚರಿಂದ ಕಾಪಾಡುವವರು ಯಾರು ? ಮೊದಲಿಗೆ ವಿಶ್ವದ ಈಗ ಬದುಕಿರುವ ಎಲ್ಲಾ ನೊಬೆಲ್ ಶಾಂತಿ ವಿಜೇತರು ಒಂದು ಖಾಸಗಿ ವಿಮಾನವನ್ನು ಬಾಡಿಗೆಗೆ ಪಡೆದು ಯುದ್ಧದಲ್ಲಿ ನೇರವಾಗಿ ಭಾಗವಹಿಸಿರುವ ದೇಶಗಳ ಮುಖ್ಯಸ್ಥರನ್ನು ಭೇಟಿ ಮಾಡಬೇಕು, ಮಾತುಕತೆ ಆರಂಭಿಸಬೇಕು. ಕನಿಷ್ಠ ಆ ನಿಟ್ಟಿನಲ್ಲಿ ಪ್ರಯತ್ನಗಳಾದರು ಸಾಗಲಿ. ಅದರ ಯಶಸ್ಸು, ಅಪಯಶಸ್ಸು ನಂತರ ನಿರ್ಧಾರವಾಗಲಿ. ಆದರೆ ಶಾಂತಿಯ, ಕದನ ವಿರಾಮದ ಮಾತುಕತೆಗಳಂತೂ ಆಗಲೇ ಬೇಕಾಗಿದೆ.

ಹಾಗೆಯೇ ಬೌದ್ಧ ಗುರು ದಲೈಲಾಮ , ಕ್ರೈಸ್ತ ಗುರು ಪೋಪ್, ಇಸ್ಲಾಮಿನ ಪರಮೋಚ್ಚ ಧರ್ಮಗುರು, ಭಾರತ ಮತ್ತು ಏಷ್ಯಾದ ಪ್ರಬಲ ನಾಯಕರು, ಆಫ್ರಿಕಾ ಮತ್ತು ಆಸ್ಟ್ರೇಲಿಯಾದ ಪ್ರಮುಖರು ಮುಂತಾದವರು ಸಹ ತಮ್ಮೆಲ್ಲಾ ಇತರ ಕಾರ್ಯ ಚಟುವಟಿಕೆಗಳನ್ನು ನಿಲ್ಲಿಸಿ ಯುದ್ಧವನ್ನು ಕದನ ವಿರಾಮದವರೆಗೆ ತೆಗೆದುಕೊಂಡು ಹೋಗಲು ಪ್ರಯತ್ನಗಳನ್ನಾದರೂ ಪ್ರಾರಂಭಿಸಬೇಕು. ಅವರ ಮೇಲೆ ತೀವ್ರವಾಗಿ ಒತ್ತಡ ಹೇರಬೇಕಿದೆ.

ಈ ಕ್ರೂರಿ, ಮಾನಸಿಕ ಅಸ್ವಸ್ಥ, ಹುಚ್ಚರ ಸಂತೆಯಲ್ಲಿ ಶಾಂತಿ ಅಷ್ಟು ಸುಲಭವಲ್ಲ. ಎಲ್ಲರನ್ನೂ ಮೆಚ್ಚಿಸಲು ಸಾಧ್ಯವೂ ಇಲ್ಲ. ಆದರೆ ವಿಶ್ವಕ್ಕೊಂದು ಬಲಿಷ್ಠ ಸಂಘಟನೆಯೊಂದು ಬೇಕೇ ಬೇಕಾಗಿದೆ. ಅದು ವಿಶ್ವಸಂಸ್ಥೆಗೆ ಪರ್ಯಾಯವಾಗಬೇಕಿದೆ. ವಿಶ್ವದ ಎಲ್ಲಾ ದೇಶಗಳಲ್ಲಿಯೂ ಬಹುತೇಕ ಸುಪ್ರೀಂಕೋರ್ಟ್ ಮಾದರಿಯ ನ್ಯಾಯಾಲಯ ಅಸ್ತಿತ್ವದಲ್ಲಿದೆ. ಅದೇ ರೀತಿ ಇಡೀ ವಿಶ್ವವೇ ಒಪ್ಪುವ ಒಂದು ಬಲಿಷ್ಠ ನ್ಯಾಯಾಲಯವನ್ನು ಸ್ಥಾಪಿಸಬೇಕಾಗಿದೆ.

ಹೌದು, ಈಗಾಗಲೇ ಅಂತರಾಷ್ಟ್ರೀಯ ನ್ಯಾಯಾಲಯವಿದೆ. ಆದರೆ ಅದು ಸಹ ಸಂಪೂರ್ಣ ವಿಫಲವಾಗಿರುವುದರಿಂದ ಆ ಅನುಭವದ ಆಧಾರದ ಮೇಲೆ ಅದಕ್ಕೆ ಪರ್ಯಾಯವಾಗಿ ಮತ್ತೊಂದು ಬಲಿಷ್ಠ ಮತ್ತು ತಟಸ್ಥ ನ್ಯಾಯಾಧೀಶರ ನ್ಯಾಯಾಲಯವನ್ನು ಸ್ಥಾಪಿಸಬೇಕಾಗಿದೆ.

ಜೊತೆಗೆ ನ್ಯಾಟೋ ಕೂಟ, ವಾರ್ಸಾ ಒಪ್ಪಂದ, ಜಿ ಒಕ್ಕೂಟಗಳು, ವಿವಿಧ ಖಂಡಗಳ ಒಕ್ಕೂಟಗಳು ಸೇರಿ ಆದಷ್ಟು ಬೇಗ ಒಕ್ಕೂಟಗಳ ಒಕ್ಕೂಟ ರಚಿಸಿ ಸಮನ್ವಯ ಸಾಧಿಸಬೇಕಾಗಿದೆ.


ಇನ್ನೂ ಕೆಲವು ದಿನಗಳು ಹೀಗೆ ಪ್ರತಿಯೊಬ್ಬರು ಮೌನವಾಗಿದ್ದು ಯುದ್ಧದಾಹಿ ನಾಯಕರುಗಳ ಟ್ವೀಟ್ಗಳನ್ನು, ನೋಡುತ್ತಾ ಕುಳಿತರೆ ನಮ್ಮ ಬದುಕಿನ ಟ್ವೀಟ್ಗಳೇ ಇರುವುದಿಲ್ಲ.

80 ವರ್ಷಗಳಷ್ಟು ದೀರ್ಘಕಾಲ ವಿಶ್ವಸಂಸ್ಥೆ ಅಸ್ತಿತ್ವದಲ್ಲಿ ಇರುವುದರಿಂದ ಅದಕ್ಕೆ ಕೃತಜ್ಞತೆ ಸಲ್ಲಿಸಿ ವಿದಾಯ ಹೇಳುವ ಸಮಯ ಬಂದಿದೆ. ಏಕೆಂದರೆ ಅದೀಗ ಬಹುತೇಕ ನಿಸ್ತೇಜಿತವಾಗಿದೆ. ಯಾವುದೇ ಸಂಸ್ಥೆ ಪರಿಣಾಮಕಾರಿಯಾಗಿ ಕೆಲಸ ಮಾಡಲು ಕಾಲಕ್ಕೆ ತಕ್ಕಂತೆ ಬದಲಾವಣೆಗಳು ಆಗಬೇಕಾಗುತ್ತದೆ. ಆದರೆ ವಿಶ್ವಸಂಸ್ಥೆಯಲ್ಲಿ ಹೆಚ್ಚಿನ ಬದಲಾವಣೆಗಳಾಗದೆ ಕೆಲವೇ ಬಲಿಷ್ಠ ದೇಶಗಳು ಅದನ್ನು ರಚಿಸಿಕೊಂಡಿದ್ದವು. ವೀಟೋ ಎಂಬ ಸರ್ವಾಧಿಕಾರಿ ಅಧಿಕಾರ ಹೊಂದಿದ್ದವು. ಇದೀಗ ಕಾಲ ಬದಲಾಗಿದೆ, ಪರಿಸ್ಥಿತಿ ಬದಲಾಗಿದೆ, ಜಾಗತಿಕ ವಾತಾವರಣವು ಬದಲಾಗಿದೆ.

ಈಗ ಮತ್ತೊಂದು ಸಂಸ್ಥೆ ಬೇಕೇ ಬೇಕಾಗಿದೆ ಮತ್ತು ಹಿಂದಿನ ಅನುಭವಗಳ ಆಧಾರದ ಮೇಲೆ ಅದಕ್ಕೆ ಹೊಸ ಶಕ್ತಿ, ಹೊಸ ರೂಪ, ಹೊಸತನವನ್ನು ನೀಡಬೇಕಾಗುತ್ತದೆ. ವಿಶ್ವದ ಜನ ಈಗ ನಿಜಕ್ಕೂ ಧ್ವನಿ ಎತ್ತಬೇಕಾಗಿದೆ.

ಇದನ್ನು ಮರೆತು ಗ್ಯಾಸ್ ಸಿಲಿಂಡರ್ ಇಲ್ಲ, ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ಆಗುತ್ತಿದೆ, ಹಣ್ಣು, ತರಕಾರಿ, ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗುತ್ತಿದೆ ಎಂದು ಯೋಚಿಸುತ್ತಾ ಕುಳಿತು, ಅದಕ್ಕೆ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನಾವು ಆಸಕ್ತರಾದರೆ ಕೊನೆಗೆ ನಮ್ಮ ಜೀವವೇ ಉಳಿಯುವುದಿಲ್ಲ. ಈ ಭೂಮಿಯೂ ಉಳಿಯುವುದಿಲ್ಲ. ಆದ್ದರಿಂದ ಇಡೀ ಜಗತ್ತಿನ ಜನ ಈ ನಿಟ್ಟಿನಲ್ಲಿ ಬೇಗ ಯೋಚಿಸಬೇಕಾಗಿದೆ.

ಅದಕ್ಕಾಗಿ ಈ ಸಂದೇಶವನ್ನು ವಿಶ್ವಸಂಸ್ಥೆ ನೋಬೆಲ್ ಪುರಸ್ಕಾರ ಸಮಿತಿ, ನೊಬೆಲ್ ಶಾಂತಿ ಪ್ರಶಸ್ತಿ ಪಡೆದ ಮಹನೀಯರು, ವಿಶ್ವದ ಎಲ್ಲಾ ದೇಶಗಳ ಮುಖ್ಯಸ್ಥರು ಮುಂತಾದವರಿಗೆ ಸಾಮಾಜಿಕ ಜಾಲತಾಣಗಳು, ಮಾಧ್ಯಮಗಳು ಮತ್ತು ಇ-ಮೇಲ್ ಮೂಲಕ ಕಳಿಸಿ ಕೊಡಬೇಕಾಗಿದೆ. ಈಗಲ್ಲದಿದ್ದರೆ ಮತ್ತೆಂದೂ ಸಾಧ್ಯವಿಲ್ಲ ಎಂಬ ಮನೋಭಾವದೊಂದಿಗೆ ಜಗತ್ತಿನ ಪ್ರತಿಯೊಬ್ಬರು ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾದರೆ ಮತ್ತೊಂದು ಮಹಾ ಯುದ್ಧವನ್ನು, ಅಣುಬಾಂಬುಗಳ ಹೊಡೆತವನ್ನು ತಡೆಯಬಹುದು. ಇಲ್ಲದಿದ್ದರೆ ವಿನಾಶಕ್ಕೆ ಅಣಿಯಾಗಬೇಕಾಗುತ್ತದೆ ಎಂದು ಎಚ್ಚರಿಕೆಯ ಮನವಿ ಮಾಡಿಕೊಳ್ಳುತ್ತಾ.......



**ವಿವೇಕಾನಂದ. ಎಚ್. ಕೆ.**
**9663750451..... 9844013068......**

# ಟ್ರಂಪ್ ಎಚ್ಚರಿಕೆ ಬಳಿಕ ಎಫ್-15 ಫೈಟರ್ ಜೆಟ್ ಹೊಡೆದುರುಳಿಸಿದ ಇರಾನ್

ಟೆಹ್ರಾನ್: ಮಧ್ಯಪ್ರಾಚ್ಯದ ಉದ್ವಿಗ್ನ ಪರಿಸ್ಥಿತಿ ದಿನದಿಂದ ದಿನಕ್ಕೆ ತಾರಕಕ್ಕೇರಿದೆ. ಹಾರ್ಮುಜ್ ಜಲಸಂಧಿಯನ್ನು ತೆರೆಯುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ 48 ಗಂಟೆಗಳ ಅಂತಿಮ ಗಡುವು ನೀಡಿದ ಕೆಲವೇ ಗಂಟೆಗಳ ಬಳಿಕ, ಇರಾನ್ ಸೇನೆ ಹಾರ್ಮುಜ್ ದ್ವೀಪದ ಬಳಿ 'ಶತ್ರು' ದೇಶದ ಎಫ್-15 ಫೈಟರ್ ಜೆಟ್ ಅನ್ನು ಹೊಡೆದುರುಳಿಸಿರುವುದಾಗಿ ಇರಾನ್ ಮಾಧ್ಯಮಗಳು ಹೇಳಿಕೊಂಡಿವೆ. ಈ ಕಾರ್ಯಾಚರಣೆಯ 29 ಸೆಕೆಂಡುಗಳ ವಿಡಿಯೋವನ್ನು ಟೆಹ್ರಾನ್ ಟೈಮ್ಸ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬಿಡುಗಡೆ ಮಾಡಿದೆ.

ಇರಾನ್ ಮಾಧ್ಯಮಗಳ ಪ್ರಕಾರ, ದೇಶದ ದಕ್ಷಿಣ ಕರಾವಳಿಯ ಸಮೀಪದ ಹಾರ್ಮುಜ್ ದ್ವೀಪದ ಬಳಿ ಈ ಘಟನೆ ನಡೆದಿದೆ. ಇರಾನ್‌ನ ವಾಯು ರಕ್ಷಣಾ ವ್ಯವಸ್ಥೆಗಳು ಶಂಕಾಸ್ಪದವಾಗಿ ಪ್ರವೇಶಿಸಿದ ಯುದ್ಧ ವಿಮಾನವನ್ನು ಪತ್ತೆಹಚ್ಚಿ ತಕ್ಷಣವೇ ಅದನ್ನು ಹೊಡೆದುರುಳಿಸಿವೆ ಎಂದು ತಿಳಿಸಲಾಗಿದೆ.



ಈ ಬಗ್ಗೆ ವರದಿ ಮಾಡಿದ ಟೆಹ್ರಾನ್ ಟೈಮ್ಸ್, ಸಾಮಾಜಿಕ ಜಾಲತಾಣ ಎಕ್ಸ್ (ಹಿಂದಿನ ಟ್ವಿಟ್ಟರ್) ನಲ್ಲಿ ಸುಮಾರು 29 ಸೆಕೆಂಡುಗಳ ವಿಡಿಯೋವನ್ನೂ ಬಿಡುಗಡೆ ಮಾಡಿದೆ. ಈ ವಿಡಿಯೋದಲ್ಲಿ ಎಫ್-15 ಯುದ್ಧ ವಿಮಾನವನ್ನು ಗುರುತಿಸುವುದು ಮತ್ತು ಅದನ್ನು ಗುರಿಯಾಗಿಸಿ ಹೊಡೆದುರುಳಿಸುವ ದೃಶ್ಯಗಳಿವೆ ಎಂದು ಹೇಳಲಾಗಿದೆ. ಎಫ್-15 ಯುದ್ಧ ವಿಮಾನವು ನಾಲ್ಕನೇ ತಲೆಮಾರಿನ ಅತ್ಯಾಧುನಿಕ ಫೈಟರ್ ಜೆಟ್ ಆಗಿದ್ದು, ಇದು ಸಾಮಾನ್ಯವಾಗಿ ಅಮೆರಿಕ ಸೇನೆ ಅಥವಾ ಇಸ್ರೇಲ್ ರಕ್ಷಣಾ ಪಡೆಗಳ ಬಳಕೆಯಲ್ಲಿದೆ. ಆದರೆ ಈ ಘಟನೆಗೆ ಸಂಬಂಧಿಸಿದಂತೆ ಅದು ಅಮೆರಿಕ ಅಥವಾ ಇಸ್ರೇಲ್ ಗೆ ಸೇರಿದದ್ದೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಈ ಬಗ್ಗೆ ಎರಡೂ ದೇಶಗಳಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಹೊರಬಂದಿಲ್ಲ.

ಡೊನಾಲ್ಡ್ ಟ್ರಂಪ್ ಅವರು ಇರಾನ್‌ಗೆ ಕಠಿಣ ಎಚ್ಚರಿಕೆ ನೀಡಿದ್ದು, 48 ಗಂಟೆಗಳ ಒಳಗೆ ಹಾರ್ಮುಜ್ ಜಲಸಂಧಿಯನ್ನು ತೆರೆಯುವಂತೆ ಸೂಚಿಸಿದ್ದರು. ಇಲ್ಲವಾದರೆ ಪರಿಣಾಮಗಳು ಗಂಭೀರವಾಗಿರಬಹುದು ಎಂದು ಎಚ್ಚರಿಕೆ ನೀಡಿದ್ದರು.

ಟ್ರಂಪ್ ಅವರ ಈ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಇರಾನ್‌ನ ಉನ್ನತಾಧಿಕಾರಿಯೊಬ್ಬರು, "ಹಾರ್ಮುಜ್ ಜಲಸಂಧಿ ಸಂಪೂರ್ಣವಾಗಿ ಮುಚ್ಚಲಾಗಿಲ್ಲ. ಇದು ಕೇವಲ ಶತ್ರು ರಾಷ್ಟ್ರಗಳಿಗೆ ಮಾತ್ರ ನಿರ್ಬಂಧಿತವಾಗಿದೆ" ಎಂದು ಹೇಳಿದ್ದಾರೆ. ಜೊತೆಗೆ, ಸಮುದ್ರ ಭದ್ರತೆ ಕಾಪಾಡಲು ಅಂತರರಾಷ್ಟ್ರೀಯ ಸಂಸ್ಥೆಗಳು ಮತ್ತು ನೆರೆಯ ರಾಷ್ಟ್ರಗಳೊಂದಿಗೆ ಸಹಕಾರ ಮಾಡಲು ಇರಾನ್ ಸಿದ್ಧವಾಗಿದೆ ಎಂದು ಕೂಡ ಹೇಳಿದ್ದಾರೆ. ಈ ಬೆಳವಣಿಗೆಗಳು ಮಧ್ಯಪ್ರಾಚ್ಯದಲ್ಲಿ ಯುದ್ಧದ ಭೀತಿಯನ್ನು ಮತ್ತಷ್ಟು ಹೆಚ್ಚಿಸಿವೆ.

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com